ಸಂಪುಟ: 13 Volume | ಸಂಚಿಕೆ: 267 Issue | ಪುಟಗಳು 08 Pages | ಬುಧವಾರ 10 ಡಿಸೆಂಬರ್ 2025 | ₹6 | PRGINO.120927 (RNINO:KARKAN/2011/48371) | BDR/054/2026-2027 | mallammanudi@gmail.com | www.mallammanudi.in | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ದ್ವೇಷವು ದ್ವೇಷದಿಂದಗೆಲ್ಲುವುದಿಲ್ಲ. ಆದರೆ, ಪ್ರೀತಿಯಿಂದ ಮಾತ್ರ ಗೆಲ್ಲಬಹುದು; ಇದು ಶಾಶ್ವತ ನಿಯಮ.

–ಗೌತಮ ಬುದ್ಧ

# ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಬ್ಯಾಂಕ್ ದರೋಡೆ: ಪೋಲಿಸರಿಂದ ಪರಿಶೀಲನೆ 6
ಸ್ಟ್ರಾಬೇರಿ ಬೆಳೆಯ ಕ್ಷೇತ್ರೋತ್ಸವ ಕಾರ್ಯಕ್ರಮ 7
ವಾಲಿಬಾಲ್: ಮಹಿಳಾ ತಂಡ ಚಾಂಪಿಯನ್ 8

## ಪುತ್ರನಿಗೆ ಸಿದ್ದರಾಮಯ್ಯ ಹಿತೋಪದೇಶ



**ಬೆಳಗಾವಿ:** ಸಿಎಂ–ಡಿಸಿಎಂ ಬ್ರೇಕ್ ಫಾಸ್ಟ್ ಮೀಟಿಂಗ್ ಮುಗಿದು ಕುರ್ಚಿ ಕದನ ತಣ್ಣಗಾಯಿತು ಎಂದು ಅಂದುಕೊಂಡಿರುವಾಗಲೇ ಸಿಎಂ ಸಿದ್ದರಾಮಯ್ಯ ಪುತ್ರ ಡಾ ಯತೀಂದ್ರ ನೀಡಿರುವ ಹೇಳಿಕೆ ಮತ್ತೆ ರಾಜ್ಯ ರಾಜಕೀಯದಲ್ಲಿ ಬೆಳಗಾವಿ ಅಧಿವೇಶನ ಮಧ್ಯೆ ಸಂಚಲನ ಮೂಡಿಸಿದೆ. ಇತ್ತ ಸಿಎಂ ಸಿದ್ದರಾಮಯ್ಯ ಪುತ್ರ ಯತೀಂದ್ರರನ್ನು ಕರೆದು, ಏನಿದ್ದರೂ ಹೈಕಮಾಂಡ್ ತೀರ್ಮಾನ ಮಾಡುತ್ತೆ, ನೀನು ಮಾತನಾಡುವುದು ಬೇಡ. ಯಾರೂ ಮಾತನಾಡಬಾರದು ಎಂದು ಹೈಕಮಾಂಡ್ ಸೂಚನೆ ಇದೆ. ಯಾರೂ ಮಾತನಾಡುತ್ತಿಲ್ಲ ನೀನೊಬ್ಬನೇ ಮಾತನಾಡಿದರೆ ಬೇರೆ ಸಂದೇಶ ಹೋಗುತ್ತೆ ಎಂದು ಕಿವಿಮಾತು ಹೇಳಿರುವುದಾಗಿ ತಿಳಿದು ಬಂದಿದೆ.



ಬಳ್ಳಾರಿ ನಗರದ ಕೆ.ಸಿ ರಸ್ತೆಯ, ಜಿಲ್ಲಾ ಜೆಡಿಎಸ್ ಪಕ್ಷದ ಕಚೇರಿಯಲ್ಲಿ ಜಿಲ್ಲಾ ಅಧ್ಯಕ್ಷ ಮೀನಳ್ಳಿ ತಾಯಣ್ಣ ನವರು ನಮ್ಮ ಮಲ್ಲಮ್ಮ ನುಡಿ ಪತ್ರಿಕೆಯನ್ನು ವೀಕ್ಷಣೆ ಮಾಡುತ್ತಿರುವ ದೃಶ್ಯ.

## ಅತಿ ದೊಡ್ಡ ತ್ರಿವರ್ಣ ಧ್ವಜ ಅನಾವರಣ

**ಬೆಳಗಾವಿ:** ಭಾರತದ ತ್ರಿವರ್ಣ ಧ್ವಜ ಕೇವಲ ಖಾದಿ ವಸ್ತುವಾಗಿರದೇ, ಭಾರತದ ಹೆಮ್ಮೆ ಮತ್ತು ಸ್ವಾಭಿಮಾನದ ಸಂಕೇತ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು. ಇಂದು ಬೆಳಗಾವಿಯ ಸುವರ್ಣ ಸೌಧದ ಪಶ್ಚಿಮ ದಿಕ್ಕಿನ ಮೆಟ್ಟಿಲುಗಳ ಮೇಲೆ ಜಗತ್ತಿನ ಎರಡನೇ ಅತೀ ದೊಡ್ಡ ಖಾದಿ ತ್ರಿವರ್ಣ ಧ್ವಜವನ್ನು ಅನಾವರಣ ಮಾಡಿ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.ಇಂದು ಬೆಳಗಾವಿಯ ಸುವರ್ಣಸೌಧದ ಪಶ್ಚಿಮ ದಿಕ್ಕಿನ ಮೆಟ್ಟಿಲುಗಳ ಮೇಲೆ ಜಗತ್ತಿನ ಎರಡನೇ ಅತಿ ದೊಡ್ಡ ಖಾದಿ ತ್ರಿವರ್ಣ ಧ್ವಜವನ್ನು ಅನಾವರಣಗೊಳಿಸಲಾಗಿದ್ದು, ಇದಕ್ಕೆ ಕಾರಣರಾದ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಅವರಿಗೆ ಮತ್ತು ಕಲಬುರಗಿ ಜಿಲ್ಲೆಯ ಕಮಲಾಪುರದ ವಿನೋದ್ ಕುಮಾರ್ ರೇವಪ್ಪ ಬಮಣ್ಣ ಅವರ ಕುಟುಂಬಸ್ಥರಿಗೂ ಸರ್ಕಾರದಿಂದ ಮುಖ್ಯಮಂತ್ರಿಗಳು ಅಭಿನಂದಿಸಿದರು.

## ಭಾರತದ ಅಕ್ಕಿ ಬೇಡ: ಟ್ರಂಪ್



**ನ್ಯೂಯಾರ್ಕ್:** ಭಾರತವು ಅಮೇರಿಕದ ಮಾರುಕಟ್ಟೆಗೆ ಅಕ್ಕಿಯನ್ನು ತಂದು ಸುರಿಯಬಾರದು ಎಂದು ಅಮೇರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಟ್ರಂಪ್ ಅವರು ಶ್ವೇತಭವನದಲ್ಲಿ ಕೃಷಿ ಮತ್ತು ಕೃಷಿ ವಲಯದ ಪ್ರತಿನಿಧಿಗಳು ಹಾಗೂ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಮತ್ತು ಕೃಷಿ ಕಾರ್ಯದರ್ಶಿ ಬ್ರೂಕ್ ರೋಲಿನ್ಸ್ ಸೇರಿದಂತೆ ಅವರ ಸಂಪುಟದ ಪ್ರಮುಖ ಸದಸ್ಯರೊಂದಿಗೆ ದುಂಡುಮೇಜಿನ ಸಭೆ ನಡೆಸಿದ್ದು, ರೈತರಿಗೆ 12 ಬಿಲಿಯನ್ ಯುಎಸ್ ಡಾಲರ್ ಫೆಡರಲ್ ಸಹಾಯವನ್ನು ಘೋಷಿಸಿದ್ದಾರೆ.

## ಮತ್ತೆ ಟಿಪ್ಪು ಜಯಂತಿ ವಿವಾದ



**ಬೆಳಗಾವಿ:** ಕರ್ನಾಟಕದಲ್ಲಿ ಟಿಪ್ಪು ಜಯಂತಿ ವಿವಾದ ಮತ್ತೆ ಭುಗಿಲೆದ್ದಿದೆ. ಇದಕ್ಕೆ ಬಿಜೆಪಿ ನಾಯಕರು ಕಿಡಿಕಾರಿದ್ದಾರೆ. ಕಾಂಗ್ರೆಸ್ ಶಾಸಕ ಕಾಶಪ್ಪನವರ್ ವಿಧಾನಸಭೆಯ ಕಲಾಪದಲ್ಲಿ ಟಿಪ್ಪು ಜಯಂತಿಯನ್ನು ಮತ್ತೆ ಆರಂಭಿಸುವಂತೆ ಪ್ರಸ್ತಾಪಿಸಲು ನಿರ್ಧರಿಸಿದ್ದಾರೆ.

ಹಿಂದಿನ ಅವಧಿಯಲ್ಲಿ ಮುಖ್ಯಮಂತ್ರಿಯಾಗಿದ್ದಾಗ ಸಿದ್ದರಾಮಯ್ಯನವರು ಈ ಸಂಪ್ರದಾಯವನ್ನು ಪ್ರಾರಂಭಿಸಿದ್ದರು ಮತ್ತು ನಂತರ ಕೊಡಗಿನಲ್ಲಿ ನಡೆದ ಹಿಂಸಾತ್ಮಕ ಪ್ರತಿಭಟನೆ ಸೇರಿದಂತೆ ವ್ಯಾಪಕ ಪ್ರತಿಭಟನೆಗಳ ನಂತರ ಅದಕ್ಕೆ ಬ್ರೇಕ್ ಹಾಕಿದ್ದರು. ಈ ಪ್ರತಿಭಟನೆಯ ನಂತರ, ಟಿಪ್ಪುವಿನ ಜನ್ಮ ದಿನಾಚರಣೆಯನ್ನು ಸರಳವಾಗಿ ಆಚರಿಸಲಾಯಿತು. ಕ್ರಮೇಣ ಅದನ್ನು ಸ್ಥಗಿತಗೊಳಿಸಲಾಯಿತು. ಈಗ ಹುನಗುಂದ ಶಾಸಕ ಕಾಶಪ್ಪನವರ್, ರಾಜ್ಯದಲ್ಲಿ ಟಿಪ್ಪು ಜಯಂತಿ ಆಚರಿಸಬೇಕೆಂದು ಬಯಸಿದ್ದು, ವಿರೋಧ ಪಕ್ಷವಾದ ಬಿಜೆಪಿಯಿಂದ ಬಲವಾದ ಪ್ರತಿಕ್ರಿಯೆ ವ್ಯಕ್ತವಾಗಿದೆ. ಇದನ್ನು ತೀವ್ರವಾಗಿ ಪ್ರತಿಭಟಿಸುವುದಾಗಿ ಹೇಳಿದೆ.

## ಬೀದರ್‌ಗೂ ವಂದೇಮಾತರಂ



**ಬೀದರ್:** ರೈಲ್ವೆ ಮತ್ತು ಮಾಹಿತಿ ತಂತ್ರಜ್ಞಾನ ಸಚಿವರಾದ ಅಶ್ವಿನಿ ವೈಷ್ಣವ ಅವರಿಗೆ ದೆಹಲಿಯಲ್ಲಿ ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಭೇಟಿಯಾಗಿದ್ದಾರೆ. ಬಳಿಕ ಮಾತನಾಡಿ, ಬೀದರ ಜಿಲ್ಲೆಗೆ ಮಂಜೂರಿಯಾಗಿರುವ ಬೀದರ–ನಾಂದೇಡ್ ಹೊಸ ರೈಲ್ವೆ ಲೈನ್‌ಗೆ ರಾಜ್ಯ ಸರ್ಕಾರದಿಂದ ಅನುದಾನ ಪಡೆದುಕೊಳ್ಳುವುದು, ಮಂದಗತಿಯಲ್ಲಿ ಸಾಗುತ್ತಿರುವ ಬೀದರ ರೈಲ್ವೆ ನಿಲ್ದಾಣದ ಅಭಿವೃದ್ಧಿ ಕಾಮಗಾರಿಗೆ ವೇಗ ನೀಡುವುದು ಮತ್ತು ಬೀದರ ನಿಂದ ಬೆಂಗಳೂರಿಗೆ ವಂದೆ ಭಾರತ ರೈಲು ಸೇವೆ ಪ್ರಾರಂಭಿಸಬೇಕೆಂದು ಮನವಿ ಮಾಡಿಕೊಂಡಿದ್ದಾರೆ.

ಬೀದರ – ನಾಂದೇಡ್ ರೈಲ್ವೆ ಲೈನ್ ಕರ್ನಾಟಕ, ಮಹಾರಾಷ್ಟ್ರ ಮತ್ತು ಉತ್ತರ ಭಾರತಕ್ಕೆ ಸಂಪರ್ಕ ಕೊಂಡಿಯಾಗಲಿದೆ. ಬೊಮ್ಮಾಯಿಯವರು ಮುಖ್ಯಮಂತ್ರಿಯಾಗಿದ್ದಾಗ ಬಜೇಟ್‌ನಲ್ಲಿ ಅನುದಾನ ಮೀಸಲಿಟ್ಟಿದ್ದರು, ಆದರೆ ಈ ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಬೊಮ್ಮಾಯಿಯವರು ಮೀಸಲಿಟ್ಟಿದ್ದ ಬಜೇಟ್ ಅನ್ನು ಈ ರೈಲ್ವೆ ಯೋಜನೆಯನ್ನು ಪ್ರಾರಂಭಿಸದೆ, ಮುಳುಗಿಸಲು ಪ್ರಯತ್ನಿಸುತ್ತಿದೆ ಎಂದಿದ್ದಾರೆ.

# ರೈತನ ದನಿಗೆ ಕಾವೇರಿದ ಸದನ

## ನೇಗಿಲ ಯೋಗಿಯ ಪರ ಪ್ರತಿಪಕ್ಷಗಳ ಪ್ರತಿಭಟನೆ | ಸರ್ಕಾರದ ನಿಲುವು ಸಮರ್ಥಿಸಿದ ಸಚಿವರು

• ಮಲ್ಲಮ್ಮ ನುಡಿ ಬೆಳಗಾವಿ

ರೈತಪರ ಹೋರಾಟ, ಪ್ರತಿಪಕ್ಷಗಳ ಕೂಗಾಟ ನಡುವೆ ಕಲಾಪ ತಡವಾಗಿ ಆರಂಭವಾಗಿದ್ದಕ್ಕೆ ವಿಧಾನ ಸಭೆ ವಿರೋಧ ಪಕ್ಷಗಳ ನಾಯಕರು ಮತ್ತು ಶಾಸಕರು ತೀವ್ರ ಅಸಮಾಧಾನಕ್ಕೂ ಕಾರಣವಾಯಿತು. ಮಾತ್ರವಲ್ಲ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡ ಪ್ರಸಂಗ ನಡೆಯಯಿತು. ಬಿಜೆಪಿಯ ಸದಸ್ಯ ಎಸ್.ಸುರೇಶ್ ಕುಮಾರ್, ಯುಟಿ ಖಾದರ್ ಅವರು ಸಭಾಧ್ಯಕ್ಷರಾದ ಬಳಿಕ ಹೊಸ ಸಂಪ್ರದಾಯಗಳು ಜಾರಿಗೆ ಬಂದಿವೆ ಎಂದಿದ್ದಾರೆ.

**ಸರ್ಕಾರದ ವಿರುದ್ಧ ಕಿಡಿ:** ಭ್ರಷ್ಟಾಚಾರ, ಅಧಿಕಾರದ ಕಿತ್ತಾಟದಲ್ಲಿ ಮುಳುಗಿರುವ ಕಾಂಗ್ರೆಸ್ ಸರ್ಕಾರ, ರೈತರ ಹಿತಾಸಕ್ತಿಗಳನ್ನು ಬಲಿ ಕೊಟ್ಟಿದೆ ಎಂದು ಬಿಜೆಪಿ ಕಿಡಿಕಾರಿದೆ.ಸುವರ್ಣ ವಿಧಾನಸೌಧದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ನಾಯಕರು, ಕಬ್ಬು ರೈತರ ಸಮಸ್ಯೆಗಳು ಬಗೆಹರಿಯದೆ ಉಳಿದಿವೆ ಎಂದು ದೂರಿದೆ.

**ಯಾವುದೇ ಪ್ರಯತ್ನವಿಲ್ಲ:** ಮೆಕ್ಕೆಜೋಳ ಬೆಳೆಗಾರರ ಕುಂದುಕೊರತೆಗಳನ್ನು ಕೇಳುವವರೇ ಇಲ್ಲ. ರೈತರು ತಮ್ಮ ಉತ್ಪನ್ನಗಳನ್ನು ಕಡಿಮೆ ಬೆಲೆಗೆ ಮಧ್ಯವರ್ತಿಗಳಿಗೆ ಮಾರಾಟ ಮಾಡುವಂತೆ ಒತ್ತಾಯಿಸಲಾಗುತ್ತಿದೆ. ಹತ್ತಿ, ತೊಗರಿ ಬೇಳೆ ಮತ್ತು ಇತರ ಹಲವಾರು ಬೆಳೆಗಳ ಬೆಲೆ ಕುಸಿದಿದೆ, ಸರ್ಕಾರ ಕಲ್ಯಾಣ ಕರ್ನಾಟಕಕ್ಕೆ ಯಾವುದೇ ಪ್ರಯತ್ನ ಮಾಡುತ್ತಿಲ್ಲ ಎಂದು ಆರೋಪಿಸಿದ್ದಾರೆ.



### ನಿಜವಾದ ಪ್ರತಿ ಪಕ್ಷದ ನಾಯಕ?

ನಾನು ನಿಜವಾದ ವಿರೋಧ ಪಕ್ಷದ ನಾಯಕ, ನನಗೆ ವಿಧಾನಸಭೆಯಲ್ಲಿ ಉಪ ಸಭಾಪತಿಯ ಪಕ್ಕದಲ್ಲಿನ ಕುರ್ಚಿ ನೀಡಿ ಎಂದು ಬಿಜೆಪಿಯಿಂದ ಉಚ್ಚಾಟಿತಗೊಂಡಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆಗ್ರಹಿಸಿದ್ದಾರೆ. ನನಗೆ, ಬಿಜೆಪಿಯಿಂದ ಉಚ್ಚಾಟಿತ ಇಬ್ಬರು ಶಾಸಕರಿಗೆ ಅವರ ಹಿರಿತನವನ್ನು ಪರಿಗಣಿಸಿ ಮುಂದಿನ ಸಾಲಿನಲ್ಲಿ ಕುಳಿತುಕೊಳ್ಳಲು ವ್ಯವಸ್ಥೆ ಮಾಡುವಂತೆ ಸಭಾಪತಿಗೆ ಮನವಿ ಮಾಡಿದ್ದು ಗಮನ ಸೆಳೆದಿದೆ.

### ಮೇಯರ್ ಗೌರವಧನ ಹೆಚ್ಚಳ



ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರ, ಸದಸ್ಯರ ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ ಎಂದು ಸಚಿವ ರಹೀಂ ಖಾನ್ ಸ್ಪಷ್ಟನೆ ನೀಡಿದ್ದಾರೆ. ಸುನೀಲ್ ಗೌಡ ಪಾಟೀಲ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿ, ಪಾಲಿಕೆ ಮೇಯರ್, ಉಪಮೇಯರ್, ಸದಸ್ಯರ ಗೌರವಧನ ಹೆಚ್ಚಿಸುವ ಕುರಿತು ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಸಿ ಕ್ರಮ ಕೈಗೊಳ್ಳಲಾವುದು ಎಂದಿದ್ದಾರೆ.

### ಉ.ಕ. ರೈತರ ಸಮಸ್ಯೆ ಚರ್ಚೆ ಇಂದು

ಪ್ರತಿ ಬುಧವಾರ, ಗುರುವಾರ ನಡೆಯುವ ಇಡೀ ದಿನದ ಕಲಾಪದಲ್ಲಿ ಉ.ಕ ಭಾಗದ ಸಮಸ್ಯೆ ಬಗ್ಗೆ ಗಮನ ಹರಿಸಲಾಗುವುದು. ಶೂನ್ಯ ವೇಳೆ ಬೇರೆ ಯಾವುದಕ್ಕು ಅವಕಾಶ ನೀಡದೇ, ಕೃಷ್ಣಮೇಲ್ದಂಡೆ ಯೋಜನೆ, ಕಳಸಾ ಬಂಡೂರಿ ಯೋಜನೆಗಳ ಅನುಷ್ಠಾನದ ಬಗ್ಗೆ, ಉತ್ತರ ಕರ್ನಾಟಕ ಭಾಗದ ರೈತರ ಸಮಸ್ಯೆ ಬಗ್ಗೆ ಅಂದು ಇಡೀ ದಿನ ಚರ್ಚೆಗೆ ಅವಕಾಶ ನೀಡಲಾಗುವುದು ಎಂದು ಸಭಾಪತಿ ಹೊರಟ್ಟಿ ಸ್ಪಷ್ಟಪಡಿಸಿದ್ದಾರೆ.

### ಕೈಯಲ್ಲಿ ಬೂದಿಮುಚ್ಚಿದ ಕೆಂಡ

ಬೂದಿ ಮುಚ್ಚಿದ ಕೆಂಡದಂತಿರುವ ಕಾಂಗ್ರೆಸ್ ಪಕ್ಷದ ಒಳಬೇಗುದಿ ಎಷ್ಟು ಬ್ರೇಕ್ ಫಾಸ್ಟ್ ಮೀಟಿಂಗ್ ಮಾಡಿಸಿದರೂ ತಣ್ಣಗಾಗುವ ಲಕ್ಷಣಗಳು ಕಾಣುತ್ತಿಲ್ಲ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಭವಿಷ್ಯ ನುಡಿದಿದ್ದಾರೆ. ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಮತ್ತೊಂದು ಕಡೆ ಡಿಸಿಎಂ ಡಿಕೆಶಿ ಅವರು ಸದನಕ್ಕೆ ಗೈರು ಹಾಜರಾಗಿರುವ ಬಗ್ಗೆ ಕಿಡಿಕಾರಿದ್ದಾರೆ.

### ಕ್ವಾಟ್ರು ಬಗ್ಗೆಯೂ ಬಿಸಿ ಬಿಸಿ ಚರ್ಚೆ..!

ಕುಡುಕರು ಜಾಸ್ತಿಯಾಗಿದ್ದು ಬಿಜೆಪಿ ಸರ್ಕಾರದ ಅವಧಿಯಲ್ಲೋ ಅಥವಾ ಕಾಂಗ್ರೆಸ್ ಸರ್ಕಾರದ ಸಮಯದಲ್ಲೋ ಎಂಬ ವಿಚಾರ ವಿಧಾನಸಭೆಯಲ್ಲಿ ಬಿಸಿ ಬಿಸಿ ಚರ್ಚೆಗೆ ಕಾರಣವಾಯ್ತು. ಉ.ಕರ್ನಾಟಕದ ಕುರಿತಾದ ಚರ್ಚೆಯ ವೇಳೆ ಆರ್ ಅಶೋಕ್, ಈ ವಿಚಾರ ಪ್ರಸ್ತಾಪಿಸಿ, ಸಿದ್ದರಾಮಯ್ಯ ಅವರ ಬಾಡಿ ಲ್ಯಾಂಗ್ವೇಜ್ ಬದಲಾವಣೆ ಆಗಿದೆ ಎಂದಿದ್ದಾರೆ.

## ಸದನದ ಗೌರವ ಕಾಪಾಡಿ



**ಬೆಳಗಾವಿ:** ವಿರೋಧ ಪಕ್ಷದವರು ಅಸತ್ಯವನ್ನು ಹೇಳುವುದನ್ನು ಸಾಧ್ಯವಾದಷ್ಟು ನಿಲ್ಲಿಸಿ ವಾಸ್ತವದ ತಳಹದಿಯ ಮೇಲೆ ಟೀಕೆಗಳನ್ನು ಮಾಡಬೇಕು. ಉತ್ತರಗಳನ್ನು ಕೊಡುವಾಗ ದಾರಿತಪ್ಪಿಸದೇ ಸದನದ ಗೌರವವನ್ನು ಎತ್ತಿಹಿಡಿಯುವ ಕೆಲಸ ಮಾಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿನಸಭೆಯಲ್ಲಿ ಕಿವಿಮಾತು ಹೇಳಿದ್ದಾರೆ. ಆರ್. ಅಶೋಕ್ ಅವರು ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಸದನದಲ್ಲಿ ಮಾತನಾಡುವಾಗ ರೈತರಿಗೆ ಸರ್ಕಾರ ಪರಿಹಾರವನ್ನು ನೀಡಿಲ್ಲ, ಕೃಷ್ಣಬೈರೇಗೌಡರು ಪ್ರಕಿಯಿಸಿದ್ದರು. ಈ ನಡುವೆ ಮಧ್ಯೆ ಕೆಲಕಾಲ ಮಾತಿನ ಚಕಮಕಿ ಉಂಟಾದಾಗ ಸಿಎಂ ಮೇಲಿಂತೆ ಹಿತೋಕ್ತಿ ನುಡಿದ್ದಾರೆ.

## ವಿವಿಗೆ ದೀಪಾ ಭಾಸ್ತಿ ಭೇಟಿ



**ಕಲಬುರಗಿ:** ಅಂತಾರಾಷ್ಟ್ರೀಯ ಖ್ಯಾತಿ ಪಡೆದ ಬರಹಗಾರ್ತಿ, ಬೂಕರ್ ಪ್ರಶಸ್ತಿ ಪುರಸ್ಕೃತರಾದ ದೀಪಾ ಭಾಸ್ತಿ ಅವರು ಇಲ್ಲಿನ ಗುಲಬರ್ಗಾ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಗೆ ಭೇಟಿ ನೀಡಿ, ಸಂಸ್ಥೆಯಲ್ಲಿ ಕಲ್ಯಾಣ ಕರ್ನಾಟಕದ ಬರಹಗಾರರ ಗ್ಯಾಲರಿಯನ್ನು ವೀಕ್ಷಿಸಿ ಸಂತಸ ವ್ಯಕ್ತಪಡಿಸಿ, ಶ್ಲಾಘನೆ ವ್ಯಕ್ತಪಡಿಸಿದ್ದಾರೆ. ನಂತರ ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕರು ಮತ್ತು ಕನ್ನಡ ಸ್ನಾತಕ ಅಧ್ಯಯನ ಮಂಡಳಿಯ ಅಧ್ಯಕ್ಷರಾದ ಪ್ರೊ.ಎಚ್.ಟಿ. ಪೋತೆಯವರು ದೀಪಾ ಭಾಸ್ತಿಯವರನ್ನು ಸನ್ಮಾನಿಸಿ ಗೌರವಿಸಿದ್ದಾರೆ.

ಕೇಂದ್ರೀಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ವಿಕ್ರಮ್ ವಿಕ್ರಮ್ ವಿಸಾಜಿ ಸೇರಿ ಇತರರು ಹಾಜರಿದ್ದರು.

## ಬೀದರ್ ಸಕ್ಕರೆ ಕಾರ್ಖಾನೆಗೆ ಟೆಂಡರ್

• ಮಲ್ಲಮ್ಮ ನುಡಿ ಬೆಳಗಾವಿ



ಎನ್‌ಸಿಡಿಸಿ (ರಾಷ್ಟ್ರೀಯ ಸಹಕಾರಿ ಅಭಿವೃದ್ಧಿ ನಿಗಮ) ನೆರವು ಲಭ್ಯವಾಗದಿದ್ದರೆ ಬೀದರ್ ಜಿಲ್ಲೆಯ ಬಿಎಸ್ ಎಸ್ ಕೆ ಸಹಕಾರಿ ಸಕ್ಕರೆ ಕಾರ್ಖಾನೆಯನ್ನು ಎಲ್ ಆರ್ ಓ ಟಿ ಆಧಾರದ ಮೇಲೆ ಖಾಸಗಿಯವರಿಗೆ ದೀರ್ಘಾವಧಿಗೆ ಗುತ್ತಿಗೆ ನೀಡಲು ಮತ್ತೊಮ್ಮೆ ಟೆಂಡರ್ ಕರೆಯಲಾಗುವುದು ಎಂದು ಕಬ್ಬು ಅಭಿವೃದ್ಧಿ, ಸಕ್ಕರೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ.

ವಿಧಾನ ಪರಿಷತ್ತಿನಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಭೀಮರಾವ್ ಬಸವರಾಜ್ ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವ, ಬೀದರ್ ಜಿಲ್ಲೆಯ ಸಹಕಾರ ಸಕ್ಕರೆ ಕಾರ್ಖಾನೆ ಸೇರಿದಂತೆ ರಾಜ್ಯದ ಒಟ್ಟು ಆರು ಸಹಕಾರಿ ಸಕ್ಕರೆ ಕಾರ್ಖಾನೆಗಳಿಗೆ ಎನ್ ಸಿಡಿಸಿ ನೆರವು ಪಡೆಯಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚನೆ ಮಾಡಲಾಗುವುದು. ಎನ್‌ಸಿಡಿಸಿ ನೆರವು ಲಭ್ಯವಾಗದಿದ್ದರೆ ಖಾಸಗಿಯವರಿಗೆ ಗುತ್ತಿಗೆ ನೀಡಲು ಮತ್ತೆ ಟೆಂಡರ್ ಕರೆಯಲಾಗುವುದು ಎಂದಿದ್ದಾರೆ.

ಬಿಎಸ್ ಎಸ್ ಕೆ ಸಹಕಾರಿ ಸಕ್ಕರೆ ಕಾರ್ಖಾನೆಯನ್ನು 2022–23ನೇ ಹಂಗಾಮಿನಿಂದ 40 ವರ್ಷಗಳ ಅವಧಿಗೆ ಎಲ್ ಆರ್ ಒಟಿ ಆಧಾರದ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡಲು ಟೆಂಡರ್ ಕರೆಯಲಾಗಿತ್ತು. ಪ್ರಿ ಬಿಡ್ ಸಭೆಯಲ್ಲಿ ಬಿಡ್ಡುದಾರರು ಭಾಗವಹಿಸಿದ್ದರೂ ನಿಗದಿಪಡಿಸಿದ ಅವಧಿಯಲ್ಲಿ ಒಬ್ಬರೂ ಭರ್ತಿಮಾಡಿದ ಅರ್ಜಿ ಸಲ್ಲಿಸಲಿಲ್ಲ. ಎರಡನೇ ಬಾರಿ ಟೆಂಡರ್ ಕರೆದಾಗ ಸರ್ಕಾರದ ಷರತ್ತುಗಳಿಗೆ ಆಕ್ಷೇಪ ವ್ಯಕ್ತಪಡಿಸಿ ಯಾವ ಬಿಡ್ಡುದಾರರೂ ಭಾಗವಹಿಸಲಿಲ್ಲ. ಹೀಗಾಗಿ ಬಿಡ್ಡುದಾರರು ಸರ್ಕಾರದ ಷರತ್ತುಗಳ ಸಡಿಲಿಕೆ ಕೋರಿ ಸಲ್ಲಿಸಿರುವ ಮನವಿ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕಬ್ಬು ಅಭಿವೃದ್ಧಿ ಆಯುಕ್ತರು 2023ರ ಮಾರ್ಚ್ 16ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರು.

ಈ ಹಿನ್ನೆಲೆಯಲ್ಲಿ ಕಾರ್ಖಾನೆಗೆ ಸಾಲ ನೀಡಿರುವ ಹಣಕಾಸು ಸಂಸ್ಥೆಗಳು ಏಕ ಕಾಲ ತೀರುವಳಿ ಯೋಜನೆಯಲ್ಲಿ ಎಷ್ಟು ಮೊತ್ತಕ್ಕೆ ಒಪ್ಪಲಿವೆ ಎಂದು ವಿವರಿಸಿದ್ದಾರೆ.

## ತೊಗರಿ: ನೆರವು ಕೋರಿ ಪಿಎಂಗೆ ಪತ್ರ

• ಮಲ್ಲಮ್ಮ ನುಡಿ ಬೆಂಗಳೂರು

ರಾಜ್ಯದಲ್ಲಿ ತೊಗರಿ ಕಟಾವಿಗೆ ಬಂದಿದ್ದು, ಬೆಲೆ ಕುಸಿತದಿಂದ ಕಂಗಾಲಾಗಿರುವ



ರೈತರ ನೆರವಿಗೆ ತಕ್ಷಣವೇ ಧಾವಿಸುವಂತೆ ಒತ್ತಾಯಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಕೇಂದ್ರದ ಸಂಸ್ಥೆಗಳ ಮೂಲಕ ತೊಗರಿ ಖರೀದಿಗೆ ತಕ್ಷಣವೇ ಅನುಮೋದನೆ ನೀಡಬೇಕು ಮತ್ತು ಈ ಬಾರಿಯ ಬೆಳೆ ಆಗಮನಕ್ಕೂ ಮುನ್ನವೇ ರಾಜ್ಯದ ಪ್ರಮುಖ ಖರೀದಿ ಕೇಂದ್ರಗಳಲ್ಲಿ ತಕ್ಷಣದ ಕಾರ್ಯಾಚರಣೆ ಪ್ರಾರಂಭಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿಯವರನ್ನು ಒತ್ತಾಯಿಸಿದ್ದಾರೆ. ಈ ನಿರ್ಣಾಯಕ ಹಂತದಲ್ಲಿ ತೊಗರಿ ಖರೀದಿಯನ್ನು ಮುಂದೂಡಿದರೆ, ಅದು ರೈತರ ಪ್ರತಿಭಟನೆ, ಬೆಲೆಗಳಲ್ಲಿ ಕುಸಿತ ಮತ್ತು ರೈತರಿಗೆ ನ್ಯಾಯಯುತ ಬೆಲೆಗಳನ್ನು ಖಚಿತಪಡಿಸಿಕೊಳ್ಳಲು ಉದ್ದೇಶಿಸಲಾದ ಕನಿಷ್ಠ ಬೆಂಬಲ ಬೆಲೆ ವ್ಯವಸ್ಥೆ ಮೇಲಿನ ವಿಶ್ವಾಸ ಗಮನಾರ್ಹವಾಗಿ ಕುಂದಲು ಕಾರಣವಾಗಬಹುದು ಎಂದು ಅವರು ಎಚ್ಚರಿಸಿದ್ದಾರೆ.

## ಪ್ರಿಯಾಂಕ–ಅಮಿತ್ ಶಾ ವಾಕ್ಸಮರ

• ಮಲ್ಲಮ್ಮ ನುಡಿ ಹೊಸದಿಲ್ಲಿ




ಪಶ್ಚಿಮ ಬಂಗಾಳ ಚುನಾವಣೆ ಹತ್ತಿರವಾಗುತ್ತಿದ್ದಂತೆ ವಂದೇ ಮಾತರಂ ಬಗ್ಗೆ ಚರ್ಚಿಸಲಾಗುತ್ತಿದೆ ಎಂದು ಕೆಲವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಆದರೆ, ಅವರು ವಂದೇ ಮಾತರಂನ ವೈಭವವನ್ನು ಚುನಾವಣೆ ಜೊತೆಗೆ ತಳುಕು ಹಾಕುವ ಮೂಲಕ ಕುಗ್ಗಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಪರೋಕ್ಷವಾಗಿ ಸಂಸದೆ ಪ್ರಿಯಾಂಕಾ ಗಾಂಧಿ ಮತ್ತು ಕಾಂಗ್ರೆಸ್ ಸರ್ಕಾರದ ವಿರುದ್ಧ ರಾಜ್ಯಸಭೆಯಲ್ಲಿ ಗೃಹ ಸಚಿವ ಅಮಿತ್ ಶಾ ವಾಗ್ದಾಳಿ ನಡೆಸಿದ್ದಾರೆ.

### ವಂದೇ ಮಾತರಂ ಇಬ್ಭಾಗವಾಗಿದ್ದಕ್ಕೆ ದೇಶ ವಿಭಜನೆ

ಜವಾಹರಲಾಲ್ ನೆಹರು ಅವರು ವಂದೇ ಮಾತರಂನ 50ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ವಂದೇ ಮಾತರಂ ಗೀತೆಯನ್ನು ವಿಭಜಿಸಿ ಕೇವಲ ಎರಡು ಚರಣಗಳಿಗೆ ಸೀಮಿತಗೊಳಿಸಿದರು. ಅಲ್ಲಿಂದಲೇ ತುಷ್ಟೀಕರಣ ರಾಜಕಾರಣ ಆರಂಭವಾಯಿತು. ಅದರಿಂದಲೇ ದೇಶ ವಿಭಜನೆಯಾಗಿದ್ದು. ಒಂದು ವೇಳೆ ವಂದೇ ಮಾತರಂ ಇಬ್ಭಾಗವಾಗದಿದ್ದಲ್ಲಿ, ದೇಶ ವಿಭಜನೆಯಾಗುತ್ತಿರಲಿಲ್ಲ ಎಂಬುದು ನನ್ನಂತೆಯೇ ಹಲವರ ಆಲೋಚನೆ. ಇಂದಿರಾ ಗಾಂಧಿಯವರು ತುರ್ತು ಪರಿಸ್ಥಿತಿಯಲ್ಲಿ ವಿರೋಧ ಪಕ್ಷದವರನ್ನು ಜೈಲಿಗೆ ಹಾಕಿದ್ದರಿಂದ ಗೀತೆಯ 100ನೇ ವರ್ಷಾಚರಣೆಯಲ್ಲಿ ಅದರ ವೈಭವೀಕರಣ ಸಾಧ್ಯವಾಗಲಿಲ್ಲ ಎಂದಿದ್ದಾರೆ.

ಕವಿರಾಜ ಮಾರ್ಗ ವು ಮೊಟ್ಟಮೊದಲ ಉಪಲಬ್ಧ ಶಾಸ್ತ್ರ ಕೃತಿಯಾಗಿದೆ. ಅಮೋಘ ವರ್ಷನ ಆಸ್ಥಾನದಲ್ಲಿ ಇದರ ರಚನೆ ಆಗಿದೆ.

# ಕುರಿಗಳ ಬಲಿ ನಿಲ್ಲಿಸಬೇಕು, ಭಕ್ತಿಯಿಂದ ದೇವರನ್ನು ಭಜಿಸಬೇಕು: ಶಾಂತಮಯ್ಯ ಸ್ವಾಮಿಜಿ



**ಮಲ್ಲಮ್ಮ ನುಡಿ ವಾರ್ತೆ ಬೀದರ್:**

ಸಮಾಜದಲ್ಲಿ ತುಂಬಿರುವ ಮೂಢನಂಬಿಕೆಯಿಂದ ಭಕ್ತರು ಹೊರಗೆ ಬರಬೇಕು, ಭಕ್ತಿಯಿಂದ ದೇವರನ್ನು ಭಜಿಸಿ ಒಲಿಸಿಕೊಳ್ಳಬೇಕು. ದೇವರ ಹೆಸರ ಮೇಲೆ ನಡೆಯುವ ಬಲಿ ನಿಲ್ಲಬೇಕು. ಶ್ರೇಷ್ಠ ಗುರು ಭಕ್ತಿ ಭಾವದಿಂದ ಕೃಷ್ಣ ನನ್ನು ಒಲಿಸಿಕೊಂಡಿರುವುದು ಕನಕದಾಸರು ನೀಡಿರುವ ತತ್ವಸಂದೇಶವನ್ನು ನಿಜ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಎಂದು ಕರ್ನಾಟಕದ ಹಾಲುಮತ ಗುರುಪೀಠದ ಪರಂ ಪೂಜ್ಯ ರೇವಣ್ಣಸಿದ್ದೇಶ್ವರ ಶಾಂತಮಯ ಸ್ವಾಮಿಜಿ ನುಡಿದರು.

ಅವರು ಭಾನುವಾರ ನಗರದ ಜಿಯಾಗೂಡ ನಗರಸಭೆ ಗ್ರೌಂಡನಲ್ಲಿ ಭಕ್ತ ಕನಕದಾಸರ 538ನೇ ಜಯಂತಿ ಉತ್ಸವದಲ್ಲಿ ದಿವ್ಯ ಸಾನ್ನಿಧ್ಯವಹಿಸಿ ಮಾತನಾಡಿದರು. ಆಸೆ ಎಂಬುದು ಇರಬಾರದು ಬಂಗಾರದಂತ ಮಾತುಗಳ ನಿರಂತರವಾಗಿ ಕೇಳುತ್ತಿರಬೇಕು.

ಶಿವಶರಣರ ವಚನದಂತೆ ಮಾತು ಮಾಣಿಕ್ಯದಂತಿರಬೇಕು. ಮಾತು ಪ್ರೀತಿಯ ಮಾತಾಡಬೇಕು. ಮಾತಿನಿಂದ ಜಗಳವಾಗಬಾರದು. ಮಾತಿನಿಂದ ಎಲ್ಲರೂ ಒಂದೇ ಕಡೆ ಸೇರಿರಬೇಕು ಎಂಬ ಭಾವನೆ ಪ್ರತಿಯೊಬ್ಬರಲ್ಲಿ ನೆಲೆಸಬೇಕು ಅಂದಾಗ ಮಾತ್ರ ಮಾನವೀಯ ಮೌಲ್ಯಗಳು ಜೀವಂತವಾಗಿ ಇರಲ್ಲು ಸಾಧ್ಯವಿದೆ ಎಂದು ಶ್ರೀಗಳು ನುಡಿದರು.

ಸಮಾರಂಭವು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದ ನಗರದ ಟ್ರಾಫಿಕ್ ಡಿಸಿಪಿ ಕನ್ನಡಿಗರಾದ ರಾಹುಲ ಹೆಗಡೆ ಐಪಿಎಸ್ ಇಂದು ನಾವು ಕರ್ನಾಟಕದ ಮಹಾನ್ ಕವಿ, ಭಕ್ತ ಮತ್ತು ಸಮಾಜ ಸುಧಾರಕರಾದ ಶ್ರೀ ಕನಕ ದಾಸರನ್ನು ಸ್ಮರಿಸಲು ಇಲ್ಲಿ ನಾವುಗಳು ಸೇರಿದ್ದೇವೆ. ತಮ್ಮ ಕಾವ್ಯ ಮತ್ತು ಕೀರ್ತನೆಗಳ ಮೂಲಕ ಅವರು ಜನರಿಗೆ ಸತ್ಯ, ನೀತಿ ಮತ್ತು ಮಾನವೀಯತೆಯ ಮಾರ್ಗವನ್ನು ತೋರಿಸಿದರು. ಎಂದು ಕನಕದಾಸರ ಕೀರ್ತನೆಗಳನ್ನು ಮೆಲುಕು ಹಾಕಿದರು.

ಕನಕ ದಾಸರು ನಮಗೆ ಎರಡು ಸರಳ ಆದರೆ ಶಕ್ತಿಯುತ ಸಂದೇಶ ನೀಡಿದ್ದಾರೆ."ನಿಧಿಯಿಂದ ಧರ್ಮ, ಧರ್ಮದಿಂದ ನಿಧಿ." ಅಂದರೆ – ನಮ್ಮ ಸಂಪತ್ತು ಧರ್ಮದ ಮಾರ್ಗದಲ್ಲಿ ಉಪಯೋಗವಾದಾಗ ಮಾತ್ರ ಮೌಲ್ಯವಿರುತ್ತದೆ, ಮನುಜ ಹೇಳುವ ಮಾತು ಮಣಿಯಬೇಕು." ಅಂದರೆ ಒಳ್ಳೆಯ ಮಾತು, ವಿನಯ, ಮಾನವೀಯತೆ ಸದಾ ಮುಖ್ಯ.

ಉಡುಪಿಯ ಕನಕನ ಕಿಂಡಿ ಘಟನೆ ನಾವು ಸದಾ ನೆನಪಿನಲ್ಲಿ ಇಟ್ಟುಕೊಳ್ಳಬೇಕು. ಭಕ್ತನ ಶುದ್ಧ ಹೃದಯದ ಮುಂದೆ ದೇವರು ತಾನೇ ತಿರುಗಿ ದರ್ಶನ ನೀಡಿದ ಎಂಬುದು ಇಡೀ ಪ್ರಪಂಚಕೆ ಪ್ರಸಿದ್ದಿಯನ್ನು ಪಡೆದಿದೆ. ಭಕ್ತಿ, ಶ್ರಮ ಮತ್ತು ನಂಬಿಕೆಯ ಶಕ್ತಿಯನ್ನು ನಮಗೆ ಬೋಧಿಸುತ್ತದೆ. ಕನಕ ದಾಸರು ಎಲ್ಲರನ್ನು ಸಮಾನವಾಗಿ ನೋಡುವ ಗುಣವನ್ನು ಸಾರಿದರು.

ಅವರ ಸಂದೇಶ ಇಂದು ನಮ್ಮ ಸಮಾಜಕ್ಕೂ ಬಹಳ ಮುಖ್ಯ ಜಾತಿ–ಭೇದ ಬೇಡ; ಮನುಷ್ಯನು ಮನುಷ್ಯನಾಗಿಯೇ ಬದುಕಬೇಕು, ನಾವು ಹೈದರಾಬಾದ್‌ನಲ್ಲಿ ವಾಸಿಸುತ್ತಿದ್ದರೂ, ಕನ್ನಡ, ಕರ್ನಾಟಕ ಮತ್ತು ನಮ್ಮ ಸಂಸ್ಕೃತಿ ಎಂದಿಗೂ ನಮ್ಮ ಹೃದಯದಿಂದ ದೂರವಾಗುವುದಿಲ್ಲ. ಎಲ್ಲರನ್ನು ಒಂದೇಡೆಗೆ ಸೇರಿಸುವಂತೆ ಕಾರ್ಯ ಮಾಡುತ್ತದೆ. ಒಕ್ಕಟೂ ಸಮಾಜದ ಅಭಿವೃದ್ದಿಗೆ ನಾಂದಿ ಹಾಡುತ್ತದೆ.

ಇಂತಹ ಆಚರಣೆಗಳಿಂದ ನಮ್ಮನ್ನು ನಮ್ಮ ಮೂಲ ಮೌಲ್ಯಗಳಿಗೆ ಮತ್ತಷ್ಟು ಹತ್ತಿರ ಮಾಡುತ್ತದೆ ಎಂದು ರಾಹುಲ ಹೆಗಡೆ ನುಡಿದರು.

ಇಂದು ಕನಕ ದಾಸರ ಉಪದೇಶಗಳನ್ನು ನೆನಪಿಸಿಕೊಂಡು, ನಾವು ದಿನನಿತ್ಯ ಜೀವನದಲ್ಲಿ, ಸತ್ಯವಾಗಿ ಬಾಳೋಣ, ಒಳ್ಳೆಯ ಮಾತಾಡೋಣ ಮತ್ತು ಸಮಾಜಕ್ಕೆ ಒಳ್ಳೆಯ ಕೆಲಸ ಮಾಡೋಣ.

ಇದು ನಾವು ಕನಕದಾಸರಿಗೆ ನಿಜವಾದ ಗೌರವ ನೀಡಿದಂತೆ, ಶ್ರೀ ಕನಕ ದಾಸರ ಕೃಪೆ ಎಲ್ಲರ ಮೇಲೂ ಇರಲಿ. ಎಲ್ಲರೂ ಸುಖವಾಗಿ, ಆರೋಗ್ಯವಾಗಿ ಮತ್ತು ಬೆಳವಣಿಗೆಯ ಹಾದಿಯಲ್ಲಿ ಮುಂದುವರಿಯಲಿ." ಎಂದು ಎಲ್ಲರಿಗೂ ಶುಭಾಷಯ ಕೋರಿದರು.

ಕನಕಶ್ರೀ ಪ್ರಶಸ್ತಿ ವಿತರಣೆ ಹೈದರಾಬಾದ ನಗರದಲ್ಲಿ ಕನಕದಾಸ ಜಯಂತಿ ಮಾಡಲು ಸರ್ವ ರೀತಿಯಿಂದ ಸುಮಾರು 40 ವರ್ಷದಿಂದ ಸತತವಾಗಿ ಪ್ರಯತ್ನ ಮಾಡಿ ಇಂದು ಯಶಸ್ವಿಯಾಗಿ ಕನಕದಾಸ ಜಯಂತಿ ನಿರ್ವಹಿಸಲು ಶ್ರಮಿಸಿದ ಕುರುಬ ಸಮಾಜದ ಹಿರಿಯರು ಅನುಭಾವಿಗಳಾದ ವೈಜಿನಾಥಪ್ಪ ಹಿರೋಡೆ ಹಾಗೂ ಜಗನಾಥ (ಟೇಲರ್ )ಕುಂಟಬಿರ ಅವರಿಗೆ ಕನಕಶ್ರೀ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಸಮಾರಂಭದಲ್ಲಿ ತುಮಟುಂಟ ಅರುಣಕುಮಾರ, ಭಾಲ್ಕಿಯ ಬಾಲಾಜಿ ಜಬಾಡೆ, ನಾಗರಾಜ ಸೋರಾಳೆ, ದರಪಲ್ಲಿ ನರಸಿಂಹ, ಧರ್ಮೇಂದ್ರ ಪೂಜಾರಿ ಮಾತನಾಡಿದರು. ವೇದಿಕೆಯ ಮೇಲೆ ವೈಜಿನಾಥಪ್ಪ ಹಿರೋಡೆ, ಜಗನಾಥ ಕುಂಟಬಿರ್, ರಾಜಕುಮಾರ ಮನ್ನಳಿ, ಬಸವರಾಜ ಲಾರಾ, ಅಮರನಾಥ ಹಿರೋಡೆ, ಶಿವಾಜಿ ಕುಂಟಬಿರ್, ಪ್ರಭು ಪೂಜಾರಿ ಉಪಸ್ಥಿತರಿದರು.

ಮೊದಲಿಗೆ ಕನಕದಾಸರ ಭಾವಚಿತ್ರಕ್ಕೆ ಪರಂಪೂಜ್ಯ ಶ್ರೀ ರೇವಣ್ಣಸಿದ್ದೇಶ್ವರ ಶಾಂತಮಯ್ಯ ಸ್ವಾಮಿಜಿ ಪೂಜೆ ಸಲ್ಲಿಸುವ ಮೂಲಕ ಪುಷ್ಪವೃಷ್ಠಿ ಮಾಡಿದರು. ವೈಜಿನಾಥಪ್ಪ ಹಿರೋಡೆ ಸ್ವಾಗತಿಸಿದರು.ಹಣಮಂತ ಹಿರೋಡೆ ನಿರೂಪಿಸಿದರು.

## ಲಿಂಗರಾಜಪ್ಪ ಅಪ್ಪ ಇಂಜಿನೀಯರಿಂಗ್ ಕಾಲೇಜನಲ್ಲಿ ಇನ್ನುಕಬೇಷನ್ ಅರಿವು ಮೂಡಿಸುವ ಕಾರ್ಯಕ್ರಮ



**ಮಲ್ಲಮ್ಮ ನುಡಿ ವಾರ್ತೆ ಬೀದರ:**

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್ತು ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಇತ್ತೀಚಿಗೆ ಬೀದರಿನ ಲಿಂಗರಾಜಪ್ಪ ಅಪ್ಪ ಇಂಜಿನಿಯಂರಿಗ್ ಕಾಲೇಜಿನಲ್ಲಿ ರ್‍ಯಾಂಪ್ ಯೋಜನೆಯಡಿ ಎಂಎಸ್‌ಎಂಇ ಕೈಗಾರಿಕೆಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಇನ್ನುಕಬೇಷನ್ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಲಿಂಗರಾಜಪ್ಪ ಅಪ್ಪ ಇಂಜಿನಿಯಂರಿಗ್ ಕಾಲೇಜಿನ ಪ್ರಾಂಶುಪಾಲರು ಕಾರ್ಯಕ್ರಮ ಉದ್ಘಾಟಿಸಿ ನಂತರ ಮಾತನಾಡಿದರು. ಕಾರ್ಯಕ್ರಮದಲ್ಲಿ ಬೀದರ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಸುರೇಖಾ ಮುನೋಳಿ ಅವರು ಅಧ್ಯಕ್ಷತೆ ವಹಿಸಿದರು.

ಈ ಸಂದರ್ಭದಲ್ಲಿ ಲೀಡ್ ಬ್ಯಾಂಕ್ ಅಧಿಕಾರಿಗಳು, ಲಘು ಉದ್ಯೋಗ ಭಾರತಿ ಬೀದರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪ್ರಿಯಾಂಕಾ ನಾಯ್ಕ ಅವರಿಗೆ ಭೌತಶಾಸ್ತ್ರದಲ್ಲಿ ಪಿ.ಎಚ್.ಡಿ ಪದವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರವು ಭೌತಶಾಸ್ತ್ರ ವಿಭಾಗದಲ್ಲಿ ಸಂಶೋಧನೆ ನಿರ್ವಹಿಸಿದ ಪ್ರಿಯಾಂಕಾ ನಾಯ್ಕ ಅವರಿಗೆ ಡಾ. ಶಿವರಾಜ ಜಿ. ಗೌನಹಳ್ಳಿ ಅವರ ಮಾರ್ಗದರ್ಶನದಲ್ಲಿ ಪಿ.ಎಚ್.ಡಿ (ಡಾಕ್ಟರೇಟ್) ಪದವಿಯನ್ನು ಘೋಷಿಸಿದೆ. ಇತ್ತೀಚೆಗೆ ಪ್ರಕಟವಾದ ಡಾಕ್ಟರೇಟ್ ಪದವಿ ಪರೀಕ್ಷೆಯ ಫಲಿತಾಂಶದಲ್ಲಿ ಅವರು ಯಶಸ್ವಿಯಾಗಿ ಉತ್ತೀರ್ಣರಾಗಿದ್ದಾರೆ. ಭೌತಶಾಸ್ತ್ರ ವಿಷಯದಲ್ಲಿ ಪಿ.ಎಚ್.ಡಿ ಪದವಿ ಪಡೆದಿರುವ ವಿಶ್ವವಿದ್ಯಾಲಯದ ಮೊದಲ ಮಹಿಳೆ ಎಂಬ ವಿಶಿಷ್ಟ ಗೌರವವನ್ನು ಪ್ರಿಯಾಂಕಾ ನಾಯ್ಕ ಪಡೆದಿದ್ದು, ಮಹಿಳೆಯರ ವಿದ್ಯಾಕ್ಷೇತ್ರದಲ್ಲಿ ಇದು ಮಹತ್ವದ ಸಾಧನೆಯಾಗಿ ಹೊರಹೊಮ್ಮಿದೆ. ವಿಶ್ವವಿದ್ಯಾನಿಲಯದ ಸಂಶೋಧನಾ ವಲಯಕ್ಕೆ ನಾಯ್ಕ ನೀಡಿರುವ ಶೈಕ್ಷಣಿಕ ಕೊಡುಗೆಯನ್ನು ಪರಿಗಣಿಸಿ ಪದವಿ ಪ್ರದಾನ ಮಾಡಿರುವುದಾಗಿ ವಿಶ್ವವಿದ್ಯಾನಿಲಯ ಮೂಲಗಳು ತಿಳಿಸಿವೆ. ಅವರ ಈ ಸಾಧನೆ ವಿಜ್ಞಾನ ಹಾಗೂ ಸಂಶೋಧನಾ ಕ್ಷೇತ್ರದಲ್ಲಿ ತೊಡಗಿಕೊಳ್ಳಲು ಆಸಕ್ತಿ ಹೊಂದಿರುವ ವಿದ್ಯಾರ್ಥಿನಿಯರಿಗೆ ಪ್ರೇರಣಾದಾಯಕವಾಗಿದೆ. ಭವಿಷ್ಯದಲ್ಲಿ ಹೆಚ್ಚಿನ ಮಹಿಳೆಯರು ಸಂಶೋಧನಾ ಕ್ಷೇತ್ರಕ್ಕೆ ಬರಲು ಇದರಿಂದ ಉತ್ತೇಜನ ಸಿಗಲಿದೆ ಎಂದು ಶಿಕ್ಷಣ ವಲಯದ ತಜ್ಞರು ತಿಳಿಸಿದ್ದಾರೆ, ಭೌತಶಾಸ್ತ್ರದಲ್ಲಿ ಮಹಿಳೆಯರ ಸಾಧನೆಯನ್ನು ಮತ್ತಷ್ಟು ಬಲಪಡಿಸುವ ದಿಸೆಯಲ್ಲಿ ಪ್ರಿಯಾಂಕಾ ನಾಯ್ಕ ಅವರ ಈ ಯಶಸ್ಸು ಮಹತ್ವವನ್ನು ಪಡೆದುಕೊಂಡಿದೆ.

## ಲಾಡಗೇರಿ ಮಂಗಗಳ ಹಾವಳಿ ಹೆಚ್ಚಳ

### ಮಹಿಳೆಯರು, ಮಕ್ಕಳು ಭಯಭೀತ ಕ್ರಮಕ್ಕೆ ಆಗ್ರಹ

**ಮಲ್ಲಮ್ಮ ನುಡಿ ವಾರ್ತೆ ಬೀದರ್:**

ನಗರದ ಲಾಡಗೇರಿಯ ಶಿವಪೂರ ಕಾಲೋನಿಯಲ್ಲಿ ಕಳೆದ ಕೆಲವು ದಿನಗಳಿಂದ ಮಂಗಗಳ ಹಾವಳಿ ಹೆಚ್ಚಾಗಿ, ಸಾರ್ವಜನಿಕರಿಗೆ ಕಚ್ಚಿ ಗಾಯಗೋಳಿಸುತ್ತಿವೆ. ಸ್ಥಳೀಯರು ಭಯದಲ್ಲಿ ದಿನ ಕಳೆಯುವ ಪರಿಸ್ಥಿತಿ ಉಂಟಾಗಿದೆ. ಮನೆ ಮನೆಗಳ ಮೇಲೇರಿಹೋಗಿ ಜಿಗಿಯುವ ಮಂಗಗಳು ಮಹಿಳೆಯರು ಹಾಗೂ ಮಕ್ಕಳಿಗೆ ಭಯ ಹುಟ್ಟಿಸುವ ರೀತಿಯಲ್ಲಿ ವರ್ತಿಸುತ್ತಿದ್ದು, ಸಾರ್ವಜನಿಕರಲ್ಲಿ ಭಯದ ವಾತಾವರಣ ಸೃಷ್ಟಿಯಾಗಿದೆ ಎಂದು ಕರ್ನಾಟಕ ಯುವ ಸಂಘ ಸಂಸ್ಥೆಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ಯುವ ಪ್ರಶಸ್ತಿ ಪುರಸ್ಕೃತ ಸುನೀಲ ಭಾವಿಕಟ್ಟಿ ಅವರು ಈ ಕುರಿತು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಂಗಗಳು ಮನೆ ಬಾಗಿಲ ಬಳಿ ಬರುತ್ತಿವೆ. ಏಕಾಏಕಿ ಜಿಗಿದು ಮಕ್ಕಳ ಹಾಗೂ ಮಹಿಳೆಯರ ಮೇಲೆ ದಾಳಿ ಮಾಡಲು ಯತ್ನಿಸುತ್ತಿವೆ. ರಸ್ತೆಯಲ್ಲಿ ತಿರುಗಾಡುವವರಿಗೆ ಬೆನ್ನಟ್ಟುತ್ತಿವೆ, ಕೆಲವೆಡೆ ಕಚ್ಚುವ ಘಟನೆಗಳೂ ಸಂಭವಿಸಿವೆ. ಜನರ ಜೀವ ಭದ್ರತೆಗೆ ದೊಡ್ಡ ಅಪಾಯ ಎದುರಾಗಿದೆ ಇದಕ್ಕೆ ಯಾರು ಹೋಣೆ ಎಂದು ಪ್ರಶ್ನಿಸಿದ್ದಾರೆ.



ಆದ್ದರಿಂದ ಸಂಬಂಧಿತ ಅಧಿಕಾರಿಗಳು ಮಂಗಗಳನ್ನು ಹಿಡಿದು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸುವಂತೆ ಮತ್ತು ತಕ್ಷಣ ಕ್ರಮ ಕೈಗೊಳ್ಳುವಂತೆ ಸಂಬಂಧಿತ ಅಧಿಕಾರಿಗಳಿಗೆ ಅವರು ಮನವಿ ಮಾಡಿದ್ದಾರೆ.

## ಇನ್ನುಕಬೇಷನ್ ಅರಿವು ಮೂಡಿಸುವ ಕಾರ್ಯಕ್ರಮ



**ಮಲ್ಲಮ್ಮ ನುಡಿ ವಾರ್ತೆ ಬೀದರ:**

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್ತು ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಇತ್ತೀಚಿಗೆ ಬೀದರಿನ ಗುರುನಾನಕ ದೇವ ಇಂಜಿನಿಯಂಗ್ ಕಾಲೇಜಿನಲ್ಲಿ ಯಾರ್ಂಪ್ ಯೋಜನೆಯಡಿ ಎಂಎಸ್‌ಎಂಇ ಕೈಗಾರಿಕೆಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಇನ್ನುಕಬೇಷನ್ ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಗುರುನಾನಕ ದೇವ ಇಂಜಿನಿಯಂರಿಗ್ ಕಾಲೇಜಿನ ಪ್ರಾಂಶುಪಾಲರು ಉದ್ಘಾಟಿಸಿ ಕಾರ್ಯಕ್ರಮದ ಬಗ್ಗೆ ಮಾತನಾಡಿದರು.

ಬೀದರ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಸುರೇಖಾ ಮುನೋಳಿ ಅವರು ಅಧ್ಯಕ್ಷತೆಯನ್ನು ವಹಿಸಿದರು.

ಈ ಸಂದರ್ಭದಲ್ಲಿ ಲೀಡ್ ಬ್ಯಾಂಕ್ ಅಧಿಕಾರಿಗಳು, ಲಘು ಉದ್ಯೋಗ ಭಾರತಿ ಬೀದರ ಇವರು ಹಾಗೂ ಎಂ.ಬಿ.ಎ ಮತ್ತು ಇಂಜಿನಿಯಂರಿಂಗ್ ವಿದ್ಯಾರ್ಥಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನಿವೇಶನ ವಿನ್ಯಾಸ ಅನುಮೋದನೆ ಕಲ್ಪಿಸಿದೆ

ಬೆಳಗಾವಿ: ರಾಜ್ಯದ ಇತರೆ ಜಿಲ್ಲೆಗಳಿಗಿಂತ ಕರಾವಳಿ ಜಿಲ್ಲೆಗಳು ಭೌಗೋಳಿಕವಾಗಿ ಭಿನ್ನವಾಗಿರುವುದರಿಂದ ಈ ಜಿಲ್ಲೆಗಳಿಗೆ ಅನ್ವಯವಾಗುವಂತೆ ಏಕ / ಬಹು ನಿವೇಶನ ವಿನ್ಯಾಸ ಅನುಮೋದನೆ ನೀಡುವ ಕುರಿತು ವಿಶೇಷ ಸೇವೆಗಳನ್ನು ಕಲ್ಪಿಸಲಾಗಿದೆ ಎಂದು ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವ ಬಿ. ಎಸ್. ಸುರೇಶ್ ತಿಳಿಸಿದರು.ಇಂದು ವಿಧಾನ ಪರಿಷತ್ ಕಲಾಪದ ವೇಳೆ, ಪರಿಷತ್ ಸದಸ್ಯ ಮಂಜುನಾಥ ಭಂಡಾರಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕರಾವಳಿ ಜಿಲ್ಲೆಗಳಲ್ಲಿ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಒಳಪಡದೇ ಇರುವ ಗ್ರಾಮ ಪಂಚಾಯತಿಯಲ್ಲಿನ ಒಂದು ಎಕರೆ ಒಳಗಿನ ಜಮೀನುಗಳಿಗೆ ಅನುಮೋದನೆ ನೀಡುವ ಪ್ರಕರಣಗಳಿಗೆ ತಾಂತ್ರಿಕ ಅನುಮೋದನೆ ನೀಡಲು ಸಹಾಯಕ ನಿರ್ದೇಶಕರ ಕಛೇರಿ ಹಾಗೂ ಹತ್ತಿರದ ಯೋಜನಾ ಪ್ರಾಧಿಕಾರಗಳ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸಿ, ತಾಲ್ಲೂಕು ಪಂಚಾಯತಿ ಕಛೇರಿಯಲ್ಲಿಯೇ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅಧಿಕಾರಿಗಳು ಕಾರ್ಯ ನಿರ್ವಹಿಸಲು ಆದೇಶಿಸಲಾಗಿದೆ.

## ಬೈಕ್ ಗಳ ಮಧ್ಯೆ ರಸ್ತೆ ಅಪಘಾತ; ಓರ್ವ ಸಾವು

**ಮಲ್ಲಮ್ಮ ನುಡಿ ವಾರ್ತೆ ಕಮಲನಗರ:**

ತಾಲೂಕಿನ ಚಿಮ್ಮೇಗಾಂವ್ ಕ್ರಾಸ್ ಬಳಿ ರವಿವಾರ ಬೆಳಿಗ್ಗೆ ನಡೆದ ರಸ್ತೆ ಅಪಘಾತದಲ್ಲಿ ಓರ್ವನ ಸಾವುನೊಪ್ಪಿದ ಘಟನೆ ಜರುಗಿದೆ.ಮಹಾರಾಷ್ಟ್ರದ ಮುಖ್ಖೇಡ್ ತಾಲ್ಲೂಕಿನ ಚಾಂಡೋಳ ತಾಂಡಾ ಗ್ರಾಮದ ಅತೀಶ ವೆಂಕಟ ರಾಠೋಡ್(25) ಮೃತಪಟ್ಟ ದುರ್ದೈವಿ ಎಂದು ಗುರುತಿಸಲಾಗಿದೆ.

ಅತೀಶ ಬೆಳಿಗ್ಗೆ ಖಾಸಗಿ ಔಷಧಿ ತರಲು ಉದಗೀರದಿಂದ ಖಂಡಿಕೇರಾ ಗ್ರಾಮಕ್ಕೆ ಬೈಕ್ ಮೇಲೆ ತೆರಳುತ್ತಿದ್ದನು. ಚಿಮ್ಮೆಗಾಂವ್ ಗ್ರಾಮದಿಂದ ಗುಡ್ ಸಾಬ್ ಮೈನೋದ್ದೀನ್ ಶೇಖ್(40) ಪಕ್ಕದ ರಸ್ತೆಯಿಂದ ಬೈಕ್ ಮೇಲೆಬರುತ್ತಿರುವಾಗ ಡಿಕ್ಕಿ ಹೊಡೆದ ಪರಿಣಾಮ ಈ ಅಪಘಾತ ಸಂಭವಿಸಿದೆ.

ಸುದ್ಧಿ ತಿಳಿಯುತ್ತಿದ್ದಂತೆ ಹೊಕರಣಾ ಪೊಲೀಸ್ ಠಾಣೆ ಎಎಐ ಮಾಧವ ಬಿರಾದಾರ, ಎಎಐ ಮಲ್ಲಿಕಾರ್ಜುನ ಬಿರಾದರ ಹಾಗೂ ಸಿಬ್ಬಂದಿ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಹೊಕರಣಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರಾಜ್ಯ ಮಟ್ಟದ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ಬೀದರ:**

ಕಿತ್ತೂರು ರಾಣಿ ಚೆನ್ನಮ್ಮ ರಾಜ್ಯ ಮಟ್ಟದ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೀದರ ಜಿಲ್ಲೆಯಲ್ಲಿ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಕನಿಷ್ಠ 05 ವರ್ಷಗಳ ಸೇವೆ ಸಲ್ಲಿಸಿರುವಂತಹ, ಅರ್ಹ ಸಂಸ್ಥೆಗಳಿಗೆ ಹಾಗೂ ವ್ಯಕ್ತಿಗಳನ್ನೊಳಗೊಂಡಂತೆ, ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಮಹಿಳೆಯರು ಹಾಗೂ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಜೀವಾಪಾಯದಿಂದ ಪಾರು ಮಾಡಿದಂತಹ ಮಹಿಳೆಯರನ್ನು ಗುರುತಿಸಿ, ಅವರಿಗೆ "ಕಿತ್ತೂರು ರಾಣಿ ಚೆನ್ನಮ್ಮ" ರಾಜ್ಯ ಮಟ್ಟದ ಪ್ರಶಸ್ತಿ ನೀಡಲಾಗುವುದು.

2025–26ನೇ ಸಾಲಿನ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಪ್ರತಿ ವರ್ಷವು ಮಹಿಳೆಯರನ್ನು ಸಮಾಜದ ಮುಖ್ಯವಾಹಿನಿಯಲ್ಲಿ ಪ್ರತಿಬಿಂಬಿಸಲು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಅವರ ಸಾಧನೆಯನ್ನು ಗುರುತಿಸಿ ಪ್ರೋತ್ಸಾಹಿಸಲು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ದಿನದಂದು ಇಲಾಖೆಯ ವತಿಯಿಂದ "ಕಿತ್ತೂರು ರಾಣಿ ಚೆನ್ನಮ್ಮ" ಇವರ ಹೆಸರಿನಲ್ಲಿ ಪ್ರಶಸ್ತಿಗಳನ್ನು ನೀಡಿ, ಗೌರವಿಸಲಾಗಿರುತ್ತದೆ.

ಅರ್ಹರು "ಕಿತ್ತೂರು ರಾಣಿ ಚೆನ್ನಮ್ಮ" ರಾಜ್ಯ ಮಟ್ಟದ ಪ್ರಶಸ್ತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೀದರ ಕಚೇರಿಯಿಂದ ಅರ್ಜಿಯನ್ನು ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ಎಲ್ಲಾ ದಾಖಲಾತಿಗಳನ್ನು ದೃಢೀಕರಿಸಿ ದ್ವಿ–ಪ್ರತಿಯಲ್ಲಿ ದಿನಾಂಕ:29–12–2025 ರೊಳಗಾಗಿ ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.

## ಎನ್ ಸಿಡಿಸಿ ನೆರವು ಪಡೆಯಲು ಮತ್ತೊಮ್ಮೆ ಪ್ರಯತ್ನ ಲಭ್ಯವಾಗದಿದ್ದರೆ ಗುತ್ತಿಗೆ ಅನಿವಾರ್ಯ

**ಮಲ್ಲಮ್ಮ ನುಡಿ ವಾರ್ತೆ ಬೀದರ್:**

ಎನ್‌ಸಿಡಿಸಿ (ರಾಷ್ಟ್ರೀಯ ಸಹಕಾರಿ ಅಭಿವೃದ್ಧಿ ನಿಗಮ) ನೆರವು ಲಭ್ಯವಾಗದಿದ್ದರೆ ಬೀದರ್ ಜಿಲ್ಲೆಯ ಬಿಎಸ್ ಎಸ್ ಕೆ ಸಹಕಾರಿ ಸಕ್ಕರೆ ಕಾರ್ಖಾನೆಯನ್ನು ಎಲ್ ಆರ್ ಓ ಟಿ ಆಧಾರದ ಮೇಲೆ ಖಾಸಗಿಯವರಿಗೆ ದೀರ್ಘಾವಧಿಗೆ ಗುತ್ತಿಗೆ ನೀಡಲು ಮತ್ತೊಮ್ಮೆ ಟೆಂಡರ್ ಕರೆಯಲಾಗುವುದು ಎಂದು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ.

ಅವರು ವಿಧಾನ ಪರಿಷತ್ತಿನಲ್ಲಿ ಮಂಗಳವಾರ ಪ್ರಶ್ನೋತ್ತರ ವೇಳೆಯಲ್ಲಿ ಭೀಮರಾವ್ ಬಸವರಾಜ್ ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಬೀದರ್ ಜಿಲ್ಲೆಯ ಸಹಕಾರ ಸಕ್ಕರೆ ಕಾರ್ಖಾನೆ ಸೇರಿದಂತೆ ರಾಜ್ಯದ ಒಟ್ಟು ಆರು ಸಹಕಾರಿ ಸಕ್ಕರೆ ಕಾರ್ಖಾನೆಗಳಿಗೆ ಎನ್ ಸಿಡಿಸಿ ನೆರವು ಪಡೆಯಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚನೆ ಮಾಡಲಾಗುವುದು. ಎನ್‌ಸಿಡಿಸಿ ನೆರವು ಲಭ್ಯವಾಗದಿದ್ದರೆ ಖಾಸಗಿಯವರಿಗೆ ಗುತ್ತಿಗೆ ನೀಡಲು ಮತ್ತೆ ಟೆಂಡರ್ ಕರೆಯಲಾಗುವುದು ಎಂದು ಹೇಳಿದರು.

ಆರ್ಥಿಕ ಸಂಕಷ್ಟ ಮತ್ತು ಇತರ ಕಾರಣಗಳಿಂದ ಸ್ಥಗಿತಗೊಂಡಿರುವ ಸಹಕಾರ ಸಕ್ಕರೆ ಕಾರ್ಖಾನೆಗಳನ್ನು ಕಬ್ಬು ಬೆಳೆಗಾರರು ಮತ್ತು ಕಾರ್ಮಿಕರ ಹಿತದೃಷ್ಟಿಯಿಂದ ಖಾಸಗಿಯವರಿಗೆ ದೀರ್ಘಾವಧಿಗೆ ಗುತ್ತಿಗೆ ನೀಡುವ ಮೂಲಕ ಪುನಶ್ಚೇತನಗೊಳಿಸುವುದು ಸರಕಾರದ ಪ್ರಸ್ತುತ ನೀತಿಯಾಗಿದೆ. ಈಗಾಗಲೇ ಒಟ್ಟು ಹತ್ತು ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಖಾಸಗಿಯವರಿಗೆ ದೀರ್ಘಾವಧಿಗೆ ಗುತ್ತಿಗೆ ನೀಡಿ ಪುನಶ್ಚೇತನಗೊಳಿಸಲಾಗಿದೆ ಎಂದು ವಿವರಿಸಿದರು.

ಬಿಎಸ್ ಎಸ್ ಕೆ ಸಹಕಾರಿ ಸಕ್ಕರೆ ಕಾರ್ಖಾನೆಯನ್ನು 2022–23ನೇ ಹಂಗಾಮಿನಿಂದ 40 ವರ್ಷಗಳ ಅವಧಿಗೆ ಎಲ್ ಆರ್ ಒಟಿ ಆಧಾರದ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡಲು ಟೆಂಡರ್ ಕರೆಯಲಾಗಿತ್ತು. ಪ್ರಿ ಬಿಡ್ ಸಭೆಯಲ್ಲಿ ಬಿಡ್ಡುದಾರರು ಭಾಗವಹಿಸಿದ್ದರೂ ನಿಗದಿಪಡಿಸಿದ ಅವಧಿಯಲ್ಲಿ ಒಬ್ಬರೂ ಭರ್ತಿಮಾಡಿದ ಅರ್ಜಿ ಸಲ್ಲಿಸಲಿಲ್ಲ. ಎರಡನೇ ಬಾರಿ ಟೆಂಡರ್ ಕರೆದಾಗ ಸರ್ಕಾರದ ಷರತ್ತುಗಳಿಗೆ ಆಕ್ಷೇಪ ವ್ಯಕ್ತಪಡಿಸಿ ಯಾವ ಬಿಡ್ಡುದಾರರೂ ಭಾಗವಹಿಸಲಿಲ್ಲ.



**ಬೀದರ್ ಸಕ್ಕರೆ ಕಾರ್ಖಾನೆ ಗುತ್ತಿಗೆ ನೀಡಲು ಮತ್ತೆ ಟೆಂಡರ್**

ಹೀಗಾಗಿ ಬಿಡ್ಡುದಾರರು ಸರ್ಕಾರದ ಷರತ್ತುಗಳ ಸಡಿಲಿಕೆ ಕೋರಿ ಸಲ್ಲಿಸಿರುವ ಮನವಿ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕಬ್ಬು ಅಭಿವೃದ್ಧಿ ಆಯುಕ್ತರು 2023ರ ಮಾರ್ಚ್ 16ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರು.

ಈ ಹಿನ್ನೆಲೆಯಲ್ಲಿ ಕಾರ್ಖಾನೆಗೆ ಸಾಲ ನೀಡಿರುವ ಹಣಕಾಸು ಸಂಸ್ಥೆಗಳು ಏಕ ಕಾಲ ತೀರುವಳಿ ಯೋಜನೆಯಲ್ಲಿ ಎಷ್ಟು ಮೊತ್ತಕ್ಕೆ ಒಪ್ಪಲಿವೆ ಎಂಬ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ಕಾರ್ಖಾನೆಗೆ ಸೂಚನೆ ನೀಡಲಾಗಿತ್ತು ಎಂದು ಸಚಿವರು ತಿಳಿಸಿದರು.

ಏಕ ತೀರುವಳಿ ಯೋಜನೆಯಲ್ಲಿ ಬಡ್ಡಿ ಮನ್ನಾ ಮಾಡುವ ಪ್ರಸ್ತಾವನೆಗೆ ಬ್ಯಾಂಕುಗಳಿಂದ ಪ್ರತಿಕ್ರಿಯೆ ಬಂದಿರಲಿಲ್ಲ. ಹೀಗಾಗಿ ಸರ್ಕಾರದ ಹಂತದಲ್ಲಿಯೇ ಬಡ್ಡಿ ಮನ್ನಾ ಮಾಡಬೇಕು ಹಾಗೂ ಲೀಸ್ ಪ್ರಕ್ರಿಯೆ ಪೂರ್ಣಗೊಳಿಸಿ ಕಾರ್ಖಾನೆ ಪುನರಾರಂಭ ಮಾಡಬೇಕು ಎಂದು ಕಾರ್ಖಾನೆ ಆಡಳಿತ ಮಂಡಳಿ ಸರ್ಕಾರಕ್ಕೆ ಮನವಿ ಮಾಡಿತ್ತು.

ಈ ನಡುವೆ ಕಾರ್ಖಾನೆಗೆ ಪಡೆದಿದ್ದ ಸಾಲ ಸುಸ್ತಿಯಾಗಿದ್ದರಿಂದ ಜಿಲ್ಲಾಧಿಕಾರಿ ಅನುಮತಿ ಮೇರೆಗೆ ಬೀದರ್ ಜಿಲ್ಲಾ ಸಹಕಾರಿ ಬ್ಯಾಂಕ್ ಆಡಳಿತ ಮಂಡಳಿ ಕಾರ್ಖಾನೆಯ ಚರ ಮತ್ತು ಸ್ಥಿರ ಆಸ್ತಿಯನ್ನು ಬಹಿರಂಗ ಹರಾಜು ಪ್ರಕ್ರಿಯೆ ಕೈಗೊಂಡಿದ್ದು, 184 ಕೋಟಿ ರೂ.ಗಳಿಗೆ ಸುಭಾಷ್ ಗಂಗಾ ಹುಮನಾಬಾದ್ ಅವರಿಗೆ ನೀಡಲಾಗಿತ್ತು ಎಂದು ಹೇಳಿದರು.

ಸರ್ಕಾರದ ಅನುಮತಿ ಪಡೆ–ಯದರೆ ಹರಾಜು ಮಾಡಲು ಅನುಮತಿ ನೀಡಿದ್ದಾರೆ ಎಂದು ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿ ಜಿಲ್ಲಾಧಿಕಾರಿ ವಿರುದ್ಧ ಸರ್ಕಾರಕ್ಕೆ ದೂರು ಸಲ್ಲಿಸಿತ್ತು. ಈ ಹಿನ್ನೆಲೆಯಲ್ಲಿ ಕಳೆದ ವರ್ಷ ಬೆಳಗಾವಿಯಲ್ಲೇ ನಡೆದಿ ಚಳಿಗಾಲದ ಅಧಿವೇಶನದ ಸಮಯದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರ ಸಮ್ಮುಖದಲ್ಲಿ ಸಭೆ ನಡೆಸಿ ಹರಾಜು ಪ್ರಕ್ರಿಯೆ ಸ್ಥಗಿತಗೊಳಿಸಲಾಗಿತ್ತು ಎಂದು ವಿವರಿಸಿದರು.

ಕಾರ್ಖಾನೆ ಪುನರಾರಂಭಕ್ಕೆ ಕಳೆದ ಜೂನ್ 26ರಂದು ಬೆಂಗಳೂರಿನಲ್ಲಿ ಸಭೆ ನಡೆಸಿದ ಸಂದರ್ಭದಲ್ಲಿ ಸರ್ಕಾರದಿಂದ ಆರ್ಥಿಕ ನೆರವು ಪಡೆಯಬೇಕು ಎಂಬ ಅಭಿಪ್ರಾಯಕ್ಕೆ ಬರಲಾಗಿತ್ತು. ಹಾಗೂ ಕಾರ್ಖಾನೆಯಲ್ಲಿ ಎಥನಾಲ್ ಘಟಕ ಮತ್ತು ಸಹ ವಿದ್ಯುತ್ ಘಟಕ ಸ್ಥಾಪನೆಗೆ ರಾಜ್ಯ ಸರ್ಕಾರದ ಗ್ಯಾರಂಟಿ ಮೂಲಕ 550 ಕೋಟಿ ರೂ. ಆರ್ಥಿಕ ನೆರವು ಕೋಡಿ ಎನ್ ಸಿ ಡಿಸಿಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ ನೇರ ಹಣಕಾಸು ಮಾನದಂಡಗಳನ್ನು ಪೂರೈಸದ ಕಾರಣ ರಾಜ್ಯ ಸರ್ಕಾರವೇ ಪ್ರಾಥಮಿಕ ಸಾಲಗಾರನಾಗಿ ಶಿಫಾರಸ್ಸು ಮಾಡಬಹುದು ಎಂದು ಎನ್ ಸಿಡಿಸಿ ತಿಳಿಸಿತ್ತು ಎಂದು ಸಚಿವರು ವಿವರಿಸಿದರು.

## ಕೈಗಾರಿಕೋದ್ಯಮಿಗಳಿಗೆ ಅರಿವು ಕಾರ್ಯಗಾರ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಇಲ್ಲಿನ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ 2025–26ನೇ ಸಾಲಿನ ರಾಂಪ್ ಯೋಜನೆಯಡಿಯಲ್ಲಿ ಬೆಂಗಳೂರಿನ ಭಾರತೀಯ ರಫ್ತು ಸಂಸ್ಥೆಯ ರಫ್ತು ಉತ್ತೇಜನ ಮತ್ತು ಸೌಲಭ್ಯ ಒಕ್ಕೂಟ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ಕೈಗಾರಿಕೋದ್ಯಮಿಗಳಿಗೆ ಒಂದು ದಿನದ ಅರಿವು ಮೂಡಿಸುವ ಕಾರ್ಯಗಾರವನ್ನು ನಗರದ ಹೈದ್ರಾಬಾದ್ ರಸ್ತೆಯ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಡಿಸೆಂಬರ್ 10ರ ಸಂಜೆ 4 ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯಲ್ಲಿರುವ ಎಲ್ಲಾ ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಕೈಗಾರಿಕಾ ಘಟಕಗಳ ಮುಖ್ಯಸ್ಥರು, ಉದ್ದಿಮೆದಾರರು ಕಾರ್ಯಾಗಾರದಲ್ಲಿ ಭಾಗವಹಿಸಿ ಸದುಪಯೋಗಪಡಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಸಹಾಯಕ ನಿರ್ದೇಶಕರಾದ ಲಕ್ಷ್ಮೀಕಾಂತ ಕುಲಕರ್ಣಿ ಅವರ ಮೊಬೈಲ್ ಸಂಖ್ಯೆ 8861241093ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ.ಬಿ.ಆರ್ ಅಂಬೇಡ್ಕರ್ ಜೀವನ ಕಥನ ಕುರಿತಾದ ಮಹಾಯಾನ ಕಾದಂಬರಿ ಲೋಕಾರ್ಪಣೆ

**ಮಹಿಳೆಯರು ಸಮಾಜಿಕ,ಆರ್ಥಿಕ ಮತ್ತು ರಾಜಕೀಯವಾಗಿ, ಸದೃಡರಾಗಲು ಸಂವಿಧಾನವೆ ಕಾರಣವಾಗಿದೆ:- ಬೂಕರ ಪ್ರಶಸ್ತಿ ವಿಜೇತ ದೀಪಾ ಬಸ್ತಿ**

ಕಲಬುರಗಿ:ಸಮಾಜದಲ್ಲಿಅಸಮಾನತೆಯನ್ನು ಹೋಗಲಾಡಿಸಲು ಹಗಲಿರುಳೆನ್ನದೆ ಅವಿರತವಾಗಿಶ್ರಮಸಿದ ಮಹಾನ್ ವ್ಯಕ್ತಿ ಸಂವಿದಾನರಚನೆಯನ್ನುಮಾಡವುದರ ಮುಖಾಂತರ ಮಹಿಳೆಯರಿಗೆ ಸಾಮಾಜಿಕವಾಗಿ,ಆರ್ಥಿಕವಾಗಿ,ಮತ್ತು ರಾಜಕೀಯವಾಗಿ ಪ್ರತಿಯೊಂದು ಕ್ಷೇತ್ರದಲ್ಲಿಸಾಧನೆಯನ್ನುಮಾಡುವುದಕ್ಕೆ ಅವಕಾಶಗಳು ಸಿಗುವಂತಾಗಲೂ ಕಾರಣಿಭೂತರಾದ ಮಹಾನ್ ವ್ಯಕ್ತಿ ಡಾ.ಬಿ.ಆರ್ ಅಂಬೇಡ್ಕರ್ ಎಂದು ಲೇಖಕರು ಮತ್ತು ಬೂಕರ ಪ್ರಶಸ್ತಿ ವಿಜೇತರಾದ ದೀಪಾ ಬಸ್ತಿ ಹೇಳಿದರು

ಮಂಗಳವಾರದಂದು ಗುಲ್ಬರ್ಗ ವಿಶ್ವವಿದ್ಯಾಲಯ ಕಲ್ಬುರ್ಗಿ, ಮಹಾತ್ಮ ಗಾಂಧಿ ಸಭಾಂಗಣ ಕಾರ್ಯಸೌಧದಲ್ಲಿ ಸಪ್ನ ಬುಕ್ ಹೌಸ್ ಬೆಂಗಳೂರು, ಕುಟುಂಬ ಪ್ರಕಾಶನ,ಕಲಬುರಗಿ ಅರ್ಪಿಸುವ ಗುಲಬರ್ಗಾ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಯ ಡೀನರು,ಕಲಾನಿಕಾಯ ಹಾಗೂ ನಿರ್ದೇಶಕರಾದ ಪ್ರೊ. ಎಚ್.ಟಿ. ಪೋತೆ ಅವರು ಬರೆದ ಡಾ. ಬಿ.ಆರ್ ಅಂಬೇಡ್ಕರ್ ಜೀವನ ಕಥನ ಕುರಿತಾದ ಮಹಾಯಾನ ಕಾದಂಬರಿ ಲೋಕಾರ್ಪಣೆಗೊಳಿಸಿದರು ( ಅನುವಾದ )ವಿಷಯದ ಕುರಿತು ಮಾತನಾಡಿದರು.

ಅದರ ಜೊತೆಗೆ ಅನುವಾದದಲ್ಲಿ ತಮಗೆ ಯಾವ ರೀತಿಯಾಗಿ ಬೂಕರ್ ಪ್ರಶಸ್ತಿ ದೊರೆಯಿತು ಎಂಬುದರ ಕುರಿತು ತಿಳಿಸುವುದರ ಜೊತೆಗೆ ಯಾವುದೆ ಒಂದು ಕೃತಿ ಅಥವಾ ಕಾದಂಬರಿಯು ಒಂದು ಭಾಷೆಯಿಂದ ಇನ್ನೊಂದು ಭಾಷೆಗೆ ಅನುವಾದಗೊಳ್ಳದಿದ್ದರೆ ಇಷ್ಟೊಂದು ವೈವಿದ್ಯಮಯವಾಗಿ ಇರುತ್ತಿರಲಿಲ್ಲ ಮತ್ತು ಓದುಗರಿಗೆ ಹೆಚ್ಚಿನ ಜ್ಞಾನವನ್ನು ಪಡೆದುಕೊಳ್ಳಲು ಸಾಧ್ಯವಾಗುತ್ತಿರಲಿಲ್ಲ. ಎಲ್ಲಾ ಭಾಷೆಗಳಿಗು ಸಮಾನವಾದ ಪ್ರಾತಿನಿಧ್ಯವನ್ನುನೀಡುವುದರ ಜೊತೆ-ಗೆ ಬೇರೆ ಭಾಷೆಯ ಕೃತಿಗಳನ್ನು ಓದುವುದರಿಂದ ನಮ್ಮ ಆಲೋಚನಾ ಶಕ್ತಿಬೆಳವಣಿಗೆಗೆ ಸಹಕಾರಿಯಾಗುತ್ತದೆ. ಎಂದರು.

ಸಾಂಸ್ಕೃತಿಕ ರಾಜಕೀಯ ವಿಷಯುಗಳು,ಸಾರ್ವಜನಿಕರು ಹೇಳುವ ಕಥೆಗಳು ಇವೆಲ್ಲವನ್ನು ಗಮನದಲ್ಲಿರಿಸಿಕೊಂಡುಭಾಷಾಂತರವನ್ನು ಮಾಡಬೇಕು.ಉತ್ತರ ಕರ್ನಾಟಕದ ಭಾಷೆಯಲ್ಲಿನಕೃತಿಗಳನ್ನು,ಕಾದಂಬರಿಗಳ್ನು ಹೆಚ್ಚಾಗಿ ಬೇರೆ ಭಾಷೆಗೆ ಭಾಷಾಂತರ ಮಾಡಿಲ್ಲ.ಈ ಭಾಗದ ಅನುವಾದಕರು ಕ್ನನಡ ಭಾಷೆಯಲ್ಲಿನ ಹೆಚ್ಚಿನ ಕೃತಿಗಳನ್ನು ಬೇರೆ ಬಾಷಗೆ ಭಾಷಾಂತರವನ್ನು ಮಾಡಬೇಕು ಎಂದು ಹೇಳಿದರು ಕನ್ನಡ ಭಾಷೆಯನ್ನು ಇಂಗ್ಲೀಷ ಭಾಷೆಗೆ ಅನುವಾದವನ್ನು ಮಾಡವಾಗ ಹೆಚ್ಚಿನ ಜಾಗೃತಿಯನ್ನು ವಹಿಸಿ ಅನುವಾದ ಮಾಡಬೇಕೆಂದು ಅವರು ಹೇಳಿದರು.

ವಿಮರ್ಶಕರು ಮತ್ತು ಸಾಹಿತಿಗಳಾದ ಎಸ್.ಆರ್. ವಿಜಯ ಶಂಕರ ಅವರು ಕನ್ನಡ ವಿಭಾಗದ ಮುಖ್ಯಸ್ಥರಾದ ಎಚ್.ಡಿ.ಪೋತೆ ಅವರು ಬರೆದ ಮಹಾಯಾನ ಕಾದಂಬರಿ ಪರಿಚಯಿಸಿ ಮಾತನಾಡಿ,ವಿಜ್ಞಾನದ ಅನುವಾದಗಳು ಕನ್ನಡ ಭಾಷೆಗೆ ಭಾಷಾತರಿಸಬೇಕು ಶಿವಾರಾಂ ಕಾರಂತ,ಮತ್ತು ಕುವೆಂಪು ಅವರ ಕೃತಿಗಳನ್ನು ವಿಜ್ಞಾನಕ್ಕೆ ಅನುವಾದ ಮಾಡಲು ವಿದ್ಯಾರ್ಥಿಗಳಿಗೆ ಸೆಮಿನಾರ್ ಏರ್ಪಡಿಸಿ ವಿದ್ಯಾರ್ಥಿಗಳ ಜ್ಞಾನರ್ಜನೆಗೆ ಸಹಕಾರಿಯಾಗುವಂತೆ ಮಾಡಬೇಕು ಎಂದು ಅವರು ತಿಳಿಸಿದರು.

ಮಹಾಯಾನ ಪುಸ್ತಕದಲ್ಲಿ ಡಾ.ಬಿ.ಆರ್.ಅಂಬೇಡ್ಕರ ರವರ ಸುದೀರ್ಘ ಹೋರಾಟದ ಬದುಕಿನ ಹಾದಿ ಕುರಿತು ಭಾರತೀಯ ವರ್ಗ ಮತ್ತು ವರ್ಣದ ಕುರಿತು ಮತ್ತು ಡಾ. ಬಿ.ಆರ್. ಅಂಬೇಡ್ಕರ್ ಸಾಮಾಜಿಕ ಸಂಘರ್ಷಗಳ ನೈತಿಕ ಜೀವನದ ಬಹಳಷ್ಟು ಅಂಶಗಳು ಈ ಮಹಾಯಾನದ ಕಾದಂಬರಿಯಲ್ಲಿ ತಿಳಿಸಲಾಗಿದೆ. ಸಮಾನತೆ ಹಕ್ಕುಗಳನ್ನು ಪಡೆಯಲು ಸಾಧ್ಯವಾಗಿದ್ದು, ಸಂವಿಧಾನದಿಂದ ಎಂಬುದನ್ನು ಪ್ರತಿಯೊಬ್ಬ ಅರಿತುಕೊಳ್ಳಬೇಕೆಂದರು.

ಗುಲಬರ್ಗಾ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಯ ಡೀನರು,ಕಲಾನಿಕಾಯ ಹಾಗೂ ನಿರ್ದೇಶಕರಾದ ಪ್ರೊ.ಎಚ್.ಟಿ. ಪೋತೆ ಅವರು ಮಾತನಾಡಿ,ಸುಮಾರು 25 ವರ್ಷಗಳ ವೃತ್ತಿಜೀವನದಲ್ಲಿ ಸಾಮಾಜದಲ್ಲಿನ ಪ್ರತಿಯೊಂದು ಸಮಸ್ಯೆಗಳನ್ನು ಎದುರಿಸಿ ಬುದ್ಧ , ಬಸವ, ಮತ್ತು ಅಂಬೇಡ್ಕರ ಅವರನ್ನು ಯಾವುದೇ ಜಾತಿ ವರ್ಗಕ್ಕೆ ಸಿಮಿತಗೊಳಿಸದೆ ಅವರ ತತ್ವಗಳನ್ನು ಆದರ್ಶ ವ್ಯಕ್ತಿಗಳನ್ನು ಸ್ಪೂರ್ತಿಯಾಗಿರಿಸಿಕೊಂಡು ಡಾ.ಬಿ.ಆರ್. ಅಂಬೇಡ್ಕರ ಅವರು ಹೇಳುವಂತೆ ಪ್ರತಿಯೊಬ್ಬ ವಿದ್ಯಾರ್ಥಿಗಳು ತಾವು ಉತ್ತಮ ಶಿಕ್ಷಣವನ್ನು ಪಡೆಯುವ ಮೂಲಕ ಜಗತ್ತು ಅಂಜುವಂತೆ ಓದಿನಲ್ಲಿ ತೊಡಗಿಸಿಕೊಳ್ಳಬೇಕೆಂದು ಅದರಂತೆ ಕುವೆಂಪು ಅವರ ಮಾತಿನಂತೆ ಟೀಕೆಗಳು ಸಾಯುತ್ತವೆ ನಾವು ಮಾಡುವ ಕೆಲಸಗಳು ಶಾಶ್ವತವಾಗಿ ಉಳಿಯುತ್ತವೆ ಅದಕ್ಕೆ ಪ್ರತಿಯೊಬ್ಬರು ಒಳ್ಳೆಯ ಸಾಮಾಜಿಕ ಕಾರ್ಯ ತೊಡಗಿಸಿಕೊಳ್ಳಬೇಕು ಎಂದರು.



ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಶಶಿಕಾಂತ ಉಡಿಕೇರಿಯವರು ಅಧ್ಯಕ್ಷತೆ ವಹಿಸಿ ಮಾತನಾಡಿ ಹರಿಯುವ ನದಿ ಮತ್ತು ಬೀಸುವ ಗಾಳಿಯನ್ನು ತಡೆಯಲು ಹೇಗೆ ಸಾಧ್ಯವಿಲ್ಲವೊ ಅದೆ ರೀತಿಯಾಗಿ ವಿದ್ಯಾರ್ಥಿಗಳು ಪಡೆದುಕೊಂಡ ಜ್ಞಾನವನ್ನು ಯಾರಿಂದಲು ಕಸಿದುಕೊಳ್ಳಲು ಸಾಧ್ಯವಿಲ್ಲ. ಲೇಖಕರು ಮತ್ತು ಬೂಕರ್ ಪ್ರಶಸ್ತಿ ವಿಜೇತರಾದ ದೀಪಾ ಬಸ್ತಿಯವರು ನಮ್ಮ ವಿಶ್ವವಿದ್ಯಾಲಯಕ್ಕೆ ವಿಶೇಷ ಆಹ್ವಾನಿತರಾಗಿ ಆಗಮಿಸಿ ಕನ್ನಡ ವಿಭಾಗದ ಮುಖ್ಯಸ್ಥರಾದ ಎಚ್.ಟಿ ಪೋತೆಯವರು ಬರೆದ ಡಾ.ಬಿ.ಆರ್. ಅಂಬೇಡ್ಕರ್ ಜೀವನ ಕಥನ ಕುರಿತಾದ ಮಹಾಯಾನ ಕಾದಂಬರಿ ಲೋಕಾರ್ಪಣೆಯನ್ನು ಮಾಡಿ ಅನುವಾದ ಕುರಿತು ನಮ್ಮ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆಹೆಚ್ಚಿನ ಮಾಹಿತಿನ್ನುನೀಡದ್ದಾರೆ.ಪ್ರತಿಯೊಬ್ಬರಿಗೂ ಶಿಕ್ಷಣ,ಸಮಾನತೆ ಮತ್ತು ಸಮಾನ ಅವಕಾಶಗಳು ಸಿಗಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ಕೇಂದ್ರೀಯ ವಿಶ್ವ ವಿದ್ಯಾಲಯದ ಡೀನರು ಮತ್ತು, ಮಾನವಿಕ ಮತ್ತು ಭಾಷಾ ನಿಕಾಯದ ಪ್ರೊ. ವಿಕ್ರಮ ವಿಸಾಜಿ, ಗುಲ್ಬರ್ಗಾ ವಿಶ್ವ ವಿದ್ಯಾಲಯದ ಕುಲಸಚಿವ ಪ್ರೊ. ರಮೇಶ ಲಂಡನಕರ್, ಡಿ.ಎಸ್.ಎಸ್ ಮುಖಂಡ ಡಿ.ಜಿ ಸಾಗರ್,ಕಲಬುರಗಿ ಸಪ್ನಾ ಬುಕ್‌ಹೌಸ್‌ನ ವ್ಯವಸ್ಥಾಪಕ ನಿರ್ದೇಶಕ

ಮಹಾಂತೇಶ್, ಬರಹಗಾರರು ,ಚಿಂತಕರು,ಎಲ್ಲಾ ವಿಭಾಗದ ಡೀನರುಗಳು,ಸಂಶೋದನಾ ವಿದ್ಯಾರ್ಥಿಗಳು, ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಗುಲಬರ್ಗಾ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಯ ಅತಿಥಿ ಉಪನ್ಯಾಸಕರಾದ ಎಂ.ಬಿ ಕಟ್ಟಿಯವರು ಸ್ವಾಗತಿಸಿ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ವಿವಿಧ ಬೇಡಿಕೆ ಈಡೇರಿಸುವಂತೆ ಸಚೀನ್ ಪರತಾಬಾದ ನೇತೃತ್ವದಲ್ಲಿ ಸಂಸದ ರಾಧಾಕೃಷ್ಣ ದೊಡ್ಡಮನಿ ಅವರಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:

ನಗರದ ಸುಮಾರು ತಿಂಗಳಿನಿಂದ ಬಂದ ಆಗಿರುವ ವಿಮಾನ ಹಾರಾಟ ಪ್ರಾರಂಭ ಮಾಡಿಸಬೇಕು. ವಿಮಾನ ಹಾರಾಟ ಪ್ರಾರಂಭ ಮಾಡಿ ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಅನುಕೂಲ ಮಾಡುವುದು. ಹಾಗೂ ರೈಲ್ವೆ ಇಲಾಖೆಯ ವಿಭಾಗೀಯ ಮುಖ್ಯ ಕಛೇರಿ ಕೆಲಸ ಪ್ರಾರಂಭ ಮಾಡುವುದು, ಸೋಲಾಪೂರ ಯಶವಂತಪೂರ ರೈಲ್ವೆಗೆ "ಗೌತಮ ಬುದ್ಧ ಎಕ್ಸಪ್ರೇಸ್"ಹೆಸರು ನಾಮಕಾರಣ ಮಾಡುವುದು ಹಾಗೂ ಕಲಬುರಗಿ ವಿರದ ಕಾಟಿ ಉಂದತ ಟ್ರೇನನ್ನು ಇದಿರ ಪಡಿಯ ಭಡಕಾಷಣೆ ರಾಡುವುದು ಹಾಗೂ ಸೋಲಾಪೂರದಿಂದ ಮುಂಬೈಗೆ ಹೋಗುವ ಒಂದೆ ಭಾರತ ಟ್ರೇನ್‌ನ್ನು ಕಲಬುರಗಿ ದಿಂದ ಮುಂಬೈಗೆ ಹೊಗುವಂತೆ ಮಾಡಲು ಚಳಿಗಾಲದ ಸದನದಲ್ಲಿ ಧ್ವನಿ ಎತ್ತಿ ಸಮಸ್ಯೆಯನ್ನು ಈಡೇರಿಸುವಂತೆ ಜೈ ಕನ್ನಡಿಗರ ರಕ್ಷಣಾ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಸಚೀನ್ ಎಸ್. ಪರತಾಬಾದ ನೇತೃತ್ವದಲ್ಲಿ ಲೋಕಸಭಾ ಸದಸ್ಯರಾದ ರಾಧಾಕೃಷ್ಣ ದೊಡ್ಡಮನಿ ಅವರಿಗೆ ಮನವಿ ಸಲ್ಲಿಸಲಾಯಿತು.

ಕಲಬುರಗಿ ನಗರದ ಸುಮಾರು ತಿಂಗಳಿನಿಂದ ವಿಮಾನ ಹಾರಾಟ ಬಂದ ಆಗಿರುವದರಿಂದ ಇಲ್ಲಿನ ಭಾಗದ ಜನರು ಹೈದರಾಬಾದ-ಬೀದರ ದಿಂದ ಬೆಂಗಳೂರುಗೆ ಹೋಗುವ ಪರಿಸ್ಥಿತಿ ಬಂದಿರುತ್ತದೆ. ಕಲ್ಯಾಣ ಕರ್ನಾಟಕ ಭಾಗದ ವಿಭಾಗೀಯ ಕಛೇರಿ 06 ಜಿಲ್ಲೆಗಳು ಒಳಗೊಂಡ ಕಲಬುರಗಿ ವಿಮಾನ ನಿಲ್ದಾಣದಲ್ಲಿ ವಿಮಾನ ಹಾರಾಟ ಬಂದ ಆಗಿರುತ್ತದೆ. ವಿಮಾನ ಹಾರಾಟ ಪ್ರಾರಂಭ ಮಾಡಲು ಸದನದಲ್ಲಿ ಸಂಬಂಧಪಟ್ಟ ವಿಮಾನ ಹಾರಾಟ ಕೇಂದ್ರ ಸಚಿವರಿಗೆ ಒತ್ತಾಯ ಮಾಡಿ ಕಲಬುರಗಿ ವಿಮಾನ ನಿಲ್ದಾಣದ ವಿಮಾನ ಹಾರಾಟ ಅತೀ ಶೀಘ್ರದಲ್ಲಿ ಪುನರ ಪ್ರಾರಂಭ ಮಾಡಿ ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಅನುಕೂಲ ಮಾಡಿಕೊಡಬೇಕು. ಹಾಗೂ ರೈಲ್ವೆ ಇಲಾಖೆಯ ವಿಭಾಗೀಯ ಮುಖ್ಯ ಕಛೇರಿ ಕೆಲಸವು ಸುಮಾರು ವರ್ಷಗಳಿಂದ ಸ್ಥಗಿತವಾಗಿದ್ದು, ನಮ್ಮ ಕಲ್ಯಾಣ ಕರ್ನಾಟಕ ಜನರ ದೊಡ್ಡ ಕನಸಾಗಿರುವ ವಿಭಾಗಿಯ ಮುಖ್ಯ ಕಛೇರಿಯ ಕೆಲಸ ಕನಸಾಗಿಯೇ ಉಳಿದಿದ್ದು, ಸದರಿ ಕೆಲಸ ಪ್ರಾರಂಭ ಆದರೆ ಸುಮಾರು ಜನರಿಗೆ ಕೆಲಸ ಸಿಗುತ್ತದೆ. ಕಾರಣ ಈ ಕೆಲಸವನ್ನು ಕೂಡಲೇ ಪ್ರಾರಂಭ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಬೇಕು. ಮತ್ತು ಸೋಲಾಪೂರ ಯಶವಂತಪೂರ ರೈಲ್ವೆಗೆ "ಗೌತಮ ಬುದ್ಧ ಎಕ್ಸಪ್ರೇಸ್" ಹೆಸರು ನಾಮಕಾರಣ ಮಾಡುವದು ನಮ್ಮ ಬೇಡಿಕೆ ಇರುತ್ತದೆ. ಹಾಗೂ ಸೋಲಾಪೂರದಿಂದ ಮುಂಬೈಗೆ ಹೋಗುವ ಒಂದೆ ಭಾರತ ಟ್ರೇನ್ನನ್ನು ಕಲಬುರಗಿ ದಿಂದ ಮುಂಬೈಗೆ ಹೊಗುವಂತೆ ಮಾಡಿದರೆ ನಮ್ಮ ಕಲಬುರಗಿ ಭಾಗದ ಪ್ರಯಾಣಿಕರಿಗೆ ಅನುಕೂಲ ಆಗುತ್ತದೆ.ಆದಕಾರಣ ದಯಮಾಡಿ ಈ ಮೇಲಿನ ಎಲ್ಲಾ ಬೇಡಿಕೆಗಳನ್ನು ಆದಷ್ಟು ಬೇಗ ಈಡೇರಿ ನಮ್ಮ ಭಾಗದ ಪ್ರಯಾಣಿಕರಿಗೆ ಹಾಗೂ ಸಾರ್ವಜನಿಕರಿಗೆ ಅನುಕೂಲ ಮಾಡಲು ಮುಂಬರುವ ಚಳಿಗಾಲದ ಸದನದಲ್ಲಿ ಧ್ವನಿ ಎತ್ತಿ ನಮ್ಮ ಭಾಗದ ಸಮಸ್ಯೆಯನ್ನು ಈಡೇರಿಸಿ. ನಮ್ಮ ಕಲ್ಯಾಣ ಕರ್ನಾಟಕ ಭಾಗದ ಸ್ಥಗಿತವಾಗಿರುವ ಕಲಬುರಗಿ ವಿಮಾನ ಹಾರಾಟ ಪ್ರಾರಂಭ ಮಾಡುವುದ ಮತ್ತು ರೈಲ್ವೆಗೆ ಸಂಬಂಧಪಟ್ಟ ಎಲ್ಲಾ ಕೆಲಸವನ್ನು ಪೂರ್ಣಗೊಳಿಸಬೇಕೆಂದು.

ಒಂದು ವೇಳೆ ಈಗ ನಡೆಯುತ್ತಿರುವ ಚಳಿಗಾಲದ ಅಧೀವೇಶನದಲ್ಲಿ ನಮ್ಮ ಬೇಡಿಕೆಗಳು ಈಡೇರದೇ ಇದ್ದಲ್ಲಿ ಕಲಬುರಗಿ ವಿಮಾನ ನಿಲ್ದಾಣದ ಮುಂದುಗಡೆ ಸಂಘಟನೆ ವತಿಯಿಂದ ಉಗ್ರವಾದ ಹೋರಾಟ ಮಾಡುವದು ಅನಿರ್ಯಾ ಆಗುತ್ತದೆ. ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ:- ಸುರೇಶ ಹನಗುಡಿ, ಅಕ್ಷಯ, ಗುಡ್ಡು ಸಿಂಗ್, ಅಣವೀರ ಪಾಟೀಲ, ಶಿವಕುಮಾರ ಯಾದವ, ಪಿಂಟು ಜಮಾದಾರ, ಹುಲಿಕಂತ, ಮಲ್ಲು, ದರ್ಶನ, ಶ್ರೀಮಂತ ಉಪಸ್ಥಿತರಿದ್ದರು.

# ಶರಣಬಸವೇಶ್ವರ ಜಾತ್ರಾ ಮೈದಾನದಲ್ಲಿನರುವ ಅಂಗಡಿಗಳ ತೆರವು



ಕಲಬುರಗಿ: ನ್ಯಾಯಾಲಯದ ಆದೇಶದ ಮೇರೆಗೆ ನಗರದ ಶರಣಬಸವೇಶ್ವರ ಜಾತ್ರಾ ಮೈದಾನದಲ್ಲಿರುವ ಜೆಸಿಬಿ ಮೂಲಕ ಅಂಗಡಿಗಳನ್ನು ತೆರವು ಮಾಡಲಾಯಿತು. ಮಹಾನಗರ ಪಾಲಿಕೆ ಆಯುಕ್ತ ಅವಿನಾಶಶಿಂಧೆ, ಪಾಲಿಕೆ ಅಧಿಕಾರಿ ಅಭಯ್ ಕುಮಾರ್ ಸೇರಿದಂತೆ ಇತರ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷೆ ಮಾತೋಶ್ರೀ ದಾಕ್ಷಾಯಿಣಿ ಎಸ್. ಅಪ್ಪ, ಸಂಘದ ಕಾರ್ಯದರ್ಶಿ ಬಸವರಾಜ ಎಸ್.ದೇಶಮುಖ ಅವರು ಅಂಗಡಿಗಳ ತೆರವು ಕಾರ್ಯಾಚರಣೆ ಸ್ಥಳಕ್ಕೆ ಭೇಟಿ ನೀಡಿದರು.

# NSS ಶಿಬಿರ ಯುವ ಮನಸ್ಸನ್ನು ರಾಷ್ಟ್ರ ಮನಸ್ಸಿನಡೆಗೆ ಕೊಂಡ್ಯೊಯುವ ಸೇತುವ ಕೆಂಚಪ್ಪ.ಕೆ.ಬಾವಿಮನಿ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಾಲೂಕಿನ ಅಮರೇಶ್ವರದಲ್ಲಿ ಓಖಖ ಶಿಬಿರವು ವಿದ್ಯಾರ್ಥಿಗಳ ಜೀವನದಲ್ಲಿ ಅತ್ಯಂತ ಮಹತ್ವವಾದದ್ದು ಮತ್ತು ನಾಯಕತ್ವ ಗುಣಗಳನ್ನು ಬೆಳೆಸಿಕೊಂಡು ರಾಷ್ಟ್ರ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರವು ಮುಖ್ಯವಾದದ್ದು ಎಂದು ತೋರಿಸುವ ಮತ್ತು ಸಾಬಿತುಪಡಿಸುವ ಶಿಬಿರವಾಗಿದೆ ಎಂದು ೦ಇಇ ಜೆಸ್ಕಾಂ ಕುಷ್ಟಗಿಯ ಶ್ರೀ ಕೆಂಚಪ್ಪ ಬಾವಿಮನಿ ಅಭಿಪ್ರಾಯ ವ್ಯಕ್ತಪಡಿಸಿದರು ಸ್ಥಳೀಯ ಡಾ. ಸಧಾಮೂರ್ತಿ ಇನ್ಫೋ ಮಹಿಳಾ ಪದವಿ ಕಾಲೇಜಿನ 2025-26 ನೇ ಶೈಕ್ಷಣಿಕ ವರ್ಷದ 7 ದಿನದ ವಿಶೇಷ ಶಿಬಿರವನ್ನು ಸುಕ್ಷೇತ್ರ ಶ್ರೀ ಅಮರೇಶ್ವರ ದೇವಸ್ಥಾನದಲ್ಲಿ ಉದ್ಘಾಟಿಸಿ ಮಾತನಾಡಿದರು ಅವರು ಓಖಖ ನ ಆದರ್ಶ ವಾಕ್ಯ "ಓಠಣ ಟಜ, ಭಣಣ ಥಿಠಣ" ಎಂಬುವುದು ವಿದ್ಯಾರ್ಥಿಗಳಲ್ಲಿ ತ್ಯಾಗಭಾವನೆ ಸೇವಾ ಭಾವನೆ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುತ್ತದೆ ಮತ್ತು ವಿದ್ಯಾರ್ಥಿಗಳು ಸಮಾಜದ ಸಮಸ್ಯೆಗಳನ್ನು ಸಮೀಪದಿಂದ ಅರಿತು ಅವುಗಳಿಗೆ ಪರಿಹಾರ ಕಂಡುಕೊಳ್ಳುವ ಅವಕಾಶವನ್ನು ಡಿ ಶಿಬಿರ ನೀಡುತ್ತದೆ ಎಂದು ಓಖಖ ಶಿಬಿರಾರ್ಥಿಗಳಿಗೆ ಕಿವಿಮಾತು ಹೇಳಿದರು ಓಖಖ ಶಿಬಿರದ ಕಾರ್ಯಕ್ರಮಗಳ ಅಧಿಕಾರಿಗಳಾದ ಶ್ರೀ ಶಾಂತಪ್ಪ ಜೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಓಖಖ ಎನ್ನುವುದು ಕೇವಲ ಒಂದು ಕಾರ್ಯಕ್ರಮವಲ್ಲ ಅದು ವಿದ್ಯಾರ್ಥಿಗಳನ್ನು ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸುವ ಒಂದು ಅದ್ಭುತ ವೇದಿಕೆ ನಾವು ಈ ಶಿಬಿರದಲ್ಲಿ ಪರಿಸರದ ಸಂರಕ್ಷಣೆ ಆರೋಗ್ಯ ಜಾಗೃತಿ ಮತ್ತು ಗ್ರಾಮೀಣ ಸೇವೆಗಳ ಕುರಿತು ಅರಿವು ಮೂಡಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಎಂದರು, ಹಾಗೂ ಈ ಶಿಬಿರವನ್ನು ಆಯೋಜಿಸಲು ಸಹಕಾರ ನೀಡಿದ ಕಾಲೇಜಿನ ಆಡಳಿತ ಮಂಡಳಿ ಪ್ರಾಚಾರ್ಯರು, ಮತ್ತು ಆಡಳಿತಾಧಿಕಾರಿಗಳು ಧನ್ಯವಾದ ಹೇಳಿದರು. ಕೊನೆಯದಾಗಿ ಅಧ್ಯಕ್ಷಿಯ ನುಡಿಯನ್ನಾಡಿದ ಕಾಲೇಜಿನ ಆಡಳಿತ ಅಧಿಕಾರಿಗಳಾದ ಶ್ರೀ ವಿನೋದ್ ಗುಡಿಮನಿ ಅವರು ತಮ್ಮ ವಿದ್ಯಾರ್ಥಿ ಜೀವನದ ಓಖಖ ಶಿಬಿರದ ನೆನಪುಗಳನ್ನು ಮೆಲುಕು ಹಾಕಿದರು. ಈ ಶಿಬಿರದ ಮೂಲಕ ವಿದ್ಯಾರ್ಥಿಗಳು ಸಮಾಜದ ನೈಜ ಪರಿಸ್ಥಿತಿಗಳನ್ನು ಅರಿತು ಸೇವೆಯ ಮೂಲಕ ನಾಯಕತ್ವ ಪಾಠ ಕಲಿಯುತ್ತಾರೆ ಗ್ರಾಮೀಣ ಬದುಕಿನ ಸ್ಪಂದನೆ ಶ್ರಮದ ಗೌರವ ಮತ್ತು ಸಾಮೂಹಿಕ ಬದುಕಿನ ಚಿತ್ರಣ ಕಂಡು, ಭಾವನಾತ್ಮಕವಾಗಿ ಸ್ಪಂದಿಸುತ್ತಾರೆ ಎಂದು ಹೇಳಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಶ್ರೀಮತಿ ಅರ್ಪಿತ.ಕೆ.ಬಾವಿಮನಿ, ಗೌರವಾಧ್ಯಕ್ಷರಾದ ಶ್ರೀ ಸಂಗಪ್ಪ ಬಾವಿಮನಿ, ಕಾರ್ಯದರ್ಶಿಯವರಾದ ಶ್ರೀ ಆಂಜನೇಯ ಹೆಚ್ ಕಟ್ಟಿಮನಿ ಉಪನ್ಯಾಸಕರಾದ ಜಮದಗ್ನಿ, ಮಂಜುನಾಥ, ಬಸವರಾಜ, ಮಾರುತಿ ಶ್ರೀಮತಿ ಸಾವಿತ್ರಿ ದೀಪಾ, ಚೈತ್ರಾ, ಪೂಜಾ ಮತ್ತು ವಿದ್ಯಾರ್ಥಿಗಳು

# ಬಿಜೆಪಿ ಮುಖಂಡರು ಕೈ ತೆಕ್ಕೆಗೆ ॥ ಸಚಿವ ಖಂಡ್ರೆ ಹೇಳಿಕೆ ಗ್ರಾಮೀಣ ಭಾಗದಲ್ಲಿ ಕೈ ಬಲಪಡಿಸಿ

ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ : ಗಡಿಭಾಗದ ಗ್ರಾಮೀಣ ಪ್ರದೇಶದಲ್ಲಿ ಕಾರ್ಯಕರ್ತರು ಕಾಂಗ್ರೆಸ್ ಪಕ್ಷವನ್ನು ಬಲಪಡಿಸುವ ಕೆಲಸ ಮಾಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಜಿಲ್ಲಾ ಉಸ್ತುವಾರಿ ಸಚಿವರ ನಿವಾಸದಲ್ಲಿ ಭಾನುವಾರ ಇಂಚೂರ್ ಗ್ರಾಮದ ಬಿಜೆಪಿಯ ನೂರಾರು ಮುಖಂಡರನ್ನು ಕಾಂಗ್ರೆಸ್ ಪಕ್ಷಕ್ಕೆ ಬರಮಾಡಿಕೊಂಡು ಮಾತನಾಡಿದರು. ಕಾಂಗ್ರೆಸ್ ಸರಕಾರ ರಾಜ್ಯದಲ್ಲಿ ಉತ್ತಮ ಕೆಲಸ ಮಾಡುತ್ತಿದೆ. ಗ್ಯಾರಂಟಿ ಸೇರಿ ಹತ್ತಾರೂ ಯೋಜನೆ ಮತ್ತು ಕೋಟ್ಯಾಂತರ ಅನುದಾನ ನೀಡಿ ರಾಜ್ಯವನ್ನು ಅಭಿವೃದ್ಧಿ ಪಥದತ್ತ ಕೊಂಡಯ್ಯೊಲಾಗುತ್ತಿದೆ. ಜಿಲ್ಲಾ ಉಸ್ತುವಾರಿ ಸಚಿವನಾಗಿ ಗಡಿ ಜಿಲ್ಲೆ ಬೀದರ್ ನ್ನು ಸಮೃದ್ಧ ಪಡಿಸಲು ನಿರಂತರವಾಗಿ ಶ್ರಮ ವಹಿಸುತ್ತಿದ್ದೇನೆ. ಇಂಚೂರು




ಗ್ರಾಮದ ಮುಖಂಡರು ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆ ಆಗುತ್ತಿರುವುದು ಸಂತಸ ತರಿಸಿದೆ. ಹೊಸ ಕಾರ್ಯಕರ್ತರು ಕಾಂಗ್ರೆಸ್ ಸರಕಾರದ ಯೋಜನೆಗಳನ್ನು ಜನರಿಗೆ ತಲುಪಿಸಿ ಕಾಂಗ್ರೆಸ್ ಪಕ್ಷದ ಶಕ್ತಿಯನ್ನು ಹೆಚ್ಚಿಸುವ ಕೆಲಸ ಮಾಡಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಯುವ ಮುಖಂಡ ಪ್ರವೀಣ ಹಣಮಶೆಟ್ಟಿ ಹಾಜರಿದ್ದರು.

ಸೇರ್ಪಡೆಯಾದವರ ವಿವರ: ಇಂಚೂರ್ ಗ್ರಾಮದ ನೂರಾರು ಮುಖಂಡರು ಬಿಜೆಪಿ ತೊರೆದು ಕಾಂಗ್ರೆಸ್ ಪಕ್ಷ ಸೇರ್ಪಡೆಗೊಂಡರು. ಪಿಕೆಪಿಎಸ್ ಉಪಾಧ್ಯಕ್ಷ ಸಂದೀಪ ಹಣಮಂತ ಬಿರಾದಾರ್, ಪ್ರಮುಖರಾದ ವಿಠಲ್ ಜಗತಾಪ, ಮಾಧವರಾವ ಮಾಳಕಾರಿ, ದತ್ತು ಪಾಟೀಲ್, ಪರಮೇಶ ಪಾಟೀಲ್, ಬಜರಂಗ್ ಮೇತ್ರೆ, ದತ್ತು ಮೇತ್ರೆ, ಕಾಳಿದಾಸ ಲಾಳೆ, ರಾಮ ಬಿರಾದಾರ್, ಲಕ್ಷ್ಮಣ ಸಾಗವೆ, ವಿಶಾಲ್ ಜಗತಾಪ, ಬಾಲಾಜಿ ಬಿರಾದಾರ್, ಮಾರುತಿ ಬಿರಾದಾರ್, ಭರತ್ ಪಾಟೀಲ್, ಬಾಲಾಜಿ ಬಿರಾದಾರ್, ಪ್ರಶಾಂತ್ ಬಂಗಾರೆ, ಮಾರುತಿ ಮೇತ್ರೆ, ವಿಜಯಕುಮಾರ ಜಗತಾಪ ಸೇರಿ ಹಲವರು ಕೈ ಹಿಡಿದರು.

# ಸ್ವಾಮಿತ್ವ ಯೋಜನೆ ಸದುಪಯೋಗ ಪಡೆದುಕೊಳ್ಳಿ- ಡಾ. ಶೈಲೇಂದ್ರ ಬೆಲ್ದಾಳೆ

ಮಲ್ಲಮ್ಮ ನುಡಿ ವಾರ್ತೆ ಬೀದರ್: ಗ್ರಾಮೀಣ ಜನರಿಗೆ ಆಸ್ತಿಯ ಹಕ್ಕು ಕಲ್ಪಿಸುವ ಕೇಂದ್ರ ಸರ್ಕಾರದ ಮಹತ್ವಕಾಂಕ್ಷೆಯ ಯೋಜನೆಯಾದ ಸ್ವಾಮಿತ್ವ ಯೋಜನೆ ಸದುಪಯೋಗ ಪಡೆದುಕೊಳ್ಳಿ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ರೇಕುಳಗಿ ಗ್ರಾಮದಲ್ಲಿ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಒಂದು ಮಹತ್ವಾಕಾಂಕ್ಷಿ ಯೋಜನೆಯಾದ ಸ್ವಾಮಿತ್ವ ಯೋಜನೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ನಿವಾಸಿಗಳಿಗೆ ಅವರ ಮನೆಗಳ ಮಾಲೀಕತ್ವವನ್ನು ನಿರ್ಧರಿಸಲು, ಆಸ್ತಿ ಕಾರ್ಡ್ ಅಥವಾ 'ಹಕ್ಕು ಪತ್ರ'ಗಳನ್ನು ಡ್ರೋನ್ ತಂತ್ರಜ್ಞಾನ ಬಳಸಿ ನೀಡುವ ಮಹತ್ತರ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ ಪ್ರತಿಯೊಬ್ಬರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಾಸಕರು ಜನರಿಗೆ ಮನವಿ ಮಾಡಿದರು.

ಸ್ವಾಮಿತ್ವ ಇದು ಆಸ್ತಿ ವಿವಾದಗಳನ್ನು ಕಡಿಮೆಗೊಳಿಸಿ, ಗ್ರಾಮೀಣಾಭಿವೃದ್ಧಿ ಮತ್ತು ಆರ್ಥಿಕ ಸಬಲೀಕರಣಕ್ಕೆ ಸಹಾಯ ಮಾಡುತ್ತದೆ ಗ್ರಾಮೀಣ ಭಾಗದ ಜನರು ಇದರ ಸದುಪಯೋಗ ಪಡೆದುಕೊಳ್ಳುವುದು ಅತ್ಯಂತ ಅವಶ್ಯಕವಾಗಿದೆ. ಗ್ರಾಮೀಣ ಭಾಗದ ಜನರಿಗೆ ಆಸ್ತಿ ಹಕ್ಕು ಪತ್ರ ವಿತರಿಸುವ ಮಹತ್ವಾಕಾಂಕ್ಷಿ 'ಸ್ವಾಮಿತ್ವ ಯೋಜನೆ'ಗೆ ಏಪ್ರಿಲ್ 24, 2020ರ ರಾಷ್ಟ್ರೀಯ ಪಂಚಾಯತ್ ದಿನದಂದು ಪ್ರಧಾನ ಮಂತ್ರಿ



ನರೇಂದ್ರ ಮೋದಿಯವರು ಚಾಲನೆ ನೀಡಿದ್ದರು. ಈ ಯೋಜನೆಯಡಿ ಭೂ ಮಾಲೀಕರಿಗೆ ಬ್ಯಾಂಕ್ ಸಾಲ ದೊರೆಯುತ್ತದೆ. ಸ್ವಾಮಿತ್ವ ಯೋಜನೆಯಡಿ ಕಂದಾಯ ಇಲಾಖೆಯು ಹಳ್ಳಿಗಳಲ್ಲಿ ದಾಖಲೆ ಸಂಗ್ರಹಿಸಲು ಆರಂಭಿಸಿದೆ. ಇದರ ಜತೆಗೆ ಡಿಜಿಟಲ್ ವ್ಯವಸ್ಥೆ ಮಾಡಿದ್ದು, ಗ್ರಾಮೀಣ ಭಾಗದಲ್ಲಿ ಹಲವು ಸ್ವತ್ತುಗಳಿಗೆ ಯಾವುದೇ ದಾಖಲೆ ಇರುವುದಿಲ್ಲ. ಈ ಸಮಸ್ಯೆಯನ್ನು ಪರಿಹರಿಸುವ ಸಲುವಾಗ ಕೇಂದ್ರ ಸರ್ಕಾರ ಸ್ವಾಮಿತ್ವ ಯೋಜನೆ ಆರಂಭಿಸಿದೆ. ಹಳ್ಳಿಗಳಲ್ಲಿ ಜನರಿಗೆ ಯಾರ ಬಳಿ ಭೂ ದಾಖಲೆ ಲಭ್ಯ ಇಲ್ಲವೋ ಅಂಥವರಿಗೆ ಮಾಲೀಕತ್ವ ಒದಗಿಸುವುದು ಈ ಯೋಜನೆಯ ಉದ್ದೇಶ. ಇದಕ್ಕಾಗಿ ಆನ್ ಲೈನ್ ಮೂಲಕವೇ ಕೆಲಸ ಮಾಡಲಾಗುತ್ತದೆ. ಹಳ್ಳಿಯಲ್ಲಿನ ಎಲ್ಲ ಜನರ ಆಸ್ತಿಯನ್ನು ಮ್ಯಾಪಿಂಗ್ ಮಾಡಲಾಗುತ್ತದೆ. ಯಾರಿಗೆ ಭೂಮಿ ಇರುತ್ತದೋ ಅಂಥವರಿಗೆ ಇ- ಪೋರ್ಟಲ್ ಮೂಲಕ ಆನ್ ಲೈನ್ ನಲ್ಲಿ ಪ್ರಮಾಣಪತ್ರ ದೊರೆಯುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಎನ್‌ಬಿರೆಡ್ಡಿ ಗುರುಜಿ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಮಾಣಿಕರಾವ ಪಾಟೀಲ್, ಭೂ ದಾಖಲೆಗಳ ಸಹಾಯಕ ನಿರ್ದೇಶಕರಾದ ಮಲ್ಲಿಕಾರ್ಜುನ ಅಮಗೊಂಡ, ತಾಪಂ ಸಹಾಯಕ ನಿರ್ದೇಶಕರಾದ ಸುದೇಶ, ಕಂದಾನ ಇಲಾಖೆ ಅಧಿಕಾರಿ ನಾಗರಾಜ, ಪಿಡಿಓ ವೀರಣ್ಣ, ರೇಕುಳಗಿ ಗ್ರಾಪಂ ಅಧ್ಯಕ್ಷರಾದ ವಿದ್ಯಾವತಿ, ಉಪಾಧ್ಯಕ್ಷರಾದ ಶಿಲ್ಪಾ ಭಕ್ತಕುಮಾರ, ಮನ್ನಾಏಖೇಳ್ಳಿ ಗ್ರಾಪಂ ಅಧ್ಯಕ್ಷ ರಾಜಕುಮಾರ, ಮುಖಂಡರಾದ ಸುರೇಶ ಮಾಶೆಟ್ಟಿ, ಸಂಗಪ್ಪಾ ಪಾಟೀಲ್, ಬಸವರಾಜ ಬೋರಾಳ, ವೀರಶೆಟ್ಟಿ ಮೂಲಗೆ, ವೈಜಿನಾಥ ಹಚ್ಚೆ, ಮಹೇಶ ಹಚ್ಚೆ, ವಿಠ್ಠಲ, ಪ್ರಕಾಶ, ಕ್ರೀಸ್ಟಪರ್ ಗ್ರಾಮಸ್ಥರು ಮತ್ತಿತರರು ಉಪಸ್ಥಿತರಿದ್ದರು.

# ಒಬ್ಬವ ಆತ್ಮ ರಕ್ಷಣಾ ಕಲೆ ಕರಾಟೆ ನೀಡಲು ಅರ್ಜಿ ಆಹ್ವಾನ.

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಮೊರಾರ್ಜಿ ದೇಸಾಯಿ ವಸತಿ ಶಾಲೆ ( ಪ.ಜಾ-304 ) ಅರ್ಜುಣಗಿ ತಾ: ಅಫಜಲಪೂರ ಜಿಲ್ಲೆ ಕಲಬುರಗಿ, 2025-26ನೇ ಸಾಲಿಗಾಗಿ 6,7,8 & 9ನೇ ತರಗತಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ " ಓಬವ್ವ ಆತ್ಮ ರಕ್ಷಣಾ ಕಲೆ "ಗಳ ಕರಾಟೆ ತರಬೇತಿ ನೀಡಲು ಅರ್ಹ ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಶಾಲೆಯ ಪ್ರಾಚರ್ಯರು ತಿಳಿಸಿದ್ದಾರೆ. ಅರ್ಜುಣಗಿ ವಸತಿ ಶಾಲೆಯ ಹೆಣ್ಣು ಮಕ್ಕಳಿಗೆ ಓಬವ್ವ ಆತ್ಮ ರಕ್ಷಣಾ ಕಲೆಗಳ ಕರಾಟೆ ತರಬೇತಿ ನೀಡಲು ಅನುಭವ ಇರುವ ತರಬೇತಿದಾರರು ಅರ್ಜಿಗಳನ್ನು 2025 ರ ಡಿಸೆಂಬರ್ 15. ಒಳಗಾಗಿ ವಸತಿ ಶಾಲೆಗೆ ಖುದ್ದಾಗಿ ಆಗಮಿಸಿ ಅರ್ಜಿ ಸಲ್ಲಿಸಬೇಕು, ತರಬೇತಿದಾರರು ಕಲಬುರಗಿ ಜಿಲ್ಲೆಯವರಾಗಿರಬೇಕು, ಮಹಿಳಾ ತರಬೇತಿದಾರರಿಗೆ ಮೊದಲ ಆದ್ಯತೆ ನೀಡಲಾಗುವುದು, ಹೆಚ್ಚಿನ ಮಾಹಿತಿಗಾಗಿ ಶಾಲೆಯ ಪ್ರಾಂಶುಪಾಲರು 9449906618 ಸಂಪರ್ಕಿಸಲು ಕೋರಲಾಗಿದೆ.

## ವಿದ್ಯುತ್ ವ್ಯತ್ಯಯಉಂಟಾಗಲಿದೆ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ : 110ಕೆವಿ ವಿದ್ಯುತ್ ಕೇಂದ್ರಗಳ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ನಿರ್ವಹಿಸುತ್ತಿರುವ ಹಿನ್ನೆಲೆ 2025ರ ಡಿಸೆಂಬರ್ 11ರ ಗುರುವಾರ ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯ ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಸುರಪುರ ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಕಾರ್ಯ ಮತ್ತು ಪಾಲನಾ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರು (ವಿ) ಅವರು ತಿಳಿಸಿದ್ದಾರೆ.

110/33/11ಕೆವಿ ಮಾರ್ಗ ಖಾನಾಪೂರ, 110/33/11ಕೆವಿ ಮಾರ್ಗ ಶಿರವಾಳ, ಎಲ್ಲಾ ಐಪಿಪಿ ಹಾಗೂ ಮಿನಿ ಹೈಡ್ರೋ, ಇಟಗಾ, ರೋಜಾ, ಹುರಸಗುಂಡಗಿ, ಶಿರವಾಳ, ತಡಿಬಿಡಿ, ಕಾಡಮಗೇರಾ, ಹುಂಡೇಕಲ್, ಕ್ಯಾತನಾಳ, ಗುಂಡಗುರ್ತಿ ಖಾನಪೂರದಲ್ಲಿ ಅಂದು ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಸುತ್ತಮುತ್ತಲಿನ ತಾಂಡಾ, ದೊಡ್ಡಿ ಗ್ರಾಮಗಳ ಸಾರ್ವಜನಿಕರು ಹಾಗೂ ಗ್ರಾಹಕರು ಜೆಸ್ಕಾಂಗೆ ಸಹಕರಿಸುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಟಾಚಾರಕ್ಕೆ ಸಿನಿಮಾ ಮಾಡೋರು ಚಿತ್ರರಂಗಕ್ಕೆ ಬರಬೇಡಿ: ಝೈದ್ ಖಾನ್

ಮಲ್ಲಮ್ಮ ನುಡಿ ವಾರ್ತೆಕೊಪ್ಪಳ :

ಜನ ಉತ್ತಮ ಸಿನಿಮಾಗಳನ್ನ ಯಾವತ್ತೂ ಕೈ ಬಿಟ್ಟಿಲ್ಲ. ಆದರೆ ಕನ್ನಡದ ಸಾಕಷ್ಟು ಸಿನಿಮಾಗಳು ಇಂದು ಜನರನ್ನು ತಲುಪಲು ವಿಫಲವಾಗುತ್ತಿವೆ. ಇದಕ್ಕೆ ಕಾರಣ ಕಾಟಾಚಾರದ ಸಿನಿಮಾ ನಿರ್ಮಾಣ. ಇಂಥ ಮನೋಭಾವದವರು ಚಿತ್ರರಂಗಕ್ಕೆ ಬರಲೇಬೇಡಿ ಎಂದು ನವನಟ ಝೈದ್ ಖಾನ್ ಹೇಳಿದರು. ನಗರದ ಪ್ರವಾಸಿ ಮಂದಿರದಲ್ಲಿ ರವಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿನಿಮಾ ಲೋ ಬಜೆಟ್ ಆಗಿದ್ದರೂ ಕಂಟೆಂಟ್ ಚನ್ನಾಗಿದ್ದರೆ ಜನ ಕೈ ಹಿಡಿತಾರೆ. ಇಲ್ಲದಿದ್ದರೆ ಯಾರೂ ಥೇಟರ್ ಹತ್ತಿರ ಸುಳಿಯಲ್ಲ. ಆಗ ಸಿನಿಮಾ ನಿರ್ಮಿಸಿದವರೇ ತಮ್ಮ ಮನೆಯಲ್ಲಿ ತಾವೇ ಕುಳಿತು ತಮ್ಮ ಸಿನಿಮಾ ನೋಡಬೇಕಷ್ಟೇ ಎಂದು ಅಭಿಪ್ರಾಯಪಟ್ಟರು. ತಾವು ನಟಿಸಿದ ಕನ್ನಡದ ಮೊದಲ ಸಿನಿಮಾ ಬನಾರಸ್, ಮಿಸ್ಟಿರಿಯಸ್ ಲವ್ ಸ್ಟೋರಿ ಆಗಿತ್ತು. ಜನ ಆ ಸಿನಿಮಾ ಮತ್ತು ಹಾಡುಗಳನ್ನು ಇಷ್ಟಪಟ್ಟಿದ್ದರು. ತಮ್ಮ ಎರಡನೇ ಸಿನಿಮಾ ಕಲ್ಟ್ 2026ರ ಜನೇವರಿ 23ರಂದು ಬಿಡುಗಡೆ ಆಗ್ತಿದೆ. ಇದು ಸಹ ಲವ್ ಸ್ಟೋರಿ ಹೊಂದಿದ್ದು ಥ್ರಿಲ್ಲಿಂಗ್ ಅಂಶ ಹೈಲೈಟ್ ಆಗಿದೆ. ಕಲ್ಟ್ ಅಂದ್ರೆ ಮಾಸ್, ಪಂಥ, ಸಂಸ್ಕೃತಿ ಅಂತಾನೂ ಅರ್ಥ ಎಂದರು. ಕಲ್ಟ್ ಸಿನಿಮಾದಲ್ಲಿ ಥ್ರಿಲ್ಲಿಂಗ್ ಇದೆ. ವೈಲೆನ್ಸ್ ಇದೆ. ಮೂರು ಭಿನ್ನತೆಗಳಲ್ಲಿ ಕಾಣಿಸಿಕೊಂಡಿದ್ದೇನೆ. ಮೂರು ಹಾಡುಗಳನ್ನು ನೋಡಿದರೆ ಗೊತ್ತಾಗುತ್ತೆ. ಮೂರು ಗೆಟಪ್‌ಗಳಲ್ಲಿ ಕಾಣಿಸಿಕೊಂಡಿದ್ದೇನೆ. ಸಿನಿಮಾದ ಪ್ರಮೋಷನ್ ವರ್ಕ್ ಶುರುವಾಗಿದ್ದು ಕೊಪ್ಪಳಕ್ಕೆ ಬಂದಿದ್ದೇನೆ. ಇಲ್ಲಿನ ಜನರ ಪ್ರೀತಿ ಕಂಡು ಮೂಕವಿಸ್ಮಿತನಾಗಿದ್ದೇನೆ ಎಂದು ಹರ್ಷ ವ್ಯಕ್ತಪಡಿಸಿದರು. ಜನ ಕನ್ನಡ ಸಿನಿಮಾಗಳಿಗೆ ಬರುತ್ತಿಲ್ಲ. ಆದರೆ ಒಳ್ಳೇ ಸಿನಿಮಾಗಳನ್ನ ಜನ ಕೈ ಬಿಡಲ್ಲ. ಹತ್ತು ವರ್ಷಗಳಿಂದ ಸಿನಿಮಾರಂಗದಲ್ಲಿ ಇದ್ದ ಅನುಭವದಲ್ಲಿ ನನ್ನ ಅನಿಸಿಕೆ ಇದು. ನಮ್ಮ ಕಲ್ಟ್ ಸಿನಿಮಾದ



ಚಿತ್ರೀಕರಣ ಮತ್ತು ಬಿಡುಗಡೆ ಹೊತ್ತಿನಲ್ಲಿ ಖಂಡಿತ ಚಾಲೆಂಜಿಂಗ್ ಸ್ಟಾರ್ ದರ್ಶನ್ ಅಣ್ಣನನ್ನ ಮಿಸ್ ಮಾಡ್ಕೊತಿದಿನಿ. ಡಿಸೆಂಬರ್ 11ಕ್ಕೆ ದರ್ಶನ್ ಅಣ್ಣನ ಸಿನಿಮಾ ಡೆವಿಲ್ ಬಿಡುಗಡೆ ಆಗ್ತಿದೆ. ಎಲ್ಲರೂ ಥೇಟರ್‌ಗೆ ಹೋಗಿ ಸಿನಿಮಾ ನೋಡಿ ಎಂದು ಮನವಿ ಮಾಡಿದರು.

ಶಾರುಖ್ ಖಾನ್ ಪುತ್ರ ಆರ್ಯನ್ ಖಾನ್ ಬೆಂಗಳೂರು ಘಟನೆಗೆ ಸಂಬಂಧಿಸಿದಂತೆ ಈಗಾಗಲೇ ಪ್ರತಿಕ್ರಿಯೆ ಕೊಟ್ಟಿದಿನಿ. ನನ್ನ ದೃಷ್ಟಿಕೋನದಲ್ಲಿ ಅವರು ಸನ್ನೆ ಮಾಡಿದ್ದು ಜನರಿಗಲ್ಲ, ಜೊತೆಲಿದ್ದ ಸ್ನೇಹಿತರಿಗೆ ಎಂದು ಘಟನೆಗೆ ತೆರೆ ಎಳೆದ ಝೈದ್ ಖಾನ್, ಈಗಿನ ಯುವಜನರಿಗೆ ಇಷ್ಟವಾಗುವ ಕೆಲ ಎಲಿಮೆಂಟ್ಸ್ ಕಲ್ಟ್ ಸಿನಿಮಾದಲ್ಲಿದೆ. ಹಾಗಂತ ಮುಜುಗರ ಆಗುವ ಯಾವ ದೃಶ್ಯಗಳು ಇಲ್ಲ. ಕುಟುಂಬ ಸಮೇತ ನೋಡಬಹುದಾದ ಸಿನಿಮಾ ಕಲ್ಟ್. ಸಿನಿಮಾ ಬಗ್ಗೆ ಹೆಚ್ಚು ಮಾತಾಡಲ್ಲ. ಜನ ಖಂಡಿತವಾಗಿ ನನ್ನ ಈ ಸಿನಿಮಾ ಬಗ್ಗೆ ಮಾತಾಡ್ತಾರೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ಶಾಸಕ ಕೆ. ರಾಘವೇಂದ್ರ ಹಿಟ್ನಾಳ ಅವರು ಸನ್ಮಾನಿಸಿ, ಅಭಿನಂದಿಸಿದರು.

### ಅದ್ದೂರಿ ಮೆರವಣಿಗೆ:

ನಟ ಝೈದ್ ಖಾನ್ ಕೊಪ್ಪಳಕ್ಕೆ ಬರುತ್ತಿದ್ದಂತೆ ನಗರದ ಬಸವೇಶ್ವರ ವೃತ್ತದಲ್ಲಿ ಅವರನ್ನು ಸ್ವಾಗತಿಸಲಾಯಿತು. ಬಸವಣ್ಣ ಮೂರ್ತಿಗೆ ಮಾಲಾರ್ಪಣೆ ಮಾಡಿ ಅಲ್ಲಿಂದ ಅದ್ದೂರಿ ಮೆರವಣಿಗೆ ಮೂಲಕ ಅಶೋಕ ವೃತ್ತ, ಸಾಹಿತ್ಯ ಭವನ ತಲುಪಲಾಯಿತು. ಸಾಹಿತ್ಯ ಭವನದಲ್ಲಿ ನಡೆದ ಕಾರ್ಯಕ್ರಮವನ್ನು ಡೋಲು ಭಾರಿಸಿ ಜೈದ್‌ಖಾನ್ ಉದ್ಘಾಟಿಸಿದರು. ನಗರಸಭೆ ಅಧ್ಯಕ್ಷ ಅಮ್ಜದ್ ಪಟೇಲ್ ಮಾತನಾಡಿ ಸಿನಿಮಾ ಗೆಲ್ಲಿಸುವಂತೆ ಜನರಿಗೆ ಮನವಿ ಮಾಡಿದರು. ಈ ವೇಳೆ ಜೈದ್ ಖಾನ್ ಮಾತನಾಡಿ, ನಟಿ ರಚಿತಾ ರಾಮ್, ಮಲೈಕಾ ಅವರು ಬರಬೇಕಿತ್ತು. ವಿಮಾನ ಯಾನ ತೊಂದರೆಯಿಂದ ಬರಲಾಗಿಲ್ಲ. ಕೊಪ್ಪಳದ ಜನತೆಗೆ ನಮಸ್ಕಾರ ತಿಳಿಸಿದ್ದಾರೆ. ಜನೇವರಿ 23ಕ್ಕೆ ಬಿಡುಗಡೆ ಆಗುವ ಕಲ್ಟ್ ಸಿನಿಮಾ ಗೆಲ್ಲಿಸಿ ಎಂದು ನಟ ಝೈದ್ ಖಾನ್ ಕೋರಿದರು. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ ಕಾರ್ಯಕ್ರಮ ನಿರ್ವಹಿಸಿದರು. ಈ ವೇಳೆ ಆಸಿಫ್ ಖಾನ್ ಅಣಗಿ, ಅಕ್ಬರ್ ಪೊಲೀಸ್ ಮನಿ, ನಾಗರಾಜ್ ಮೇಟಿ, ಬಶೀರ್ ಅಹ್ಮದ್, ಪರಶುರಾಮ್ ಕೆರೆಹಳ್ಳಿ ಇದ್ದರು. ಡ್ಯಾನ್ಸ್ ಮಾಸ್ಟರ್ ಸಂಜು ನೇತೃತ್ವದಲ್ಲಿ ನಾಟ್ಯರಾಜ ಡ್ಯಾನ್ಸ್ ಸ್ಟುಡಿಯೋದ ಅಬ್ದುಲ್, ಸಂಜನಾ, ಸಾಹಿತ್ಯ ಗೊಂಡಬಾಳ, ಅಕ್ಷರ ಗೊಂಡಬಾಳ ಇತರರು ಬ್ಲಡಿ ಲವ್ ಹಾಡಿಗೆ ಹೆಜ್ಜೆ ಹಾಕಿದರು, ನಟ ಜೈದ್ ಖಾನ್ ಸಾಥ್ ನೀಡಿ ಜನರನ್ನು ರಂಜಿಸಿದರು. ಅನೇಕ ಸಂಘಟನೆಗಳ ಅಭಿಮಾನಿಗಳು ಬೃಹತ್ ಹಾರದ ಮೂಲಕ ಸನ್ಮಾನಿಸಿ ಝೈದ್ ಖಾನ್ ಅವರನ್ನು ಗೌರವಿಸಿದರು.

## ಅಂಗನವಾಡಿ ಕೇಂದ್ರಕ್ಕೆ ವಿಲಾಸ ಗೌತಮ ಭೇಟಿ



ಸೇಡಂ, ಡಿ. 8. ತಾಲೂಕಿನ ಮದಕಲ್ ಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದ ಕಾಂಗ್ರೆಸ್ ಪಕ್ಷದ ಯುವ ಮುಖಂಡ ವಿಲಾಸ ಗೌತಮ್ ನಿಡಗುಂದ. ಅಂಗನವಾಡಿ ಶಿಕ್ಷಕರು ಹಾಗೂ ಸಿಬ್ಬಂದಿಗಳೊಂದಿಗೆ ಮಾತನಾಡಿ ಮಕ್ಕಳಿಗೆ ಸುಚಿಯಾಗಿ ಮತ್ತು ಪೌಷ್ಟಿಕ ಆಹಾರ ನೀಡಬೇಕು, ಮತ್ತು ಮಕ್ಕಳಿಗೆ ಉತ್ತಮ ಶಿಕ್ಷಣದ ನೀಡಬೇಕೆಂದು ತಿಳಿಸಿದರು.

# ಪರಿಮಳ ಗುರುಕುಲ ಶಾಲೆಯಲ್ಲಿ ಪ್ರತಿಭಾ ಕಾರಂಜಿ

ಮಲ್ಲಮ್ಮ ನುಡಿ ವಾರ್ತೆ

ಮುದಗಲ್ : ಇಲ್ಲಿನ ಪರಿಮಳ ಗುರುಕುಲ ಆಂಗ್ಲ ಮಾಧ್ಯಮ ಶಾಲೆ ಸಂಯುಕ್ತಾಶ್ರಯದಲ್ಲಿ ಕ್ಲಸ್ಟರ್ ಮಟ್ಟದ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಮತ್ತು ಅಭಿನಂದನ ಕಾರ್ಯಕ್ರಮ ಸೋಮವಾರ ಜರುಗಿತು.

ಶಿಕ್ಷಣ ಇಲಾಖೆ ಮತ್ತು ಸಾಕ್ಷರತಾ ಇಲಾಖೆ ಕ್ಷೇತ್ರ ಸಮನ್ವಯಾಧಿಕಾರಿ ಕಾರ್ಯಲಯ, ಲಿಂಗಸಗೂರು ಸಮೂಹ ಸಂಪನ್ಮೂಲ ಕೇಂದ್ರ ಹಮ್ಮಿಕೊಂಡಿದ್ದ ಪ್ರತಿಭಾ ಕಾರಂಜಿ ಕಾರ್ಯಕ್ರಮಕ್ಕೆ ಲಿಂಗಸಗೂರು ತಹಶೀಲ್ದಾರ ಸತ್ಯಮ್ಮದೇವಿ ಉದ್ಘಾಟನೆ ಮಾಡಿದ ಬಳಿಕ ಮಾತನಾಡಿದ ಅವರು ಮಕ್ಕಳಲ್ಲಿ ಅಡಗಿರುವ ಪ್ರತಿಭೆಗಳನ್ನು ಹೊರ ಹಾಕಲು ಪ್ರತಿಭಾ ಕಾರಂಜಿ ಒಂದು ಉತ್ತಮ ವೇದಿಕೆಯಾಗಿದೆ. ನಿರ್ಣಯಕರು ಸರ್ವರನ್ನು ವಿಶ್ವಾಸರ್ಹದಿಂದ ನಿರ್ಣಯಿಸಬೇಕು. ಸ್ಪರ್ದೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ, ಸಕ್ರಿಯವಾಗಿ ಕಾರ್ಯಕ್ರಮದಲ್ಲಿ ಭಾಗಿಯಾಗುವದು ಮುಖ್ಯವಾಗಿದೆ. ವಿದ್ಯಾರ್ಥಿಗಳಲ್ಲಿ ಏಕಾಗ್ರತೆ ಬರಲು ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಜ್ಞಾನ ಅಗತ್ಯವಾಗಿದೆ. ದೇಶದ ಆಸ್ತಿಯನ್ನಾಗಿ ಮಕ್ಕಳನ್ನು ರೂಪಿಸುವುದು ಶಿಕ್ಷಕರು ಮತ್ತು ಪಾಲಕರ ಕರ್ತವ್ಯ. ಪಾಲಕರು ಮಕ್ಕಳ ವಿದ್ಯಾಭ್ಯಾಸ ಮತ್ತು ನಡತೆಗಳ ಮೇಲೆ ಹೆಚ್ಚು ಗಮನ ಹರಿಸಬೇಕು ಹಾಗೂ ಅವರನ್ನು ಮೊಬೈಗಳಿಂದ ದೂರವಿಡುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ವೇದಿಕೆ ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತ ಹೂನುರು,



ಸಿಆರ್ಪಿ ರಾಮಚಂದ್ರ ಢವಳೆ, ಸಜ್ಜಲಗುಡ್ಡ ಪ್ರೌಢ ಶಾಲೆ ಮುಖ್ಯ ಗುರುಗಳು ಬಸ್ಸಪ್ಪ ಹಂದ್ರಾಳ ಮಾತನಾಡಿದರು. ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮ ಅಧ್ಯಕ್ಷತೆ ಶೇಷಗಿರಿ ರಾವ್ ವಹಿಸಿದ್ದರು.

ಬಾಲಕಿಯರ ಪ್ರೌಢ ಶಾಲಾ ಮುಖ್ಯ ಗುರುಗಳು ಬಾಲಚಂದ್ರ ದಾಸರ, ಮುಖ್ಯ ಗುರುಗಳು ಅಕ್ಕಮಹಾದೇವಿ, ದಹಿಕ ಶಿಕ್ಷಕ ರಮೇಶ ದಿಕ್ಷೀತ, ಎಸ್ ವ್ಹಿಎಂ ಪ್ರೌಢಶಾಲಾ ವ್ಯಾಸ್ಥಾಪಕ ಸಂಗಮೇಶ ಸರಗಣಾಚಾರಿ, ಶಿಕ್ಷಕರು ಮಲ್ಲಪ್ಪ, ರಿಯಾಜ, ಮಹಾಂತೇಶ ಬನ್ನಿಗೋಳ ಸೇರಿದಂತೆ ಇತರರಿದ್ದರು.

## ಕ್ಲರ್ಕ್ ಕಂ ಡಿ. ಇ. ಓ ಸಂಘದ ಅಧ್ಯಕ್ಷರಾಗಿ ಸಂಜೀವರೆಡ್ಡಿ ಬೊಗಲೆ, ಉಪಾಧ್ಯಕ್ಷರಾಗಿ ಅವಿನಾಶ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ: ತಾಲ್ಲೂಕಿನ ಕ್ಲ9 ಕಂ ಡಿಇಒ ಸಂಘದ ಪದಾಧಿಕಾರಿಗಳನ್ನು ಜಿಲ್ಲಾ ಉಪಾಧ್ಯಕ್ಷರಾದ ದೋಂಡಿರಾಮ ಅವರ ನೇತೃತ್ವದಲ್ಲಿ ಆಯ್ಕೆ ಮಾಡಲಾಯಿತು. ತಾಲ್ಲೂಕು ಅಧ್ಯಕ್ಷರಾಗಿ ಸಂಜೀವರೆಡ್ಡಿ ಬೋಗಲೆ, ಉಪಾಧ್ಯಕ್ಷರಾಗಿ ಅವಿನಾಶ, ಕಾರ್ಯದರ್ಶಿಯಾಗಿ ವಿಠಲ, ಖಜಾಂಚಿಯಾಗಿ ರಾಚಯ್ಯಾ ಸ್ವಾಮಿ ಅವರನ್ನು ಸರ್ವಾನು ಮತದಿಂದ ಆಯ್ಕೆ ಮಾಡಲಾಯಿತು. ನಂತರ ಸದಸ್ಯರಿಂದ ನೂತನ ಪದಾಧಿಕಾರಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು.

## ಕುಮಟಾ: ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ ಕಾರವಾರ: ಹೆಸ್ಕಾಂ ಕುಮಟಾ ಉಪವಿಭಾಗದ 110ಕೆ.ವಿ ಕುಮಟಾ ಉಪ ಕೇಂದ್ರದಲ್ಲಿ 20 ಎಮ್.ವಿ.ಎ ಶಕ್ತಿ ಪರಿವರ್ತಕ ಕೇಂದ್ರದ ತುರ್ತು ನಿರ್ವಹಣಾ ಕಾಮಗಾರಿ ಇರುವುದರಿಂದ ಕುಮಟಾ ಉಪ ವಿಭಾಗದ 33ಕೆ.ವಿ ಗೋಕರ್ಣ ಹಾಗೂ 33ಕೆ.ವಿ ಮರಾಕಲ್ ಉಪಕೇಂದ್ರದ ಎಲ್ಲಾ ಭಾಗಗಳಲ್ಲಿ ಡಿ.10 ರಂದು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆವರೆಗೆ ಹಾಗೂ ಮುರೂರ 11ಕೆ.ವಿ ಮಾರ್ಗದ ಕೇಬಲ ಬಿಚ್ಚಿ ಅಳವಡಿಸುವ ಕಾಮಗಾರಿ ಇರುವುದರಿಂದ ಕುಮಟಾ ನಗರ ಶಾಖೆಯ 11ಕೆ.ವಿ ಇಂಡಸ್ಟ್ರಿಯಲ್ ಮಾರ್ಗ ಮತ್ತು 11ಕೆ.ವಿ ವಾಲ್ಗಳ್ಳಿ ಮಾರ್ಗದ ಎಲ್ಲಾ ಭಾಗಗಳಲ್ಲಿ ಮತ್ತು ನಗರ ಶಾಖೆಯ 11 ಕೆ.ವಿ ಟೌನ್ ಮಾರ್ಗದಲ್ಲಿ ಆಯ್. ಆರ್.ಬಿರವರ ವಿದ್ಯುತ್ ಮಾರ್ಗ ಸ್ಥಳಾಂತರ ಕಾಮಗಾರಿ ಇರುವುದರಿಂದ ಟೌನ್ ಮಾರ್ಗದ ಎಲ್ಲಾ ಭಾಗಗಳಲ್ಲಿ ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸುವಂತೆ ಹೆಸ್ಕಾಂ ಕುಮಟಾ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್ (ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರವಾರ: ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ ಕಾರವಾರ: ಕಾರವಾರ ಉಪ ವಿಭಾಗದ ವ್ಯಾಪ್ತಿಯಲ್ಲಿ ವಿದ್ಯುತ್ ಮಾರ್ಗ ನಿರ್ವಹಣೆ ಇರುವುದರಿಂದ ಹಬ್ಬುವಾಡ ಫೀಡರಿನ ಹಳೆ ಕೆ.ಎಚ್.ಬಿ, ಹೈ ಚರ್ಚ್ ರೋಡ್, ಮುರುಳಿಧರ ಮಠ, ದೊಬಿಘಾಟ್ ರೋಡ್, ಫಿಶರಿಸ್ ಕಾಲೋನಿ ವಿವಿಧ ಪ್ರದೇಶಗಳಲ್ಲಿ ಡಿ.10 ರಂದು ಬೆಳಗ್ಗೆ 9.30 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸುವಂತೆ ಕಾರವಾರ ಹೆಸ್ಕಾಂ, ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಕಾರವಾರ: ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ ಕಾರವಾರ:: ಕಾರವಾರ ಉಪ ವಿಭಾಗದ ವ್ಯಾಪ್ತಿಯಲ್ಲಿ ವಾಹಕ ಬದಲಾವಣೆ ಕಾಮಗಾರಿ ಇರುವುದರಿಂದ ನಂದನಗದ್ದಾ ಮತ್ತು ಸುಂಕೇರಿ ಫೀಡರಿನ ವಿವಿಧ ಪ್ರದೇಶಗಳಲ್ಲಿ ಡಿ.11ರಂದು ಬೆಳಗ್ಗೆ 9.30 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸುವಂತೆ ಕಾರವಾರ ಹೆಸ್ಕಾಂ, ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಆರ್ಥಿಕ ನೆರವು ಸಿಗದಿದ್ದರೆ ಟೆಂಡರ್ ಕರೆಯುವುದು ಅನಿವಾರ್ಯ

ಮಲ್ಲಮ್ಮ ನುಡಿ ವಾರ್ತೆ ಬೀದರ

NCDC ನೆರವು ಸಿಗದಿದ್ದರೆ ಬೀದರ ಜಿಲ್ಲೆಯ BSSK ಸಕ್ಕರೆ ಕಾರ್ಖಾನೆಯನ್ನು LROT ಆಧಾರದ ಮೇಲೆ ಖಾಸಗಿಯವರಿಗೆ ದೀರ್ಘಕಾಲದ ವರೆಗೆ ಗುತ್ತಿಗೆ ನೀಡಲು ಮತ್ತೊಮ್ಮೆ ಟೆಂಡರ್ ಕರೆಯಲಾಗುವುದು ಎಂದು ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಹೇಳಿದರು.

ಬೆಳಗಾವಿ ವಿಧಾನ ಪರಿಷತ್ ಅಧಿವೇಶನದಲ್ಲಿ ಮಂಗಳವಾರ ಪ್ರಶ್ನೋತ್ತರ ವೇಳೆ ವಿಧಾನ ಪರಿಷತ್ ಶಾಸಕ ಭೀಮರಾವ ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಕ್ಕರೆ ಸಚಿವರು, BSSK ಸೇರಿದಂತೆ ರಾಜ್ಯದ ಒಟ್ಟು 6 ಸಹಕಾರಿ ಸಕ್ಕರೆ ಕಾರ್ಖಾನೆಗಳಿಗೆ ಓಅಆಅ ನೆರವು ಪಡೆಯಲು ಆರ್ಥಿಕ ಇಲಾಖೆಯೊಂದಿಗೆ ಮಾತುಕತೆ ನಡೆಸಲಾಗುವುದು. ಓಅಆಅ ನೆರವು ಸಿಗದೇ ಹೋದಲ್ಲಿ ಖಾಸಗಿಯವರಿಗೆ ಗುತ್ತಿಗೆ ನೀಡಲು ಮತ್ತೆ ಟೆಂಡರ್ ಕರೆಯಲಾಗುವುದು ಎಂದು ತಿಳಿಸಿದರು.

## ವಿವಿಧ ಯೋಜನೆಗಳ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಕಾರವಾರ:

ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆಗಳಾದ ಉದ್ಯೋಗಿನಿ, ಧನಶ್ರೀ ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ ಹಾಗೂ ಚೇತನ ಯೋಜನೆಗಳಿಗೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿದಾರರು ಹತ್ತಿರದ ಬಾಪೂಜಿ ಸೇವಾ ಕೇಂದ್ರ, ಗ್ರಾಮ್ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಕೇಂದ್ರಗಳಲ್ಲಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ಡಿ.15 ರಂದು ಸಂಜೆ 5.30 ರವರೆಗೆ ಅವಕಾಶ ಕಲ್ಪಿಸಲಾಗಿದೆ. ಧನಶ್ರೀ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಗಳಡಿ ಅರ್ಜಿಗಳನ್ನು ಆನ್‌ಲೈನ್ ಮತ್ತು ಆಫ್‌ಲೈನ್ ಎರಡರಲ್ಲೂ ಸಹ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ.

ಹೆಚ್ಚಿನಮಾಹಿತಿಗಾಗಿಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉತ್ತರ ಕನ್ನಡ ಹಾಗೂ ಜಿಲ್ಲಾ ಅಭಿವೃದ್ಧಿ ನಿರೀಕ್ಷಕರು, ಕರ್ನಾಟಕ ರಾಜ್ಯ ಅಭಿವೃದ್ಧಿ ನಿಗಮ ಕಚೇರಿ ಹಾಗೂ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಸಂಪರ್ಕಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಕಚೇರಿಗಳ ದಾಖಲೆಗಳ ನಿರ್ವಹಣೆ ಶಿಸ್ತು ಬದ್ಧವಾಗಿರಲಿ: ಡಾ. ದಿಲೀಷ್ ಶಶಿ

ಮಲ್ಲಮ್ಮ ನುಡಿ ವಾರ್ತೆ ಕಾರವಾರ: ಸರ್ಕಾರಿ ಕಚೇರಿಗಳಲ್ಲಿನ ಎಲ್ಲಾ ಕಾಮಗಾರಿಗಳ ಕಡತ ನಿರ್ವಹಣೆ ಹಾಗೂ ಹಾಜರಾತಿ ದಾಖಲೆಗಳ ನಿರ್ವಹಣೆಯಲ್ಲಿ ಯಾವುದೇ ರೀತಿಯ ಲೋಪವಾಗದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ದಿಲೀಷ್ ಶಶಿ ಸೂಚನೆ ನೀಡಿದರು.

ಅವರು ಮಂಗಳವಾರ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಸಿ ಮಾತನಾಡಿದರು.

ತಾಲೂಕು, ಗ್ರಾಮ ಪಂಚಾಯತ್ ಮಟ್ಟದ ಹಾಗೂ ವಿವಿಧ ಇಲಾಖಾ ಅಧಿಕಾರಿಗಳು ತಮ್ಮ ವ್ಯಾಪ್ತಿಗೆ ಸಂಬಂಧಿಸಿದ ಸರ್ಕಾರಿ ಶಾಲೆಗಳು, ಅಂಗನವಾಡಿ, ಹಾಸ್ಟೆಲ್‌ಗಳಿಗೆ ಪ್ರತಿ ತಿಂಗಳಿಗೊಮ್ಮೆ ಭೇಟಿ ನೀಡಿ ಸ್ವಚ್ಛತೆ, ಆಹಾರದ ಗುಣಮಟ್ಟ, ಸಿಬ್ಬಂದಿಗಳ ಕಾರ್ಯ ವೈಖರಿ, ಹಾಜರಾತಿ ಇತ್ಯಾದಿಗಳ ಕುರಿತು ಜಾಗೃತಿ ವಹಿಸಬೇಕು. ಈ ಕುರಿತು ಯಾವುದೇ ದೂರುಗಳು ಬಾರದಂತೆ ನೋಡಿಕೊಳ್ಳುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದರು. ತಾಲೂಕುವಾರು ಅಭಿವೃದ್ಧಿಗೆ ಸಂಬಂಧಿಸಿದಂತೆ ಶಿಕ್ಷಣ ಇಲಾಖೆಯಡಿ ಮಕ್ಕಳ ಶೈಕ್ಷಣಿಕ ಮಟ್ಟ ಹಾಗೂ ಫಲಿತಾಂಶ ಅಭಿವೃದ್ಧಿಪಡಿಸಲು ಕೈಗೊಂಡ ಕ್ರಮಗಳ ಕುರಿತು ಮಾಹಿತಿ ಪಡೆದು ಸೂಕ್ತ ಸಲಹೆ ನೀಡಿದರು. ಅಕ್ಷರ ದಾಸೋಹ ಕಾರ್ಯಕ್ರಮದಡಿ ಆಹಾರ ವಿತರಣೆಯಲ್ಲಿ ಯಾವುದೇ ಸಮಸ್ಯೆ ಬಾರದಂತೆ ಗಮನ ಹರಿಸಬೇಕು ಎಂದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯಡಿ ಮಕ್ಕಳ ಸುರಕ್ಷತೆ ದೃಷ್ಟಿಯಿಂದ ತಾಲೂಕಿನ ಅಧಿಕಾರಿಗಳು ತಿಂಗಳಲ್ಲಿ ಒಮ್ಮೆಯಾದರೂ ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ಪ್ರಚಲಿತ ವರದಿ ನೀಡುವುದು. ಇನ್ನೂ ಹಾಸ್ಟೆಲ್‌ನಲ್ಲಿ ಮೂಲಭೂತ ಸೌಕರ್ಯಗಳು, ಬಯೋಮೆಟ್ರಿಕ್, ಹಾಜರಾತಿ, ಆಹಾರದ ಗುಣಮಟ್ಟ ಪರಿಶೀಲನೆ ನಡೆಸಿ ಮಕ್ಕಳೊಂದಿಗೆ ಸಂವಹನ ನಡೆಸಬೇಕು ಮತ್ತು ಅವರ ಸಮಸ್ಯೆ ಕುರಿತು ವಿಚಾರಿಸಬೇಕು ಎಂದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖಾ ಅನುದಾನದ ಖರ್ಚು ವೆಚ್ಚಗಳು, ಕಾಮಗಾರಿ ನಿರ್ವಹಣೆ, ಅಭಿವೃದ್ಧಿ ಕಾರ್ಯಗಳ ವರದಿಯನ್ನು ಜಿಲ್ಲಾ ಪಂಚಾಯತ್ ಗೆ ಸಲ್ಲಿಸಬೇಕು. ಇಲಾಖೆವಾರು ಕಾರ್ಯಕ್ರಮಗಳು, ಅಭಿವೃದ್ಧಿ ಕಾರ್ಯಗಳು, ಸಿಬ್ಬಂದಿಗಳ ಕೊರತೆ, ಖರ್ಚು–ವೆಚ್ಚಗಳು, ಇತರೆ ಸಮಸ್ಯೆಗಳಿದ್ದಲ್ಲಿ ವರದಿ ನೀಡುವಂತೆ ಸೂಚಿಸಿದರು.

ಅನಿರ್ಬಂದಿತ ಅನುದಾನ, 2025–26ನೇ ಸಾಲಿನ ಆರ್ಥಿಕ ಪ್ರಗತಿ, ಖಅಕ–ಖಿಖಕ, ಅಡಹಾಕ್ ಕಂಡಿಕೆಗಳು, ವಾರ್ಷಿಕ ಲೆಕ್ಕಪತ್ರ, ಸಕಾಲ, ವಸತಿ, ತಾಲೂಕು ಯೋಜನಾ ಅಭಿವೃದ್ಧಿ ಸಮಿತಿ, 15ನೇ ಹಣಕಾಸು, ಖಕಂಂಕ ವಾರ್ಷಿಕ ಕ್ರಿಯಾ ಯೋಜನೆ, ನಲ್ ಜಲ್ ಮಿತ್ರ, ಎನ್.ಆರ್.ಎಲ್.ಎಮ್, ತೆರಿಗೆ ಸಂಗ್ರಹಣೆ, ಗ್ರಂಥಾಲಯ, ಜೆಜೆಎಮ್ ಯೋಜನೆಗಳಲ್ಲಿ ಅಭಿವೃದ್ಧಿ ಸಾಧಿಸುವಂತೆ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

ಘನ ತ್ಯಾಜ್ಯ ವಿಲೇವಾರಿ ಘಟಕದಡಿ 2 ತಿಂಗಳಲ್ಲಿ ಆದಷ್ಟು ಅಲ್ಲಿನ ಕಸ ವಿಲೇವಾರಿಗೆ ಕ್ರಮ ಕೈಗೊಳ್ಳುವುದು, ಅಗತ್ಯವಿರುವ ಖರ್ಚು ವೆಚ್ಚಗಳಿಗೆ ಸಂಬಂಧಿಸಿದಂತೆ ಮನೆ, ಅಂಗಡಿಗಳು, ಹೋಟೆಲ್ ತೆರಿಗೆ ಸಂಗ್ರಹಣೆ ಮಾಡಬೇಕು. ಹಾಗೂ ಸ್ವಚ್ಛ ಸಂಕೀರ್ಣ ಘಟಕದಡಿ ಸ್ವಚ್ಛ ವಾಹಿನಿ ಬಳಕೆ ಹಾಗೂ ನಿರ್ವಹಣೆ ಸರಿಯಾಗಿ ಆಗಬೇಕು ಎಂದರು. ನರೇಗಾ ಯೋಜನೆಯಡಿ ವಾರ್ಷಿಕ ಗುರಿ ಸಾಧಿಸುವ ನಿಟ್ಟಿನಲ್ಲಿ ಗ್ರಾಮ ಪಂಚಾಯತ್, ಅರಣ್ಯ ಹಾಗೂ ತೋಟಗಾರಿಕಾ ಇಲಾಖೆಗಳು ಸಮನ್ವಯ ಸಾಧಿಸಿ ಇನ್ನೆರಡು ತಿಂಗಳಲ್ಲಿ ಯೋಜನೆ ರೂಪಿಸಿ ಮಾನವ ದಿನಗಳ ಸೃಜನೆ ಮಾಡಬೇಕು. ಕಾಮಗಾರಿ ಮುಕ್ತಾಯದಲ್ಲಿ ಅತೀ ಕಡಿಮೆ ಇರುವ ಗ್ರಾಮ ಪಂಚಾಯತಗಳು ಕ್ರಮ ಕೈಗೊಂಡು ಮುಕ್ತಾಯಗೊಳಿಸಿ ಜಿಲ್ಲಾ ಪಂಚಾಯತ್‌ಗೆ ವರದಿ ಸಲ್ಲಿಸಬೇಕು. ಇಕೆವೈಸಿ ಪ್ರಗತಿಯಾಗಬೇಕು ಜೊತೆಗೆ ಸಮಸ್ಯೆ ಇರುವ ಕೂಲಿಕಾರರ ಮಾಹಿತಿಯನ್ನು ಜಿಲ್ಲಾ ಪಂಚಾಯತ್‌ಗೆ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಆಡಳಿತ ವಿಭಾಗದ ಉಪಕಾರ್ಯದರ್ಶಿ ಎಮ್.ಎಸ್ ಅಲ್ಲಾಭಕ್ಷ, ಯೋಜನಾ ನಿರ್ದೇಶಕ ಕರೀಂ ಅಸಾದಿ, ಮುಖ್ಯ ಯೋಜನಾಧಿಕಾರಿ ಸೋಮಶೇಖರ್ ಮೇಸ್ತ, ಮುಖ್ಯ ಲೆಕ್ಕಧಿಕಾರಿ ಆನಂದ್ ಹಬೀಬ್, ತಾಲೂಕು ಪಂಚಾಯತ್ ಆಡಳಿತಾಧಿಕಾರಿ ದಯಾನಂದ ನಾಯ್ಕ , ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ದೇವರಾಜ ಹಿತ್ತಲಕೊಪ್ಪ ಹಾಗೂ ತಾಲೂಕು ಪಂಚಾಯತ್, ಗ್ರಾಮ ಪಂಚಾಯತ್ ಮತ್ತು ಇಲಾಖಾ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಶಿಕ್ಷಕ ಶಿವಕಾಂತ ಬಿರಾದಾರ್ ಬೀಳ್ಕೊಡುಗೆಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ: ಎಲ್ಲ ವೃತ್ತಿಗಳಿಗಿಂತ ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು ಎಂದು ಎಸ್‌ಡಿಎಂಸಿ ಅಧ್ಯಕ್ಷ ಮಹಾದೇವ ಸ್ವಂತ ಹೇಳಿದರು. ತಾಲೂಕಿನ ಸಿದ್ದೇಶ್ವರ ಗ್ರಾಮದ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಇತ್ತೀಚೆಗೆ ಆಯೋಜಿಸಿದ್ದ ಶಿಕ್ಷಕ ಶಿವಕಾಂತ ಬಿರಾದಾರ್ ಅವರ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಕ್ಕಳ ಭವಿಷ್ಯ ರೂಪಿಸುವ ಗುರುತರ ಜವಾಬ್ದಾರಿ ಎಲ್ಲ ಶಿಕ್ಷಕರ ಮೇಲೆ ಇರುತ್ತದೆ. ಹಾಗಾಗಿ ಶಿಕ್ಷಕರಾದವರೂ ತಮ್ಮ ವೃತ್ತಿಯುದ್ದಕ್ಕೂ ಗೌರವ, ಘನತೆ ಕಾಪಾಡಿಕೊಂಡು ಹೋಗಬೇಕು ಎಂದರು. ಶಿಕ್ಷಕ ಶಿವಕಾಂತ ಬಿರಾದಾರ್ ಸುದೀರ್ಘ ವರ್ಷಗಳ ಕಾಲ ಸೇವೆ ಸಲ್ಲಿಸಿ ಎಲ್ಲ ವಿದ್ಯಾರ್ಥಿಗಳ ಪ್ರೀತಿ, ವಿಶ್ವಾಸ ಗಳಿಸಿದ್ದಾರೆ. ಮುಂದೆಯು ಅವರು ಸೇವೆ ಉತ್ತಮವಾಗಿ ಸಲ್ಲಿಸಲಿ ಎಂದು ಹಾರೈಸಿದರು. ಅಧ್ಯಕ್ಷತೆ ವಹಿಸಿದ ಮುಖ್ಯಗುರು ಜಗನ್ನಾಥ ಪನಶೆಟ್ಟಿ ಮಾತನಾಡಿ, ಶಿಕ್ಷಕ ವೃತ್ತಿಯಲ್ಲಿ ವರ್ಗಾವಣೆ ಸಹಜ ಪ್ರಕ್ರಿಯೆ. ಇವುಗಳ ನಡುವೆ ಮಾಡುವ ಮಾಡುವ ಉತ್ತಮ ಸೇವೆ ಸದಾಕಾಲ ನೆನಪು ಇರುತ್ತದೆ. ಶಿಕ್ಷಕ ಶಿವಕಾಂತ ಬಿರಾದಾರ್ ಅವರು ಉತ್ತಮ ಸೇವೆ ಸಲ್ಲಿಸಿದ್ದಾರೆ ಎಂದು ಶ್ಲಾಘಿಸಿದರು. ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಮಾಜಿ ಅಧ್ಯಕ್ಷೆ ಪ್ರಭಾವತಿ ಪಾಟೀಲ್, ಶಾಮರಾವ ಪರ್ಮಾ, ಸುವರ್ಣಾ, ಶಿವಕುಮಾರ ಕಮಲಾಪುರ, ಭಾರತ ಭೂಷಣ ಚಿದ್ರೆ, ಶಿವರಾಜ ಗುರುಮೂರ್ತಿ ಅಡುಗೆ ಮುಖ್ಯಸ್ಥೆ ಸಂಗೀತಾ ಹಳೆಂಬುರೆ, ಅತಿಥಿ ಶಿಕ್ಷಕಿ ಭವಾನಿ, ಜಯಶ್ರೀ ಸೇರಿದಂತೆ ಹಲವರು ಇದ್ದರು. ಸಹ ಶಿಕ್ಷಕ ಸೋಮನಾಥ ಹೊಸಾಳೆ ನಿರೂಪಿಸಿ, ವಂದಿಸಿದರು.

## ಡಾ. ಉದಯಕುಮಾರ್ ಕಲ್ಯಾಣಿ ನೇಮಕ



ಭಾಲ್ಕಿ: ಲಿಂ. ಪೂಜ್ಯ ಶ್ರೀ ಡಾ. ಚನ್ನಬಸವ ಪಟ್ಟದ್ದೇವರ 136ನೇ ಜಯಂತೋತ್ಸವವನ್ನು 22 ರಂದು ಭೀಮಣ್ಣ ಖಂಡ್ರೆ ತಾಂತ್ರಿಕ ಮಹಾವಿದ್ಯಾಲಯದ ಆವರಣದಲ್ಲಿ ಆಚರಿಸಲು ತೀರ್ಮಾನ ಕೈಗೊಂಡಿದ್ದು, ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಆಡಳಿತ ಮಂಡಳಿಯವರು ಬಿಕೆಐಟಿ ತಾಂತ್ರಿಕ ಕಾಲೇಜಿನ ಕ್ರಿಯಾಶೀಲ ಪ್ರಾಚಾರ್ಯರಾದ ಉದಯಕುಮಾರ ಕಲ್ಯಾಣೆ ಅವರನ್ನು ಕಾರ್ಯಕ್ರಮದ ಸಂಘಟನಾ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ. ಶಿಸ್ತು, ಶಾಂತತೆ ಮತ್ತು ಕಾರ್ಯಕ್ರಮ ಸುಗಮವಾಗಿ ಜರಗುವಂತೆ, ನೋಡಿಕೊಳ್ಳಬೇಕೆಂದು ಆಡಳಿತ ಮಂಡಳಿಯವರು ನೇಮಿಸಿದ್ದಾರೆ.

## ಸಿಐಟಿಯು ನೂತನ ಅಟೋ ಚಾಲಕರ ಸಂಘ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ ಮುದಗಲ್ ; ಬಸ್ಸ ನಿಲ್ದಾಣ ಸಮೀಪದಲ್ಲಿ ಸಿಐಟಿಯು ನೂತನ ಅಟೋ ಚಾಲಕರ ಸಂಘದ ಉದ್ಘಾಟನೆ ರಿಬ್ಬನ್ ಕತ್ತರಿಸುವ ಮೂಲಕ ರವಿವಾರ ಸಿಐಟಿಯು ಜಿಲ್ಲಾ ಜಂಟಿ ಕಾರ್ಯಧರ್ಶಿ ರಮೇಶ ವೀರಾಪುರ ಉದ್ಘಾಟನೆ ಮಾಡಿದರು.

ಅಟೋ ಚಾಲಕರ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಜೀವನ ನಿರ್ವಹಣೆಗಾಗಿ ಅಟೋ ಹೊಂದಿರುವ ಚಾಲಕರು ಸಮಾಜ ಮುಖಿ ಕಾರ್ಯಕ್ಕೆ ಮಾದರಿಯಾಗಿದ್ದರೆ. ಸಂಘಟನೆಯಿಂದ ಸಮಸ್ಯೆಗಳಗೆ ಪರಿಹಾರ ಕಂಡು ಕೊಳ್ಳಲು ಸಾಧ್ಯವಾಗುತ್ತದೆ. ಅಟೋ ಚಾಲಕರಿಗೆ ಸರಕಾರದಿಂದ ಅನೇಕ ಸೌಲಭ್ಯಗಳಿವೆ ಅದನ್ನು ಪಡೆದುಕೊಳ್ಳಲು ಸಾರ್ವಜನಿಕರೊಂದಿಗೆ ವಿಶ್ವಾಸದಿಂದ



ಕೆಲಸ ಮಾಡಬೇಕು. ಪ್ರತಿಯಬ್ಬರೂ ಕಾನೂನು ನಿಯಮ ಪಾಲಿಸಬೇಕು ಎಂದು ತಿಳಿಸಿದರು.

ಹಿರಿಯಪತ್ರಕರ್ತರಾದ ರಾಘವೇಂದ್ರ ಗುಮಾಸ್ತೆ, ಶರಣಯ್ಯ ಒಡೆಯರ, ಹನುಮಂತ ನಾಯಕ ಹಾಗೂ ಸಿಐಟಿಯು ಬ್ರಾಂಚ್ ನೂತನ ಅಧ್ಯಕ್ಷ ದಾವಲ್ ಮಲಿಕ್ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಈ ವೇಳೆ ಅಧ್ಯಕ್ಷ ಇಸ್ಮಾಯಿಲ್ ಡೋಯಿ, ಪ್ರಧಾನ ಕಾರ್ಯಧರ್ಶಿ ಸಲ್ಮಾನ್ ಖಾನ, ಆಲಂಸಾಬ್, ಭಾಷ ಹಣಗಿ, ಗ್ಯಾನಪ್ಪ ಮುದಿ, ಮಹೆಬೂಬ ಬುಲೇಟ್, ಬಾಬಾ ಮೆಕ್ಯಾನಿಕ್, ಕದಿರ ಶೇಖ, ಶಿವರಾಂ ಸಿಂಗ್, ಮೊಹ್ಮದ್ ಪಾಷ, ಅಲ್ಲಾ ಭಕ್ಷ ಬಿಲಾಲ್, ದೊಡ್ಡಿ ಷರೀಫ ಸೇರದಂತೆ ಇತರರಿದ್ದರು.

# ಹೆಲ್ಮೆಟ್ ಕುಟುಂಬದ ರಕ್ಷಾ ಕವಚ ಬದುಕಿನ ಕವಚ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ರಸ್ತೆಯಲ್ಲಿ ನಾವು ಹೊರಟ ಕ್ಷಣದಿಂದಲೇ ಅನೇಕ ಅನಿಶ್ಚಿತತೆಗಳು ನಮ್ಮನ್ನು ಹಿಂಬಾಲಿಸುತ್ತಿರುತ್ತವೆ. ನಮ್ಮ ಚಾಲನೆಯ ಮೇಲೆ ನಾವೇ ನಿಯಂತ್ರಣ ಹೊಂದಿದ್ದರೂ, ಎದುರಿನಿಂದ ಬರುವ ವಾಹನ, ರಸ್ತೆಯ ಸ್ಥಿತಿ, ಇತರ ಚಾಲಕರ ನಿರ್ಲಕ್ಷ್ಯಈ ಎಲ್ಲದರ ಮೇಲೆ ನಮ್ಮ ಹಿಡಿತವಿರುವುದಿಲ್ಲ. ಇಂತಹ ಸಂದರ್ಭಗಳಲ್ಲಿ ನಮ್ಮನ್ನು ರಕ್ಷಿಸಬಲ್ಲ ಅತ್ಯಂತ ಸರಳ ಮತ್ತು ಪರಿಣಾಮಕಾರಿ ಸಾಧನವೆಂದರೆ ಹೆಲ್ಮೆಟ್.

ಕುಟುಂಬವು ನಮ್ಮ ಬದುಕಿನ ಆಧಾರಸ್ತಂಭ. ಬೆಳಗ್ಗೆ ಮನೆಯಿಂದ ಹೊರಡುವಾಗ, ಸಂಜೆ ಸುರಕ್ಷಿತವಾಗಿ ಮನೆಗೆ ಬರಬೇಕೆಂಬುದು ಅವರ ಏಕೈಕ ಬಯಕೆ. ಆದರೆ ಕ್ಷಣದ ನಿರ್ಲಕ್ಷ್ಯದಿಂದಾಗುವ ಅಪಘಾತಗಳು ಕುಟುಂಬದ ಸಂತೋಷವನ್ನು ದುಃಖದಲ್ಲಿ ಮುಳುಗಿಸಬಲ್ಲವು. "ನಿಮ್ಮ ಕುಟುಂಬದ ರಕ್ಷಣೆಗೆ, ಹೆಲ್ಮೆಟ್ ಹಾಕುವುದು ಅಗತ್ಯ" ಎಂಬ ಮಾತು, ಕೇವಲ ಸಲಹೆಯಲ್ಲ ಇದು ನಿಮ್ಮ ಪ್ರೀತಿಪಾತ್ರರಿಗಾಗಿ ಮಾಡಬಹುದಾದ ಅತ್ಯಂತ ಮೂಲಭೂತ ಕರ್ತವ್ಯ.




ಹೆಲ್ಮೆಟ್ ಧರಿಸುವುದರಿಂದಾಗುವ ಪ್ರಯೋಜನಗಳನ್ನು ಅನೇಕ ಉದಾಹರಣೆಗಳು ಸಾಬೀತುಪಡಿಸಿವೆ. ತಲೆಗೆ ಬರುವ ಪೆಟ್ಟುಗಳು ಜೀವಕ್ಕೆ ಅತ್ಯಂತ ಅಪಾಯಕಾರಿಗಳು. ಆದರೆ ಉತ್ತಮ ಗುಣಮಟ್ಟದ ಹೆಲ್ಮೆಟ್ ಈ ಅಪಾಯವನ್ನು ಬಹಳ ಮಟ್ಟಿಗೆ ಕಡಿಮೆ ಮಾಡುತ್ತದೆ. ಕೆಲವೇ ಸೆಕೆಂಡ್‌ಗಳು ತೆಗೆದುಕೊಳ್ಳುವ ಈ ಕ್ರಮ ಜೀವಪಾಯಕಾರಿ ಪರಿಣಾಮಗಳ ನಡುವಿನ ಗಡಿಯಾಗಿ ನಿಂತುಕೊಳ್ಳುತ್ತದೆ.

> ಜೀವನ ಅಮೂಲ್ಯ. ಅಪಘಾತಕ್ಕೆ ಕಾರಣಗಳು ಸಾವಿರ, ಆದರೆ ಮುನ್ನೆಚ್ಚರಿಕೆಯ ಕ್ರಮ ಒಂದೇಹೆಲ್ಮೆಟ್.
>
> ನಿಮ್ಮನ್ನು, ನಿಮ್ಮ ಕನಸುಗಳನ್ನು, ನಿಮ್ಮ ಕುಟುಂಬವನ್ನು ರಕ್ಷಿಸಲು ಇಂದು ಈ ಅಭ್ಯಾಸವನ್ನು ಅಳವಡಿಸಿಕೊಳ್ಳಿ.
>
> ಅಣ್ಣಪ್ಪ ಮೇಟಿಗೌಡ

"ನಿಮ್ಮ ಸುರಕ್ಷತೆ ನಿಮ್ಮ ಕೈಯಲ್ಲಿದೆ" ಇದು ನಿಜವಾದ ಜೀವನದ ತತ್ವ. ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು, ವೇಗವನ್ನು ನಿಯಂತ್ರಿಸುವುದು, ಮತ್ತು ಎಲ್ಲಕ್ಕಿಂತ ಮುಖ್ಯವಾಗಿ, ಹೆಲ್ಮೆಟ್ ಧರಿಸುವುದು ಈ ಮೂರು ಕ್ರಮಗಳು ಅಪಘಾತವನ್ನು ಸಂಪೂರ್ಣವಾಗಿ ತಡೆಯದಿದ್ದರೂ, ಅವು ಸಂಭವಿಸಿದಾಗ ಅದರ ತೀವ್ರತೆಯನ್ನು ಗಣನೀಯವಾಗಿ ಕಡಿಮೆ ಮಾಡುತ್ತವೆ. ಅನೇಕರು ಅಪಘಾತದ ನಂತರ ಬದುಕಿರುವುದಕ್ಕೆ ಕಾರಣ ಹೆಲ್ಮೆಟ್ ಎಂದೇ ವೈದ್ಯರು ಹೇಳಿದ್ದಾರೆ.

ಹೆಲ್ಮೆಟ್ ಕೇವಲ ಸುರಕ್ಷತೆಗೆ ಮಾತ್ರವಲ್ಲ, ಜವಾಬ್ದಾರಿಯ ಸಂಕೇತವೂ ಆಗಿದೆ. ಕುಟುಂಬಕ್ಕೆ ನಮ್ಮ ಮೇಲೆ ಇರುವ ನಂಬಿಕೆಯನ್ನು ಕಾಪಾಡಿಕೊಳ್ಳಲು, ಮಕ್ಕಳಿಗೆ ಸುರಕ್ಷತಾ ಸಂಸ್ಕೃತಿಯ ಮಾದರಿಯಾಗಲು, ಮತ್ತು ಸಮಾಜಕ್ಕೆ ಶಿಸ್ತುಬದ್ಧ ಚಾಲನೆಯ ಸಂದೇಶ ನೀಡಲು ಇದು ಸಹಾಯಕ.

ಪ್ರತಿ ಪ್ರಯಾಣವೂ ಕುಟುಂಬದ ಪ್ರಾರ್ಥನೆಗಳೊಂದಿಗೆ ಆರಂಭವಾಗುತ್ತದೆ. ಆ ಪ್ರಾರ್ಥನೆಗಳಿಗೆ ಗೌರವ ನೀಡುವ ಅತ್ಯಂತ ಸರಳ ಮಾರ್ಗವೇ ಹೆಲ್ಮೆಟ್ ಧರಿಸುವುದು. ನಿಮ್ಮವರು ನಿಮ್ಮನ್ನು ಕಳೆದುಕೊಳ್ಳಲು ಬಯಸುವುದಿಲ್ಲ;

ಅವರ ಕನಸುಗಳನ್ನು ಕಾಪಾಡಲು ನೀವು ತೆಗೆದುಕೊಳ್ಳಬೇಕಿರುವ ಹೆಜ್ಜೆಹೆಲ್ಮೆಟ್ ಹಚ್ಚುವುದು.

ಕ್ಷಣದ ನಿರ್ಲಕ್ಷ್ಯದಿಂದಾಗುವ ಅಪಘಾತಗಳು ಕುಟುಂಬದ ಸಂತೋಷವನ್ನು ದುಃಖದಲ್ಲಿ ಮುಳುಗಿಸಬಲ್ಲವು. "ನಿಮ್ಮ ಕುಟುಂಬದ ರಕ್ಷಣೆಗೆ, ಹೆಲ್ಮೆಟ್ ಹಾಕುವುದು ಅಗತ್ಯ" ಎಂಬ ಮಾತು, ಕೇವಲ ಸಲಹೆಯಲ್ಲ ಇದು ನಿಮ್ಮ ಪ್ರೀತಿಪಾತ್ರರಿಗಾಗಿ ಮಾಡಬಹುದಾದ ಅತ್ಯಂತ ಮೂಲಭೂತ ಕರ್ತವ್ಯ.

## ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ,ಲಿಂಗಸುಗೂರು: ತಾಲೂಕಿನ 17 ಅಂಗನವಾಡಿ ಕಾರ್ಯಕರ್ತೆ ಹಾಗೂ 63 ಅಂಗನವಾಡಿ ಸಹಾಯಕಿಯರ ಹುದ್ದೆಗಳು ಖಾಲಿ ಇದ್ದು, ದಿನಾಂಕ: 08.12.2025 ರಿಂದ 07.01.2026ರ ವರೆಗೆ ವೆಬ್‌ಸೈಟ್ ಇಣಣಠಿ://ಞಚಿಡಿಟಿಜಟಚಿಞಚಿಂಟಿಜ.ಞಚಿಡಿ.ಟುಛಿ.ಟಿ/ ಚಿಛಿಛಿಜ/ ಮುಖಾಂತರ ಆನ್‌ಲೈನ್ ಆಹ್ವಾನಿಸಲಾಗಿರುತ್ತದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 07.01.2026 ರಂದು ನಿಗದಿಪಡಿಸಿದ್ದು ಆಸಕ್ತ ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಈ ಮೂಲಕ ಕೋರಿದೆ ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಲಿಂಗಸುಗೂರು ಇವರಲ್ಲಿ ಸಂಪರ್ಕಿಸಲು ತಿಳಿಸಿದೆ.

## ಅಕ್ರಮ ಮದ್ಯ ಮಾರಾಟ ಕಡಿವಾಣ ಹಾಕುವಲ್ಲಿ ವಿಫಲ

ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ: ಜಿಲ್ಲೆಯ ಯಲಬುರ್ಗಾ ತಾಲೂಕಿನ ತುಮ್ಮರಗುದ್ದಿ ಗ್ರಾಮದಲ್ಲಿ ಶಾಲೆಯ ಮುಂಭಾದಲ್ಲಿ ಹಾಗು ಪಾನ ಬೀಡಾ ಅಂಗಡಿ, ಕಿರಾಣಿ ಅಂಗಡಿ,ಗುಡಿಸಲು ಹಾಗು ಮನೆ ಮನೆಯಲ್ಲಿ ಮದ್ಯ ಮಾರಾಟವಾಗುದನ್ನು ತಡೆಗಟ್ಟುವಲ್ಲಿ ಮಹಿಳೆಯರು ಗ್ರಾಮ ಪಂಚಾಯತಿಗೆ ಮುತ್ತಿಗೆ ಹಾಕಿ, ಪೋಲಿಸ ಇಲಾಖೆಯವರೊಂದಿಗೆ ನೂರಾರು ಮಹಿಳೆಯರು ಸೇರಿ ಅಕ್ರಮ ಮದ್ಯ ಮಾರಾಟ ಮಾಡುವ 26 ವಿವಿಧ ಅಂಗಡಿಗಳನ್ನು ತೋರಿಸಿದ್ದಾರೆ,ಪೋಲಿಸ ಇಲಾಖೆಯವರು ಪರೀಶಿಲನೆ ವೇಳೆಯಲ್ಲಿ ಮಾರಾಟಗಾರರು ಚಾಣಕ್ಷಬುದ್ಧಿ ಉಪಯೋಗಿಸಿ ಇವರಿಗೆ ಸಿಗಲಾರದಂತೆ ಬೆರೆ ಕಡೆ ಮಾಯ ಮಾಡಿದ್ದಾರೆ, ಆದರೆ ಒಬ್ಬರು ಮನೆಯಲ್ಲಿ ಮಾತ್ರ ಮದ್ಯ ತುಂಬಿರುವ ಬಕೆಟ ಸಿಕ್ಕಿರುತ್ತದೆ ಆಗ ಯಲಬುರ್ಗಾ ಪಿ.ಎಸ್.ಐ,ಎ.ಎಸ್.ಐ. ಪೋಲಿಸ ಅಧಿಕಾರಿಗಳು ಡಿ.5 ರಂದು ಪ್ರಕರಣ ದಾಖಲಿಸಿಕೊಂಡಿದ್ದಾರೆ,ಈ ಬಗ್ಗೆ ಅಬಕಾರಿ ಇಲಾಖೆಯವರು ಮೌನವಾಗಿದ್ದಾರೆ ಏಕೆ?



ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಕಾಡುತ್ತಿದೆ,ಅನಧಿಕೃತವಾಗಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕುವಲ್ಲಿ ಅಬಕಾರಿ ಇಲಾಖೆ ವಿಫಲವಾಗಿದೆ ಎಂದು ಅಖೀಲ ಕರ್ನಾಟಕ ಕೊಪ್ಪಳ ಜಿಲ್ಲಾ ಜನಜಾಗೃತಿ ಸಮಿತಿ ಸದಸ್ಯ ಶರಣಬಸಪ್ಪ ದಾನಕ್ಕೆ ಅವರು ಖಂಡಿಸಿದ್ದಾರೆ

ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ತುಮ್ಮರಗುದ್ದಿಯ ಚಿಕ್ಕ ಗ್ರಾಮದಲ್ಲಿ ಮಹಿಳೆಯರು ತಮ್ಮ ಕುಟುಂದಲ್ಲಿ ಮನಸ್ಸಿಗೆ ನೆಮ್ಮದಿ ಸಿಗಲಾರದೆ ತೊಂದರೆ ಅನುಭವಿಸುವ ನರಕಯಾತನೆ ಅನುಭವಿಸುತ್ತಿದ್ದಾರೆ,ಕುಡಿತಕ್ಕೆ ದಾಸರಾಗಿ ಮಗ,ಗಂಡ ಸತ್ತ ಈ ಪರಿಸ್ಥಿತಿಯಿಂದ ವಿಧವೆಯಾಗಿ ಬದುಕು ಸಾಗಿಸುತ್ತಿದ್ದಾರೆ ಇಂತಹ ಪರಿಸ್ಥಿತಿಯನ್ನು ಹೊಗಲಾಡಿಸುವಲ್ಲಿ ಅನಧಿಕೃತ ಅಕ್ರಮ ಮದ್ಯ ಮಾರಾಟ ತಡೆಗಟ್ಟುವಲ್ಲಿ ಶಾಸಕರು,ಸಂಸದರು,ಸೂಕ್ತ ಕ್ರಮ ತಗೆದುಕೊಂಡು ಸುಂದರ ಸಮಾಜ, ಪರಿಸರವನ್ನು ಕಾಪಾಡುವಲ್ಲಿ ಮುಂದಾಗಬೇಕು ಎಂದು ಅಖೀಲ ಕರ್ನಾಟಕ ಜಿಲ್ಲಾ ಜನಜಾಗೃತಿ ಸಮಿತಿ ಸದಸ್ಯ ಶರಣಬಸಪ್ಪ ದಾನಕ್ಕೆ ಇವರು ಒತ್ತಾಯಿಸಿದ್ದಾರೆ.

## ಪಲ್ಸ್ ಪೋಲಿಯೋ ಯಶಸ್ವಿಗೊಳಿಸಿ....ಝುಳಕಿಮಠ ಕರೆ



ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು :ತಾಲೂಕಿನಲ್ಲಿ ಇದೆ ಡಿಸೆಂಬರ 21 ಭಾನುವಾರ ದಂದು ನಡೆಯುವ ರಾಷ್ಟೀಯ ಪಲ್ಸ್ ಪೋಲಿಯೋ ಶೇಕಡ 100 ರಷ್ಟು ಗುರಿ ಸಾಧಿಸಲು ಸೂಚಿಸಿದರು. ಇಂದು ನಡೆದ ತಾಲೂಕಾ ಟಾಸ್ಕ ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಸಂಬಂಧಪಟ್ಟ ಎಲ್ಲಾ ಇಲಾಖೆ ಅಧಿಕಾರಿಗಳು ಸಿಬ್ಬಂದಿಯವರು ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ಜನರಿಗೆ ಮಾಹಿತಿ ನೀಡುವುದು ಮತ್ತು ತಾಲೂಕಿನಲ್ಲಿ 0 ದಿಂದ 5 ವರ್ಷದೊಳಗಿನ 52195 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಿರುವ ಆರೋಗ್ಯ ಇಲಾಖೆಗೆ ಸಂಪೂರ್ಣ ಸಹಕರಿಸಲು ತಿಳಿಸಿದರು. ಸಭೆಯಲ್ಲಿ ಉಪಸ್ಥಿತರಿದ್ದ ತಾಲೂಕು ಪಂಚಾಯತ ಕಾರ್ಯ ನಿರ್ವಾಹಕ ಅಧಿಕಾರಿ ಉಮೇಶ್ ಅವರು ಮಾತನಾಡಿ ಕಳೆದ 12 ವರ್ಷ ದಿಂದ ಭಾರತ ದೇಶದಲ್ಲಿ ಪೋಲಿಯೋ ಪ್ರಕರಣ ಕಂಡುಬಂದಿಲ್ಲ ವಾದರೂ ನೆರೆ ರಾಷ್ಟಗಳಲ್ಲಿ ಇನ್ನೂ ವರದಿಯಾಗುತ್ತಿರುವ ಕಾರಣ ಪಲ್ಸ್ ಪೋಲಿಯೋ ಮುಂದುವರಿದಿದೆ ಸಮುದಾಯದಲ್ಲಿ ಎಲ್ಲ ಅರ್ಹ ಮಕ್ಕಳಿಗೆ ಲಸಿಕೆ ಹಾಕಿಸಲು ಸಂಘ ಸಂಸ್ಥೆಗಳು ಸಾರ್ವಜನಿಕರು ಕೈಜೋಡಿಸುವಂತೆ ಕರೆ ನೀಡಿದರು. ತಾಲೂಕ ಆರೋಗ್ಯಾಧಿಕಾರಿ ಡಾ: ಅಮರೇಶ

ಪಾಟೀಲ ಆರೋಗ್ಯ ಇಲಾಖೆಯ ಕ್ರಿಯಾಯೋಜನೆ ಮಾಹಿತಿ ನೀಡಿ ಒಟ್ಟು 240 ತಂಡಗಳು 480 ಕಾರ್ಯಕರ್ತರು ಒಟ್ಟು 52200 ಮಕ್ಕಳಿಗೆ ಲಸಿಕೆ ಹಾಕುವರು.85432 ಮನೆಗಳ ಭೇಟಿ.ದೊಡ್ಡಿ ತಾಂಡಾ. ಅಲೆಮಾರಿ ಜನವಸತಿ ತಾಣಗಳು.ಬಸ್ ನಿಲ್ದಾಣಗಳಲ್ಲಿಯೂ ಪೋಲಿಯೋ ತಂಡ ಕಾರ್ಯನಿರ್ವಹಿಸುತ್ತವೆ. ಇಲಾಖೆಯ 48 ಮೇಲ್ವಿಚಾರಕರು ಭಾಗವಹಿಸುವರು ಎಂದು ಮಾಹಿತಿ ನೀಡಿದರು ಈಸಂದರ್ಭದಲ್ಲಿ. ಶಿಶು ಅಭಿವೃದ್ಧಿ ಅಧಿಕಾರಿ ನಾಗರತ್ನ. ಪುರಸಭೆ ಅಧಿಕಾರಿಗಳಾದ ನಟ–ರಾಜ್. ಜಗನ್ನಾಥ.

ಆರಿಫಾ.ಗದ್ದೆಪ್ಪ.ಜೆಸ್ಕಾಂ ಅಧಿಕಾರಿ ಬೆನ್ನಪ್ಪ. ಶಿಕ್ಷಣ ಇಲಾಖೆಯ ಮಹಾಂತೇಶ.ಸಾರಿಗೆ ಇಲಾಖೆಯ ಮಹಾರುದ್ರಪ್ಪ.ಆರೋಗ್ಯ ಇಲಾಖೆಯ ಡಾ: ಹನುಮಂತರಾಯ ತಳ್ಳಳ್ಳಿ. ಡಾ: ಶಿವನಾಗ.ಡಾ: ಅಭಿಜಿತ್.ಡಾ: ನಿರ್ಮಲಾ ಪಾಟೀಲ್.ಡಾ:ರವಿಕಿರಣ. ಡಾ: ಇಕ್ಬಾಲ್. ಡಾ: ಸೂಗೂರೇಶ. ಅರ್ಜುನ್.ಪ್ರಾಣೇಶ್.ರಾಘವೇಂದ್ರ. ಗುರು ಪ್ರಸಾದ್.

ಶಿವಲೀಲಾ ಮೇಟಿ.ಪದ್ಮಾವತಿ ನಾಯಕ್.ಬಸವಲಿಂಗ.ವಾಸೀಂರೆಹಮಾನ. ಇತರರು ಸಭೆಯಲ್ಲಿ ಭಾಗವಹಿಸಿದ್ದರು.

## ಬಾಲ್ಯವಿವಾಹ:ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ

ಬಳ್ಳಾರಿ: ಜಿಲ್ಲೆಯಲ್ಲಿ ಬಾಲ್ಯವಿವಾಹ ಸಂಪೂರ್ಣವಾಗಿ ತಡೆಗಟ್ಟಲು ಇರುವ ಸರ್ಕಾರದ ಕಾನೂನು ಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ, ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಜಿಲ್ಲೆಯಲ್ಲಿ ಬಾಲ್ಯವಿವಾಹ ಪ್ರಕರಣಗಳು ಮರುಕಳಿಸುತ್ತಿದ್ದು, ಇದು ಕಾನೂನು ಬಾಹಿರವಾಗಿದೆ. ಬಾಲ್ಯವಿವಾಹ ಆದಲ್ಲಿ ಮತ್ತು ಮಾಡಿದಲ್ಲಿ ಅವರ ಮೇಲೆ ಜರುಗಿಸಬಹುದಾದ ಕಠಿಣ ಕಾನೂನು ಕ್ರಮಗಳ ಕುರಿತು ಸಮುದಾಯಗಳಲ್ಲಿ ಅರಿವು ಮೂಡಿಸುವ ಅಗತ್ಯವಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮು ಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಸಂಡೂರು ಭಾಗದ ಚೋರನೂರು,ಬಂಡ್ರಿ,ಮೆಟ್ರಿಕಿ, ವಿಠಲಾಪುರ, ತಾರಾನಗರ ಮತ್ತು ಬಳ್ಳಾರಿ ತಾಲ್ಲೂಕಿನ ಶಿಡಗಿನಮೋಳ ಗ್ರಾಪಂ ವ್ಯಾಪ್ತಿಯಲ್ಲಿ ಸದ್ದಿಲ್ಲದೇ ಹೆಚ್ಚಾಗಿ ಬಾಲ್ಯವಿವಾಹ ಪ್ರಕರಣ ಕಂಡುಬರುತ್ತಿವೆ. ಅದರಲ್ಲೂ ಈ ಭಾಗದಲ್ಲಿ ಗರ್ಭಿಣಿ ಮಹಿಳೆಯರು ಕೇವಲ 35 ಕೆ.ಜಿ ತೂಕ ಇರುವುದು ಕಂಡುಬರುತ್ತಿರುವುದು ವಿಷಾಧನೀಯ ಸಂಗತಿಯಾಗಿದೆ ಎಂದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರು,ಜಿಲ್ಲೆಯ ಎಲ್ಲಾ ಉಪವಿಭಾಗಗಳ ಡಿವೈಎಸ್ಪಿಗಳೊಂದಿಗೆ ಸಭೆ ನಡೆಸಬೇಕು ಹಾಗೂ ಗ್ರಾಮಗಳಲ್ಲಿನ ದೇವಸ್ಥಾನ, ಚರ್ಚ್, ಕಲ್ಯಾಣ ಮಂಟಪ, ಸಮುದಾಯ ಭವನಗಳಲ್ಲಿ ನಡೆಯುವ ಮದುವೆ, ಈ ಕಾರ್ಯಕ್ರಮಕ್ಕೆ ಶ್ಯಾಮಿಯಾನ ಪರಿಕರ ವಿತರಿಸುವವರು ಒಳಗೊಂಡು ಮದುವೆ ಸಮಾರಂಭದ ಮಾಹಿತಿಯನ್ನು ಕಡ್ಡಾಯವಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಸಲ್ಲಿಸುವಂತೆ ಜಿಲ್ಲಾಧಿಕಾರಿಯವರ ಆದೇಶ ನೀಡಲು ಕ್ರಮವಹಿಸಬೇಕು ಎಂದು ತಿಳಿಸಿದರು.

**ಕ್ರೈಸ್ ವಸತಿ ಶಾಲೆಗಳಲ್ಲಿ 1098 ಅಳವಡಿಸಿ:**

ಜಿಲ್ಲೆಯ ಎಲ್ಲಾ ವಸತಿ ಶಿಕ್ಷಣ ಸಂಸ್ಥೆಗಳಲ್ಲಿನ ಮಕ್ಕಳಿಗೆ ತಮ್ಮ ಪೋಷಕರೊಂದಿಗೆ ಕರೆಮಾಡಿ ಮಾತನಾಡಲು ಸ್ಮಾರ್ಟ್ ಕಾರ್ಡ್ ಬಳಸಲಾಗುತ್ತಿದ್ದು, ಅದರಲ್ಲಿ ಕೇವಲ ವಿದ್ಯಾರ್ಥಿಯ ಪೋಷಕರ ಮೊಬೈಲ್ ಸಂಖ್ಯೆ ನಮೂದಾಗಿರುತ್ತದೆ. ಇದರ ಜೊತೆಗೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಸಹ ನಮೂದು ಮಾಡಬೇಕು.

## ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು :

ಇಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯಿಂದ ಜಿಲ್ಲೆಯ 08 ಶಿಶು ಅಭಿವೃದ್ದಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು, ಇಲಾಖೆಯ ವೆಬ್‌ಸೈಟ್ ವಿಳಾಸ:https://karne-makaone.kar.nic.in/abcd/ ನಲ್ಲಿ ಜನವರಿ 7 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ರಾಯಚೂರು, ಗಿಲ್ಲೇಸುಗೂರು, ಮಾನವಿ, ಸಿರವಾರ, ಸಿಂಧನೂರು, ತುರವಿಹಾಳ ಲಿಂಗಸುಗೂರು ಹಾಗೂ ದೇವದುರ್ಗ ಶಿಶು ಅಭಿವೃದ್ದಿ ಯೋಜನಾಧಿಕಾರಿಗಳ ಕಾರ್ಯಾಲಯವನ್ನು ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತರಬೇತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು :

ಭಾರತ ಸರ್ಕಾರದ ಜಲಶಕ್ತಿ ಸಚಿವಾಲಯದ ಜಲಸಂಪನ್ಮೂಲ ಇಲಾಖೆ, ನದಿ ಅಭಿವೃದ್ಧಿ ಮತ್ತು ಗಂಗಾ ಪುನರುಜ್ಜೀವನ ಕೇಂದ್ರ ಬೆಂಗಳೂರಿನ ನೈಋತ್ಯ ಪ್ರದೇಶದ ಅಂತರ್ಜಲ ಮಂಡಳಿಯಿಂದ ಜಲಚರ ನಕ್ಷೆ,ಅಂತರ್ಜಲ–ಸಂಬಂಧಿತ ಸಮಸ್ಯೆಗಳು ಮತ್ತು ಅಂತರ್ಜಲ ನಿರ್ವಹಣೆ ಕುರಿತು 3ನೇ ಶ್ರೇಣಿ ತರಬೇತಿ ಕಾರ್ಯಕ್ರಮವನ್ನು ನಗರದ ಕೃಷಿ ಎಂಜಿನಿಯರಿಂಗ್ ಕಾಲೇಜಿನ ಸಿಲ್ವರ್ ಜುಬಿಲಿ ಸೆಮಿನಾರ್ ಹಾಲ್‌ನಲ್ಲಿ ಡಿಸೆಂಬರ್ 10ರ ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಬೆಂಗಳೂರಿನ ಸಿಜಿಡ್ಲೂಬಿ, ಎಸ್.ಡ್ಲೂಆರ್ ಪ್ರಾದೇಶಿಕ ನಿರ್ದೇಶಕರಾದ ಜಿ.ಕೃಷ್ಣಮೂರ್ತಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಯುಎಎಸ್ ಉಪಕುಲಪತಿಗಳಾದ ಡಾ.ಹನುಮಂತಪ್ಪ, ಕಾಲೇಜ್ ಆಫ್ ಅಗ್ರಿಕಲ್ಚರಲ್ ಇಂಜಿನಿಯರಿಂಗ್ ಡೀನ್ ಡಾ.ಎಂ.ಎಸ್. ಅಯ್ಯನಗೌಡರು, ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ವಿಸ್ತರಣೆ ನಿರ್ದೇಶಕರಾದ ಎ.ಆರ್.ಕುರುಬರ್ ಅವರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಸಹಾಯಕಿಯರ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು :

ಇಲ್ಲಿನ ರಾಯಚೂರು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಅಂಗನವಾಡಿ ಸಹಾಯಕಿಯರ ಖಾಲಿ ಇರುವ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಯಾಪಲದಿನ್ನಿಯ ಕೇಂದ್ರ–2ರ ಅಂಗನವಾಡಿ ಕಾರ್ಯಕರ್ತೆ ಹುದ್ದೆಯು ಪರಿಶಿಷ್ಟ ಜಾತಿಗೆ, ಮಮದಾಪೂರು ಗ್ರಾಮ ಪಂಚಾಯತಿಯ ಆಶಾಪೂರ ಕೇಂದ್ರ–2 ಪರಿಶಿಷ್ಟ ಜಾತಿಗೆ, ಆತ್ಕೂರು ಕೇಂದ್ರ–4 ಪರಿಶಿಷ್ಟ ಪಂಗಡಕ್ಕೆ, ವಾರ್ಡ್ ನಂ.01ರ ರಾಮಾಂಜನೇಯ್ಯ ಕಾಲೋನಿ ಕೇಂದ್ರ–1 ಪರಿಶಿಷ್ಟ ಜಾತಿಗೆ,

ಮಂಗಳವಾರಪೇಟೆ ಕೇಂದ್ರ– 5 ಪರಿಶಿಷ್ಟ ಜಾತಿಗೆ, ಎಲ್.ಬಿ.ಎಸ್ ನಗರ ಕೇಂದ್ರ–4 ಸಾಮಾನ್ಯ ವರ್ಗಕ್ಕೆ, ಯರಮರಸ್ ಕ್ಯಾಂಪ್ ಕೇಂದ್ರ–2 ಸಾಮಾನ್ಯ ವರ್ಗಕ್ಕೆ, ಮಾಣಿಕನಗರ ಕೇಂದ್ರ–1 ಸಾಮಾನ್ಯ ವರ್ಗ, ಉಮರನಗರ ಕೇಂದ್ರ–2 ಸಾಮಾನ್ಯ ವರ್ಗ, ಹುಂಡೇಕಾರ ಕಾಲೋನಿ ಕೇಂದ್ರ ಸಾಮಾನ್ಯ ವರ್ಗ, ಎಲ್.ಬಿ.ಎಸ್ ನಗರ ಕೇಂದ್ರ–1 ಸಾಮಾನ್ಯ ವರ್ಗ, ವಾರ್ಡ್ ನಂ:23ರ ಗದ್ವಾಲ ರಸ್ತೆ ಕೇಂದ್ರ–4 ಸಾಮಾನ್ಯ ವರ್ಗ, ನೀರಬಾವಿಕುಂಟಾ ಕೇಂದ್ರ–6 ಸಾಮಾನ್ಯ ವರ್ಗ, ವಾರ್ಡ್ ನಂ:2 & 3 ಮದರಟ್ರಸ್ಟ್ ಸಾಮಾನ್ಯ ವರ್ಗ, ಸಗಮಕುಂಟಾ ಗ್ರಾಮ ಪಂಚಾಯತಿಯ ಕೊರ್ವಿಹಾಳ ಕೇಂದ್ರ–2 ಸಾಮಾನ್ಯ ವರ್ಗ, ಮಡ್ಡಿಪೇಟೆ ಕೇಂದ್ರ–6 ಸಾಮಾನ್ಯ ವರ್ಗ, ಕೆ.ಇ.ಬಿ ಕಾಲೋನಿ ಕೇಂದ್ರ ಸಾಮಾನ್ಯ ವರ್ಗ, ವಾರ್ಡ್ ನಂ:02ರ ಸುಖಶಾಂತಿ ನಗರ ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದು, ಈ ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಆಸಕ್ತರು

ಜನವರಿ 7ರೊಳಗಾಗಿ ಆನ್‌ಲೈನ್ ವಿಳಾಸ: https://karne-makaone.kar.nic.in/abcd/ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್‌ನಲ್ಲಿ ಅಪೂರ್ಣ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಕಚೇರಿಯ ಸಮಯದಲ್ಲಿ ಸಂಪರ್ಕಿಸುವಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ವ್ಯಾಪ್ತಿಯ ಎಲ್ಲ ರಸ್ತೆಗಳಲ್ಲಿನ ತಗ್ಗು ಗುಂಡಿ ಮುಚ್ಚಲು ಕ್ರಮವಹಿಸಿ: ಜಿಲ್ಲಾಧಿಕಾರಿ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಜಿಲ್ಲಾಮಟ್ಟದ ರಸ್ತೆ ಸುರಕ್ಷತಾ ಸಮಿತಿ ಸಭೆಯು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಅಧ್ಯಕ್ಷತೆಯಲ್ಲಿ ಡಿಸೆಂಬರ್ 6ರಂದು ನಡೆಯಿತು.



ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿಗಳು, ಸಾರ್ವಜನಿಕರಿಗೆ ಸುಗಮ ಸಾರಿಗೆ ಕಲ್ಪಿಸುವ ಹಿನ್ನೆಲೆಯಲ್ಲಿ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್ ಎಚ್ ಎಐ)ದ ರಸ್ತೆಗಳು ಸೇರಿದಂತೆ, ಲೋಕೋಪಯೋಗಿ, ಪಂಚಾಯತ್ ರಾಜ್ ಎಂಜಿನಿಯರಿಂಗ್ ಹಾಗೂ ಇನ್ನೀತರ ಇಲಾಖೆಗಳ ಅಧೀನದ ಎಲ್ಲ ರಸ್ತೆಗಳಲ್ಲಿನ ತಗ್ಗು ಗುಂಡಿಗಳನ್ನು ಕೂಡಲೇ ಗುರುತಿಸಿ ಯುದ್ಧೋಪಾದಿಯಲ್ಲಿ ರಸ್ತೆಗಳನ್ನು ಸರಿಪಡಿಸುವ ಕಾರ್ಯ ಮಾಡಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಾದ್ಯಂತ ಎಲ್ಲಾ ಕಡೆಗಿನ ರಸ್ತೆಗಳಲ್ಲಿ ಹಾಕಿರುವ ಹಂಪ್ಸಗಳು ಕಾಣುವುದೇ ಇಲ್ಲ. ಇದರಿಂದಾಗಿ ಹೆಚ್ಚಾಗಿ ದ್ವಿಚಕ್ರ ವಾಹನಗಳು ಮೇಲೆ ಪುಟಿದು ಅಪಘಾತಕ್ಕೀಡಾಗುತ್ತವೆ. ಈ ಬಗ್ಗೆ ಕೂಡಲೇ ಗಮನ ಹರಿಸಿ ಅವೈಜ್ಞಾನಿಕವಾಗಿ ಹಾಕಿದ ಎಲ್ಲ ಹಂಪ್ಸಗಳನ್ನು ಸರಿಪಡಿಸಬೇಕು. ಕಡ್ಡಾಯವಾಗಿ ಎರಡೂ ಬದಿಯಲ್ಲಿ ಬಿಳಿಪಟ್ಟಿ ಅಳವಡಿಸಿ ಹಂಪ್ಸ್ ಕಾಣುವ ಹಾಗೆ ಸುರಕ್ಷತಾ ಕ್ರಮಕ್ಕೆ ಕೂಡಲೇ ಮುಂದಾಗಬೇಕು. ಗ್ರಾಮೀಣ, ತಾಲೂಕು, ಜಿಲ್ಲಾ ಸೇರಿದಂತೆ ಎಲ್ಲಾ ರಸ್ತೆಗಳಲ್ಲಿ ಸೂಚನಾ ಫಲಕಗಳನ್ನು ಅಳವಡಿಸಿ ಅಪಘಾತ ರಹಿತ ಸಂಚಾರಕ್ಕೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಅಂತಾರಾಜ್ಯ ಹೈದ್ರಾಬಾದ್ ಸೇರಿದಂತೆ ಪ್ರಮುಖ ನಗರಗಳಿಗೆ ಸಂಪರ್ಕ ಕಲ್ಪಿಸುವ ಶಕ್ತಿನಗರ ಬಳಿಯಲ್ಲಿನ ಬೈಪಾಸನಲ್ಲಿನ ಅಪಘಾತ ಪ್ರಕರಣಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಈ ಬಗ್ಗೆ ತುರ್ತಾಗಿ ಗಮನ ಹರಿಸಿ, ಲೋಕೋಪಯೋಗಿ ಇಲಾಖೆಯ ಸುಪರ್ದಿಯಲ್ಲಿನ ಒತ್ತುವರಿ ರಸ್ತೆಯನ್ನು, ವಶಕ್ಕೆ ಪಡೆದು ಡಾಂಬರೀಕರಣಗೊಳಿಸಿ ರಸ್ತೆ ಅಗಲೀಕರಣಕ್ಕೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಶಾಲಾ ವಾಹನಗಳ ಪಿಟ್ನೆಸ್ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ರಾಯಚೂರು ಜಿಲ್ಲೆಯಲ್ಲಿ 444 ವಾಹನಗಳಿಗೆ ಫಿಟನೆಸ್ ಇರುತ್ತವೆ. ಇನ್ನುಳಿದ 175 ವಾಹನಗಳ ಪಿಟನೆಸ್ ಮುಗಿದಿರುತ್ತದೆ. ಈ ವಾಹನಗಳಿಗೆ ಪಿಟನೆಸ್ ಮಾಡಲು ನೊಟೀಸ್ ಜಾರಿ ಮಾಡಲಾಗಿದೆ ಎಂದು ಆರ್‌ಟಿಓ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಮಕ್ಕಳ ಸುರಕ್ಷತೆ ದೃಷ್ಟಿಯಿಂದ ಶಾಲಾ ವಾಹನಗಳು ಎಲ್ಲ ರೀತಿಯಿಂದಲೂ ಸುಭದ್ರವಾಗಿರಬೇಕು. ಈ ಬಗ್ಗೆ ಆಯಾ ಶಾಲೆಗಳ ಮಾಲೀಕರು ಗಮನ ಹರಿಸಬೇಕು. ಪಿಟನೆಸ್ ಪ್ರಮಾಣಪತ್ರ ಕಡ್ಡಾಯ ಇರುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಈ ಹಿಂದೆ, ಮಹಾನಗರ ಪಾಲಿಕೆ ಹಾಗೂ ಲೋಕೋಪಯೋಗಿ ಇಲಾಖೆಯ ಜಂಟಿ ಪ್ರಗತಿ ಪರಿಶೀಲನಾ ಸಭೆಯಲ್ಲಿ, ನಗರ ಮತ್ತು ಜಿಲ್ಲಾ ವ್ಯಾಪ್ತಿಯ ವಿವಿಧ ಇಲಾಖೆಗಳ ಅಧೀನದ ರಸ್ತೆ ಹಾಗೂ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳನ್ನು ತ್ವರಿತಗೊಳಿಸಲು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಲೋಕೋಪಯೋಗಿ ಇಲಾಖೆಯಿಂದ ಮುಖ್ಯ ರಸ್ತೆಗಳ ನಿರ್ವಹಣೆ ಮತ್ತು ಹೊಸ ರಸ್ತೆ ನಿರ್ಮಾಣಕ್ಕೆ ತಿಳಿಸಲಾಗಿದೆ. ಈ ಬಗ್ಗೆ ಅಧಿಕಾರಿಗಳು ಗಮನ ಹರಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

*ಹೇಲ್ಮೆಟ ಬಳಕೆ:* ರಾಯಚೂರು ಜಿಲ್ಲೆಯಲ್ಲಿ ಹೇಲ್ಮೆಟ ಬಳಕೆಯ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಜೀವನ ತುಂಬಾ ಮುಖ್ಯ. ಹೆಲ್ಮೆಟ್ ಧರಿಸಿ ಪ್ರಾಣ ಉಳಿಸಿಕೊಂಡ ಅನೇಕ ಪ್ರಕರಣಗಳ ಬಗ್ಗೆ ಜನತೆಗೆ ತಿಳಿವಳಿಕೆ ನೀಡಿ ಹೆಲ್ಮೇಟ ಧರಿಸಲು ನಿರಂತರವಾಗಿ ಜಾಗೃತಿ ಕಾರ್ಯಕ್ರಮ ನಡೆಸಿದ್ದೇವೆ. ಪ್ರಮುಖ ಸ್ಥಳಗಳಲ್ಲಿ ಬ್ಯಾನರ್ ಅಳವಡಿಸಿ ತಿಳಿವಳಿಕೆ ನೀಡುತ್ತಿದ್ದೇವೆ ಎಂದು ಜಿಲ್ಲಾ ಪೊಲೀಸ್ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

*ರಾಯಚೂರು ಸಿಟಿಯಲ್ಲಿ ನಿರ್ವಹಣೆ:* ಹಲವು ವರ್ಷಗಳ ನಂತರ ಮೊದಲ ಬಾರಿಗೆ ರಾಯಚೂರು ಮಹಾನಗರ ಪಾಲಿಕೆಯು ರಸ್ತೆ ನಿರ್ವಹಣಾ ಟೆಂಡರ್ ಕರೆದಿದ್ದು, ರಾಯಚೂರು ಸಿಟಿ ವ್ಯಾಪ್ತಿಯ ರಸ್ತೆಗಳಲ್ಲಿನ ತಗ್ಗು ಗುಂಡಿ ಮುಚ್ಚುವ ಕಾರ್ಯ ನಡೆದಿದೆ. ರಸ್ತೆ ಸರಿಪಡಿಸುವ ಕಾರ್ಯವನ್ನು ಅಚ್ಚುಕಟ್ಟಾಗಿ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಆದಾಗ್ಯೂ ನಗರದಲ್ಲಿನ ರಸ್ತೆಗಳಲ್ಲಿ ತಗ್ಗು ಗುಂಡಿಗಳು ಹಾಗೆ ಇವೆ ಎಂದು ದೂರುಗಳು ಬಂದಲ್ಲಿ ಯಾವುದೇ ಕೆಲಸವನ್ನು ಅನುಮೋದಿಸಲಾಗುವುದಿಲ್ಲ ಎಂದು ಎಂಜಿನಿಯರ್‌ಗಳಿಗೆ ಎಚ್ಚರಿಕೆ ನೀಡಿದ್ದಾಗಿ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ತಿಳಿಸಿದರು.ಅಪಘಾತ ಪ್ರಕರಣಗಳು:*ರಾಯಚೂರು ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಮತ್ತು ಇತರೆ ರಸ್ತೆಗಳಲ್ಲಿ ಮಾರಣಾಂತಿಕ ಅಪಘಾತ ಪ್ರಕರಣಗಳು 2022ರಲ್ಲಿ 300, 2023ರಲ್ಲಿ 264, 2024ರಲ್ಲಿ 297, 2025ರ ಡಿಸೆಂಬರ್ 5ರವರೆಗೆ 254 ಸಂಭವಿಸಿ 1177 ಜನರು ಮೃತಪಟ್ಟಿದ್ದು, 2574 ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಲೋಕೋಪಯೋಗಿ ಇಲಾಖೆಯ ಅಭಿಯಂತರರಾದ ವೆಂಕಟೇಶ ಗಳಗ, ಪೊಲೀಸ್ ಇಲಾಖೆ, ಆರ್ ಟಿಓ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

# ಕುಡತಿನಿ ಭೂ ಸಂತ್ರಸ್ತರ ಬೇಡಿಕೆಗಳನ್ನು ಮಾನವೀಯತೆಯ ಆಧಾರದಲ್ಲಿ ಪರಿಹರಿಸಿ: ವೈ.ಎಂ. ಸತೀಶ್

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಕಳೆದ ಸುಮಾರು ದಿನಗಳಿಂದ ಕುಡತಿನಿಯಲ್ಲಿ ಪ್ರತಿಭಟನೆ ನಡೆಸುತ್ತಿರುವ 12 ಸಾವಿರ ಎಕರೆ ಭೂಮಿಯ ಭೂ ಸಂತ್ರಸ್ತ ರೈತರ ಬೇಡಿಕೆಗಳನ್ನು ಮಾನವೀಯತೆಯ ಆಧಾರದ ಮೇಲೆ ಶೀಘ್ರದಲ್ಲೇ ಈಡೇರಿಸಬೇಕು ಎಂದು ಬಳ್ಳಾರಿ – ವಿಜಯನಗರ ಸ್ಥಳೀಯ ಸಂಸ್ಥೆಗಳ ವಿಧಾನಪರಿಷತ್ ಸದಸ್ಯ ವೈ.ಎಂ. ಸತೀಶ್ ಅವರು ಸರ್ಕಾರಕ್ಕೆ ಮನವಿ ಮಾಡಿದರು.

ಬೆಳಗಾವಿಯ 'ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದ ಎರಡನೇ ದಿನವಾದ ಮಂಗಳವಾರ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಭೂತ ಅಭಿವೃದ್ಧಿ ಸಚಿವರಾದ ಎಂ.ಬಿ. ಪಾಟೀಲ್ ಅವರಲ್ಲಿ ಪ್ರಶ್ನೆ ಕೇಳಿದ ಶಾಸಕ ವೈ.ಎಂ. ಸತೀಶ್ ಅವರು, ಕುಡತಿನಿ, ವೇಣಿವೀರಾಪುರ, ಸಿದ್ದಮ್ಮನಹಳ್ಳಿ, ಹರಗಿನಡೋಣಿ ಸೇರಿ ಸುತ್ತಲಿನ ವಿವಿಧ ಗ್ರಾಮಗಳ ಭೂಮಿಗಳನ್ನು ಸರ್ಕಾರ (ಕೆಐಡಿಬಿ) ಸ್ವಾಧೀನ ಮಾಡಿಕೊಂಡು ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಿಗೆ ನೀಡಿದೆ. ಆದರೆ, ಕೈಗಾರಿಕೆಗಳು ಪ್ರಾರಂಭವಾಗದೇ ಉದ್ಯೋಗ ಸಿಗದೇ ಭೂ ಸಂತ್ರಸ್ತರ ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಈಡಾಗುತ್ತಿವೆ. ಅಲ್ಲದೇ, ಹೆಚ್ಚಿನ ಪರಿಹಾರ ನೀಡಲು ವಿವಿಧ ನ್ಯಾಯಾಲಯಗಳು ಆದೇಶ ನೀಡಿದ್ದು, ಪ್ರತಿಭಟನೆ ನಡೆಸುತ್ತಿರುವ ಭೂ ಸಂತ್ರಸ್ತರ ಬೇಡಿಕೆಗಳನ್ನು ಸರ್ಕಾರ ಮಾನವೀಯತೆಯ ಆಧಾರದ ಮೇಲೆ ತ್ವರಿತವಾಗಿ ಈಡೇರಿಸಬೇಕು ಎಂದು ಆಗ್ರಹಿಸಿದರು.

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಭೂತ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಅವರು, ಮೆ. ಆರ್ಸೆಲರ್ ಮಿತ್ತಲ್ ಇಂಡಿಯಾ ಲಿ,



ಮೆ. ಉತ್ತಮ್ ಗಾಲ್ವಾ ಫೆರೋಸ್ ಲಿ, ಮೆ. ಕರ್ನಾಟಕ ವಿಜಯನಗರ ಸ್ಟೀಲ್ ಲಿ,(ಎಎಂಡಿಸಿ) ಯೋಜನೆಗಳಿಗಾಗಿ ಭೂಮಿಯನ್ನು ಸ್ವಾಧೀನಕ್ಕೆ ಪಡೆಯಲಾಗಿದೆ. ಈ ಮೂರೂ ಕೈಗಾರಿಗಳ ಭೂ ಸಂತ್ರಸ್ತರು ಹೆಚ್ಚುವರಿ ಪರಿಹಾರಕ್ಕಾಗಿ ನ್ಯಾಯಾಲಯಗಳಲ್ಲಿ ದಾವೆ ಹೂಡಿದ್ದಾರೆ. ಆರ್ಸೆಲರ್ ಮಿತ್ತಲ್ ಇಂಡಿಯಾವು ಪ್ರತೀ ಎಕರೆಗೆ 1.30 ಕೋಟಿ ರೂಪಾಯಿ ಪರಿಹಾರ ಪಾವತಿಗೆ ಆದೇಶ ನೀಡಿದೆ. ಈ ಮೊತ್ತವನ್ನು ಕಂಪನಿಯು ದಾವೆದಾರರಿಗೆ ಪಾವತಿಸಿದೆ. ಅಲ್ಲದೇ, ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇರುವ 657 ಎಕರೆ ಜಮೀನುಗಳಿಗೂ ಆರ್ಸೆಲರ್ ಮಿತ್ತಲ್ ಕಂಪನಿಯು ಇದೇ ರೀತಿಯಲ್ಲಿ ಪರಿಹಾರವನ್ನು ಪಾವತಿ ಮಾಡಬೇಕಿದೆ ಎಂದು ವಿವರಿಸಿದರು.

ಉತ್ತಮ್ ಗಾಲ್ವಾ ಫೆರೋಸ್ ಲಿಮಿಟೆಡ್ ಕಂಪನಿಯು ಸ್ವಾಧೀನ ಮಾಡಿಕೊಂಡಿರುವ ಒಟ್ಟು ಭೂಮಿಯ ಪೈಕಿ 441 ಎಕರೆ ಭೂಮಿಗೆ ಸಾಮಾನ್ಯ ಐ ತೀರ್ಪು ರಚಿಸಲಾಗಿದೆ. ಈ ಪೈಕಿ 298 ಎಕರೆ ಜಮೀನಿನ ಮಾಲೀಕರು ಹೆಚ್ಚಿನ ಪರಿಹಾರ ಕೋರಿ ನ್ಯಾಯಾಲಯಗಳಲ್ಲಿ ದಾವೆ ದಾಖಲಿಸಿದ್ದು, ನವೆಂಬರ್ – 2024 ರಲ್ಲಿ ಹೈಕೋರ್ಟ್ ನೀಡಿದ್ದ ತೀರ್ಪಿನ ಪ್ರಕಾರ ಕಂಪನಿಯು 17 ಕೋಟಿ ರೂ. ಮೊತ್ತವನ್ನು ನ್ಯಾಯಾಲಯದಲ್ಲಿ ಠೇವಣಿ ಇರಿಸಿದೆ. ಅಲ್ಲದೇ, ಮುಖ್ಯಮಂತ್ರಿಗಳ ಜೊತೆ ಭೂ ಸಂತ್ರಸ್ತರ ಸಭೆ ನಡೆದಿದೆ. ಈ ಸಭೆಯಲ್ಲಿ ಪ್ರತಿಭಟನಾ ನಿರತರದಲ್ಲಿ ಸಮಯಾವಕಾಶ ಕೇಳಲಾಗಿದೆ ಎಂದರು.

ಆದರೆ, ವೈ.ಎಂ. ಸತೀಶ್ ಅವರು, ಭೂ ಸಂತ್ರಸ್ತ ಪ್ರತಿಭಟನಾ ನಿರತರು, '15 ವರ್ಷಗಳಿಂದ ಭೂ ಸಂತ್ರಸ್ತ ಕುಟುಂಬದ ಸದಸ್ಯರು ಉದ್ಯೋಗ – ಹೆಚ್ಚಿನ ಪರಿಹಾರ ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಯ ನಿರೀಕ್ಷೆಯಲ್ಲಿದ್ದಾರೆ.

ಮಾನವೀಯತೆಯ ಆಧಾರದ ಮೇಲೆ ಹೆಚ್ಚಿನ ಪರಿಹಾರ ಅಥವಾ ಸ್ವಾಧೀನ ಮಾಡಿಕೊಂಡಿರುವ ಭೂಮಿಯನ್ನು ಹಿಂದಿರುಗಿಸಿ ಕೃಷಿಯನ್ನು ನಡೆಸಲು ಸಹಕಾರ ನೀಡಬೇಕು' ಎಂದು ಮನವಿ ಮಾಡಿದರು.

## ನಿಯಮಬಾಹಿರ ರಸಗೊಬ್ಬರ ಮಾರಾಟ ಮಾಡಿದ ಮಳಿಗೆ ಗೋದಾಮಿಗೆ ನೋಟಿಸ್




ಬಳ್ಳಾರಿ: ರಾಜ್ಯ ಕೃಷಿ ವಿಚಕ್ಷಣಾದಳ, ಕಲಬುರಗಿ ವಿಭಾಗದ ಜಂಟಿ ಕೃಷಿ ನಿರ್ದೇಶಕರ ನೇತೃತ್ವದ ತಂಡವು ಜಿಲ್ಲೆಯಲ್ಲಿ ಇತ್ತೀಚೆಗೆ ವಿವಿಧ ಕೃಷಿ ಪರಿಕರ ಮಾರಾಟ ಮಳಿಗೆ ಹಾಗೂ ಸಿ, ಎಫ್ ಗೋದಾಮುಗಳ ಮೇಲೆ ಅನಿರಿಕ್ಷೀತ ದಾಳಿ ನಡೆಸಿ ಪರಿಶೀಲನೆ ಕೈಗೊಂಡಿದ್ದು, ನಿಯಮಬಾಹಿರವಾಗಿ ರಸಗೊಬ್ಬರ/ಪೀಡೆನಾಶಕ ಮಾರಾಟ ಮಾಡಿದ ಮಳಿಗೆ ಮತ್ತು ಗೋದಾಮುಗಳಿಗೆ ನೋಟಿಸ್ ಜಾರಿ ಮಾಡಿದೆ.

ಬಳ್ಳಾರಿಯು ಕೃಷಿ ಪ್ರಧಾನ ಜಿಲ್ಲೆಯಾಗಿದ್ದು, ಪ್ರಮುಖ ಕೃಷಿ ಬೆಳೆಗಳಾಗಿ ಭತ್ತ, ಮೆಕ್ಕೆ ಜೋಳ, ಜೋಳ, ತೊಗರಿ, ಕಡಲೆ ಮತ್ತು ತೋಟಗಾರಿಕೆ ಪ್ರಮುಖ ಬೆಳೆಗಳಾಗಿ ಮೆಣಸಿನಕಾಯಿ; ಅರಜೂರ ಮತ್ತು ಇತರೆ ಬೆಳೆಗಳನ್ನು ಬೆಳೆಯುತ್ತಿದ್ದಾರೆ. ಹೆಚ್ಚಿನ ಕೃಷಿ ಪ್ರದೇಶ ತುಂಗಭದ್ರ ಅಚ್ಚುಕಟ್ಟು ಪ್ರದೇಶವಾಗಿದ್ದು, ಮೂರು ಹಂಗಾಮುಗಳಲ್ಲಿ ಬೆಳೆಗಳನ್ನು ಬೆಳೆಯಲಾಗುತ್ತಿದೆ. ಬೆಳೆಗಳಿಗೆ ಸಕಾಲದಲ್ಲಿ ಉತ್ತಮ ಗುಣಮಟ್ಟದ ಕೃಷಿ ಪರಿಕರಗಳನ್ನು ರೈತರಿಗೆ ಅಗತ್ಯ ಪ್ರಮಾಣದಲ್ಲಿ ದೊರಕುವಂತೆ ಮಾಡುವುದು ಕೃಷಿ ಇಲಾಖೆಯ ಪ್ರಮುಖ ಕರ್ತವ್ಯವಾಗಿದೆ.

ರಾಜ್ಯ ಕೃಷಿ ವಿಚಕ್ಷಣಾ ದಳ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕ ಶಿವಕುಮಾರ್ ಅವರು ಮಾತನಾಡಿ, ವಿವಿಧ ಸಂಸ್ಥೆಗಳ ಬಯೋಸ್ಟಿಮ್ಯುಲಂಟ್/ಜೈವಿಕಗೊಬ್ಬರಗಳನ್ನು ನಿಯಮಬಾಹಿರವಾಗಿ ಮಾರಾಟ ಮಾಡುತ್ತಿದ್ದ ರಸಗೊಬ್ಬರ/ಪೀಡೆನಾಶಕಗಳ ಪರಿಕರಗಳಾದ ಸ್ಪೇನ್ಸ್ ಗ್ರೀನ್ ಮಿರಾಕಲ್, ಅಗ್ರೋಫೋರ್ಟ್, ಬ್ರಾಸ್ಸೋಫಿಟ್, ಜಾಂಥೋನಿಲ್, ವಿವಾ, ಎಂಸಿಸೆಟ್, ಸೂಪರ್ 8, ರೈಸ್, ಆಸ್ಕೋಮ್ಯಾಕ್ಸ್, ಬಯೋವಿಟಾ, ಫ್ಯೂಜಿಕೋ–ಎಫ್‌ಎಸ್, ಐಸಾಬಿಯಾನ ಸೇರಿ ಒಟ್ಟು 12 ಮಾದರಿಗಳನ್ನು ನಿಯಮಾನುಸಾರ ಸಂಗ್ರಹಿಸಿ ವಿಶ್ಲೇಷಣೆಗಾಗಿ ಪ್ರಯೋಗಾಲಯಕ್ಕೆ ಕಳುಹಿಸಿದ್ದು, ವಿಶ್ಲೇಷಣಾ ವರದಿ ಬಂದ ನಂತರ ಯಾವುದಾದರೂ ನಿಯಮಬಾಹಿರ ವಸ್ತುಗಳು ಕಂಡುಬಂದಲ್ಲಿ ಸಂಬಂಧಪಟ್ಟ ಸಂಸ್ಥೆ ಮತ್ತು ಮಾರಾಟ ಮಳಿಗೆಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಅದೇರೀತಿಯಾಗಿ ಕಾನೂನು ಉಲ್ಲಂಘನೆ ಮಾಡಿ ವಿವಿಧ ಕೃಷಿ ಪರಿಕರಗಳ ದಾಸ್ತಾನು ಹಾಗೂ ಮಾರಾಟ ಮಾಡುತ್ತಿದ್ದ ಸಿ,ಎಫ್/ಕೃಷಿ ಪರಿಕರ ಮಾರಾಟ ಮಳಿಗೆಗಳಿಗೆ ಮಾರಾಟ ತಡೆ ಆದೇಶ ಸೂಕ್ತ ವಿವರಣೆ ನೀಡಲು ಕಾರಣ ಕೇಳುವ ನೋಟಿಸ್ ಜಾರಿ ಮಾಡಲಾಗಿದೆ. ಮಾರಾಟ ಮಳಿಗೆಗಳಿಗೆ ಸಂಬಂಧಿಸಿದವರು ಸೂಕ್ತ ಸಮಜಾಯಿಷಿ ನೀಡದಿದ್ದರೆ ಸಂಬಂಧಪಟ್ಟ ಮಾರಾಟ ಮಳಿಗೆ ಮತ್ತು ಸಂಸ್ಥೆಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದಿದ್ದಾರೆ. ಈ ಹಿಂದೆ ಅಪರ ಕೃಷಿ ನಿರ್ದೇಶಕರು, ರಾಜ್ಯ ಕೃಷಿ ವಿಚಕ್ಷಣಾದಳ, ಬೆಂಗಳೂರು ಇವರ ನೇತೃತ್ವದಲ್ಲಿ ತಂಡವು ವಿವಿಧ ಸಿ,ಎಫ್ ಗೋದಾಮುಗಳ ಮೇಲೆ ಇತ್ತೀಚೆಗೆ ಅನಿರೀಕ್ಷಿತ ದಾಳಿ ನಡೆಸಿ ಮೆಸ್ಸರ್ಸ್ ಘರ್ಡಾ ಕೆಮಿಕಲ್ಸ್ ಲಿಮಿಟೆಡ್ ಸಂಸ್ಥೆಯ ಡೈಮಿಥೋಯೇಟ್ 30% ಇಸಿ 800 ಲೀ. ಸುಮಾರು ರೂ.10.02 ಲಕ್ಷ, ಬಿಹೆಚ್‌ಎಲ್ ರಸಾಯನ್ ಉದ್ಯೋಗ್ ಪ್ರೈ.ಲಿ. ಸಂಸ್ಥೆಯ ಕ್ಲೋರ್‌ಪೈರಿಫಾಸ್ 10 ಗ್ರಾಂ., 1060 ಕೆಜಿ ಸುಮಾರು ರೂ.4.04 ಲಕ್ಷ ಮತ್ತು ಜು ಅಗ್ರಿ ಕ್ರಾಪ್ ಸೈನ್ಸ್ ಲಿಮಿಟೆಡ್ ಸಂಸ್ಥೆಯ ಕ್ಲೋರ್‌ಪಿರಿಫೋಸ್ 20% ಇಸಿ 1620 ಲೀ. ಸುಮಾರು ರೂ.8.90 ಲಕ್ಷ ಮೌಲ್ಯದ ಕೀಟನಾಶಕಗಳ ಸೇರಿದಂತೆ ಒಟ್ಟು ರೂ.23.15 ಲಕ್ಷ ಮೌಲ್ಯದ ಕೀಟನಾಶಕಗಳನ್ನು ಕಾನೂನು ಬಾಹಿರವಾಗಿ ದಾಸ್ತಾನು ಮತ್ತು ಮಾರಾಟ ಮಾಡುತ್ತಿರುವುದು ಕಂಡುಬಂದಿದೆ. ಕೀಟನಾಶಕಗಳನ್ನು ಜಪ್ತಿ ಮಾಡಿ ಘನ ನ್ಯಾಯಾಲಯದಲ್ಲಿ ಸಂಬಂಧಪಟ್ಟ ಸಂಸ್ಥೆ ಮತ್ತು ಮಾರಾಟ ಮಳಿಗೆಗಳ ವಿರುದ್ಧ ಮೊಕದ್ದಮೆ ಹೂಡಲಾಗಿದೆ ಎಂದು ಅವರು ಹೇಳಿದ್ದಾರೆ. ಪ್ರಸ್ತುತ ಜಿಲ್ಲೆಯಲ್ಲಿ ಕಾನೂನು ಬಾಹಿರವಾಗಿ ದಾಸ್ತಾನು ಮಾಡಿ ಮಾರಾಟ ಮಾಡುತ್ತಿರುವವರ ಬಗ್ಗೆ ತೀವ್ರ ನಿಗಾವಹಿಸಲಾಗಿದ್ದು, ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕೃಷಿ ಪರಿಕರ ಪರಿವೀಕ್ಷಕರುಗಳು ಪ್ರತಿಯೊಂದು ಕೃಷಿ ಪರಿಕರ ಮಾರಾಟ ಮಳಿಗೆಗೆ ಅನಿರೀಕ್ಷಿತ ಭೇಟಿ ನೀಡುತ್ತಿರುವುದರ ಜೊತೆಗೆ ಸುರಕ್ಷಿತ ಕೀಟನಾಶಕಗಳ ಬಳಕೆ, ಅನಧಿಕೃತ ಕೃಷಿ ಪರಿಕರ, ಮಾರಾಟಗಾರರಿಂದ ಕೃಷಿ ಪರಿಕರಗಳನ್ನು ಖರೀದಿಸಬಾರದು ಹಾಗೂ ಇತರೆ ಪ್ರಮುಖ ವಿಷಯಗಳ ಕುರಿತು ಮಾಹಿತಿ ಆಂದೋಲನ ಹಮ್ಮಿಕೊಳ್ಳಲಾಗುತ್ತಿದೆ. ದ ಾ ಳಿ ಸಂದರ್ಭದಲ್ಲಿ ಉಪ ಕೃಷಿ ನಿರ್ದೇಶಕ ಮೃತ್ಯುಂಜಯ, ಸಹಾಯಕ ಕೃಷಿ ನಿರ್ದೇಶಕರಾದ ಪ್ರವೀಣ್ ಹಾಗೂ ಶೇಖಪ್ಪ, ಬಳ್ಳಾರಿ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಗರ್ಜಪ್ಪ, ಸಹಾಯಕ ಕೃಷಿ ನಿರ್ದೇಶಕರ ಕಚೇರಿಯ ಕೃಷಿ ಅಧಿಕಾರಿಗಳಾದ ಸೌಮ್ಯ, ಬಸವರಾಜ್, ಹಾಗೂ ಸಹಾಯಕ ಕೃಷಿ ಅಧಿಕಾರಿ ಸುಷ್ಮಾ ಸೇರಿದಂತೆ ಉಪ ಕೃಷಿ ನಿರ್ದೇಶಕರ ಕಚೇರಿಯ ಕೃಷಿ ಅಧಿಕಾರಿಗಳು ಹಾಜರಿದ್ದರು.

## ಬ್ಯಾಂಕ್ ದರೋಡೆ ಯತ್ನ ಪೋಲಿಸರಿಂದ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಕರ್ನಾಟಕ ಗ್ರಾಮಿಣ ಬ್ಯಾಂಕ್ ದ–ರೋಡೆಗೆ ಯತ್ನಿಸಿದ ಘಟನೆ ಸಿರಗುಪ್ಪ ತಾಲೂಕಿನ ಬಾಣಾಪೂರ ಶಾಖೆಯಲ್ಲಿ ನಡೆದಿದೆ. ಮೊಕಾ ಪೋಲೀಸ್ ಠಾಣಾ ವ್ಯಾಪ್ತಿಯ ಬಾಣಾಪುರ ಗ್ರಾಮದ ಕರ್ನಾಟಕ ಗ್ರಾಮಿಣ ಬ್ಯಾಂಕ್ ಶಾಖೆಗೆ ಎಂದಿನಂತೆ ಬ್ಯಾಂಕ್ ಉದ್ಯೋಗಿ ನವೀನ್ ಎನ್ನುವವರು ಕೆಲಸಕ್ಕೆ ತೆರಳಿದ್ದಾರೆ, ಬ್ಯಾಂಕ್ ಕಿಟಕಿ ಮುರಿದಿರುವುದನ್ನು ಕಂಡು ಅನುಮಾನಗೊಂಡ ಉದ್ಯೋಗಿ ಕೂಡಲೇ ಬ್ಯಾಂಕ್ ನ ಮೇಲಧಿಕಾರಿಗಳಿಗೆ ತಿಳಿಸಿದ್ದಾರೆ. ಬ್ಯಾಂಕ್ ವ್ಯವಸ್ಥಾಪಕ ಈ.ಮನೋಹರ್ ಅವರು ತೆರಳಿ ಪರಿಶೀಲಿಸಿದರು. ಬ್ಯಾಂಕ್ ನ ಹಿಂದಿನ ಕಿಟಕಿಯ ಗ್ರಿಲ್ ಗಳು ಮುರಿದಿರುವುದು,

ಸೆಫ್‌ರೂಮ್ ಗ್ರಿಲ್ ಮುರಿದಿರುವುದು ಕಂಡು ಬಂದಿದೆ. ಕೂಡಲೇ ಸಿಸಿಟಿವಿ ಪರಿಶೀಲಿಸಿದಾಗ, ನಸುಕಿನ ವೇಳೆ 1ರಿಂದ 3.20 ರ ಅವಧಿಯಲ್ಲಿ ಇಬ್ಬರು ಅಪರಿಚಿತ ವ್ಯಕ್ತಿಗಳು ಬ್ಯಾಂಕ್ ನ ಕಿಟಕಿ ಗ್ರಿಲ್ ಗಳನ್ನು ಮುರಿದು ಒಬ್ಬರು ಬ್ಯಾಂಕ್ ನ ಒಳಗೆ ನುಗ್ಗಿರುವುದು ಸೆರೆಯಾಗಿದೆ. ಕ್ಯಾಶ ಕೌಂಟರ್ ನಲ್ಲಿ ತೆರಳಿ ನಂತರ ಸುರಕ್ಷತಾ ಕೊಠಡಿಗೆ ಲಗ್ಗೆ ಇಟ್ಟಿದ್ದಾರೆ,

ಈ ವೇಳೆ ಬ್ಯಾಂಕನ ಸೈರನ್ ಹೊಡೆಯುತ್ತಿದ್ದಂತೆ ದುಷ್ಕರ್ಮಿಗಳು ಸ್ಥಳದಿಂದ ಕಾಲ್ಕಿತ್ತಿದ್ದಾರೆ. ಬ್ಯಾಂಕನಲ್ಲಿ ಯಾವುದೇ ಕಳವು ಆಗಿಲ್ಲ, ಬೆಲೆಬಾಳುವ ವಸ್ತುಗಳ ಕಳ್ಳತನ ಯತ್ನ ನಡೆದಿದೆ ಎಂದು ಬ್ಯಾಂಕ ವ್ಯವಸ್ಥಾಪಕ ನವೀನ್ ಅವರು ಮೊಕ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಇದಕ್ಕೂ ಮುನ್ನ ಎಸ್ಪಿ ಡಾ.ಶೋಭಾರಣಿ ಅವರು ಭೇಟಿ ನೀಡಿ, ತನಿಖಾ ಪ್ರಗತಿಯ ವರದಿ ಪರಿಶೀಲಿಸಿ ಮುಂದಿನ ತನಿಖೆ ಬಗ್ಗೆ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

## ಡಿ.12 ರಂದು ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ ಡಿ.12 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 02 ಗಂಟೆಯವರೆಗೆ ನಗರದ ಹಳೆಯ ತಾಲ್ಲೂಕು ಕಚೇರಿ ಆವರಣದಲ್ಲಿನ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ.

ನೇರ ಸಂದರ್ಶನದಲ್ಲಿ ಇನ್ಸ್ಟಾ ಕಾರ್ಟ್ ಸರ್ವೀಸಸ್ ಪ್ರೈವೇಟ್ ಲಿಮಿಟೆಡ್ ಕಂಪನಿ ಇವರು ಖಾಲಿ ಇರುವ ಡೆಲೆವರಿ ಬಾಯ್ ಹುದ್ದೆಗಳಿಗೆ ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳುವರು. ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ.

ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಮತ್ತು ಯಾವುದೇ ಪದವಿ ವಿದ್ಯಾರ್ಹತೆಯ ಅಭ್ಯರ್ಥಿಗಳು ಭಾಗವಹಿಸಬಹುದು (ಕಡ್ಡಾಯವಾಗಿ ಬೈಕ್ ಮತ್ತು ಸ್ಮಾರ್ಟ್ ಮೊಬೈಲ್ ಹೊಂದಿರಬೇಕು). ಆಸಕ್ತ ಅಭ್ಯರ್ಥಿಗಳು ತಮ್ಮ ಮೂಲ ಆಧಾರ್ ಕಾರ್ಡ್ ಪ್ರತಿ, ಸ್ವ–ವಿವರ ಪ್ರತಿ (ಬಯೋಡೇಟಾ) ಗಳೊಂದಿಗೆ ಭಾಗವಹಿಸಬಹುದು. ಈ ಅವಕಾಶ ಸದುಪಯೋಗ ಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ ಮೊ.8277000619, 8197191981ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಪಿ.ಎಸ್.ಹಟ್ಟಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ರಮ ಗಣಿಗಾರಿಕೆ ಆಯ್ತು ಈಗ ಗ್ರ್ಯಾವೆಲ್ ಸರದಿ ಶುರುವಾಗಿದೆ: ಪಂಪಾಪತಿ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಸಂಡೂರು ತಾಲೂಕಿನಾದ್ಯಂತ ಸಂಸದ ಈ.ತುಕಾರಾಂ ಅವರ ಬೆಂಬಲಿಗರಿಂದ ಅಕ್ರಮ ಗ್ರ್ಯಾವೆಲ್ ದಂಧೆ ಸಾಮಾನ್ಯವಾಗಿದ್ದು, ಸರ್ಕಾರಿ ಜಮೀನಿನಲ್ಲೂ ಗ್ರ್ಯಾವೆಲ್ ಅಗೆಯಲಾಗುತ್ತಿದೆ, ಈ ಕುರಿತು ಅಧಿಕಾರಿಗಳ ಗಮನಕ್ಕಿದ್ದರು ಕಣ್ಮುಚ್ಚಿ ಕುಳಿತಿದ್ದಾರೆ. ಈ ಅಕ್ರಮವನ್ನು ಪ್ರಶ್ನಿಸಿದರೆ ನಮ್ಮ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಲಾಗುತ್ತಿದೆ, ಇದಕ್ಕೆ ನಾವು ಹೆದರುವ ಮಾತೆ ಇಲ್ಲ, ಈಗಾಗಲೇ ಸಂಬಂಧಿಸಿದ ಇಲಾಖೆ ಮೇಲಧಿಕಾರಿಗಳ ಗಮನಸೆಳೆದಿದ್ದು, ನಿರ್ಲಕ್ಷ್ಯವಹಿಸಿದರೆ ಪ್ರತಿಭಟನೆಯ ಸ್ವರೂಪ ಬದಲಾಗಲಿದೆ

ಎಂದು ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಜಿ.ಟಿ.ಪಂಪಾಪತಿ ಅವರು ಆಕ್ರೋಶ ವ್ಯಕ್ತಪಡಿಸಿದರು. ಸಂಡೂರು ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ವಿಂಡ್ ಪವರ್ ಘಟಕ ಸ್ಥಾಪನೆಗಾಗಿ ರಸ್ತೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸಂಡೂರಿನಲ್ಲಿ ಗ್ರ್ಯಾವೇಲ್ ಎಲ್ಲಿಲ್ಲದ ಬೇಡಿಕೆ, ಡಿಮ್ಯಾಂಡ್ ಶುರುವಾಗಿದೆ.




ಸಂಸದ ಈ.ತುಕಾರಾಂ ಬೆಂಬಲಿಗರು ಸರ್ಕಾರಿ ಸ್ಥಳ ಸೇರಿದಂತೆ ಎಲ್ಲಿ ಸಿಕ್ಕಲ್ಲಿ ಅಕ್ರಮವಾಗಿ ಗ್ರ್ಯಾವೆಲ್ ಅಗೆದು ಮಾರಾಟ ಮಾಡಲು ಮುಂದಾಗಿದ್ದಾರೆ.

ಅಕ್ರಮ ಗಣಿಗಾರಿಕೆ ಆಯ್ತು ಈಗ ಗ್ರ್ಯಾವೆಲ್ ಸರದಿ ಶುರುವಾಗಿದೆ. ಇದರಲ್ಲಿ ಅನೇಕ ಪ್ರಭಾವಿಗಳು ಶ್ಯಾಮಿಲಾಗಿದ್ದು, ಸರ್ಕಾರದ ನಿಯಮಗಳು ಇದ್ದೂ ಇಲ್ಲದಂತಾಗಿದೆ. ಅನುಮತಿ ಪಡೆಯೋದು, ರಾಜಧನ ಭರಿಸುವುದು ಒಂದು ಕಡೆ, ಅಗೆಯುವುದು ಇನ್ನೊಂದು ಕಡೆ, ಈ ಅಕ್ರಮ ನಡೆಯುತ್ತಿರುವ ಕುರಿತು ಅಧಿಕಾರಿಗಳ ಗಮಣಕ್ಕಿದ್ದರು ಕಣ್ಮುಚ್ಚಿ ಕುಳಿತಿದ್ದಾರೆ.

ಪ್ರಭಾವಿಗಳ ಕಣ್ಣು ಸರ್ಕಾರಿ ಜಮೀನಿನ ಮೇಲೆ ಬಿದ್ದಿದ್ದು, ನಿಯಮಗಳು ಆಟಕ್ಕುಂಟು ಲೆಕ್ಕಕ್ಕಿಲ್ಲ ಎನ್ನುವಂತಾಗಿದೆ. ತಾಲೂಕಿನ ಎರ್ರಯ್ಯನ ಹಳ್ಳಿಯ ವ್ಯಾಪ್ತಿಯಲ್ಲಿ 10 ರಿಂದ 12 ಲಕ್ಷ ಮೆಟ್ರಿಕ್ ಟನ್ ಗ್ರ್ಯಾವೆಲ್ ಅಗೆಯಲಾಗಿದೆ. ಈ ಕುರಿತು ಸ್ಥಳೀಯರು, ಬಿಜೆಪಿ ಪದಾಧಿಕಾರಿಗಳು ಪ್ರಶ್ನಿಸಿ,

ವಿರೋಧಿಸಿದ ಹಿನ್ನೆಲೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ನೇರವಾಗಿ ಇಲಾಖೆಯವರೇ ದಾಳಿ ನಡೆಸಿ ನ್ಯಾಯಾಲಯದ ಮೂಲಕ ಅಕ್ರಮ ದಂಧೆಕೋರರ ವಿರುದ್ಧ ಪ್ರಕರಣಗಳು ದಾಖಲಾಗಿದೆ. ಅಧಿಕಾರ ದುರ್ಬಳಕೆ ಮಾಡಿಕೊಂಡು ತುಕಾರಾಂ ಅವರ ಬೆಂಬಲಿಗರು ಅಧಿಕಾರಿಗಳಿಗೆ ಮೇಲಧಿಕಾರಿಗಳಿಗೆ ಒತ್ತಡ ತರಿಸಿ ವ್ಯಾಪಕವಾಗಿ ಲೂಟಿ ಹೊಡೆಯಲು ಮುಂದಾಗಿದ್ದಾರೆ. 10 ರಿಂದ 12 ಲಕ್ಷ ಮೆಟ್ರಿಕ್ ಟನ್ ಗ್ರ್ಯಾವೆಲ್ ಲೂಟಿ ಹೊಡೆದರು ಅದನ್ನು,

ಅಧಿಕಾರ ದುರ್ಬಳಕೆ ಮಾಡಿ ಕೇವಲ 35 ಲಕ್ಷ ದಂಡ ಹಾಕುವಂತೆ ಮಾಡಿದ್ದಾರೆ, ಇದೆಲ್ಲ ಅಕ್ರಮವನ್ನು ಎಳೆಎಳೆಯಾಗಿ ಬಿಚ್ಚಿಟ್ಟರೆ ನಮ್ಮ ಮೇಲೂ ಸುಳ್ಳು ಆರೋಪ, ಸುಳ್ಳು ಪ್ರಕರಣ ದಾಖಲಿಸುವುದು ಸಾಮಾನ್ಯವಾಗಿದೆ. ತಾಲೂಕು ಆಡಳಿತ, ಜಿಲ್ಲಾಡಳಿತಕ್ಕೆ ಈ ಅಕ್ರಮ ಕಂಡರೂ ಕಣ್ಮುಚ್ಚಿ ಕುಳಿತಿದೆ, ಸಂಡೂರು ಕ್ಷೇತ್ರದಲ್ಲಿ ಹೇಳೋರು ಕೇಳೋರು ಯಾರು ಇಲ್ಲದಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಎಸ್ಸಿ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರು ಹನುಮಂತು ಇತರರಿದ್ದರು.

## ಮಹರ್ಷಿ ವಾಲ್ಮೀಕಿ ಆದರ್ಶಗಳು ಜೀವನದಲ್ಲಿ ಅಳವಡಿಸಿಕೊಳ್ಳಿ : ಸೋಮೇಶ್ವರ ಶಿವಾಚಾರ್ಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ರಾಮಾಯಣದಂತಹ ಮಹಾನ ಕಾವ್ಯ ರಚಿಸಿ ದೇಶಕ್ಕೆ ಸಮರ್ಪಿಸಿದ ಮಹರ್ಷಿ ವಾಲ್ಮೀಕಿ ಅವರು ಹಾಕಿಕೊಟ್ಟತಂಹ ತತ್ವ, ಆದರ್ಶಗಳು ಎಲ್ಲರು ಜೀವನದಲ್ಲಿ ಅಳವಡಿಸಿಕೊಂಡು, ಸಮ, ಸಮಾಜ ನಿರ್ಮಿಸಲು ಮುಂದಾಗಬೇಕು ಎಂದು ಬೆಳಗಾಂವ್ ಮುಕ್ತಿಮಠ ಹಾಗೂ ಇಟಗಾ ಶ್ರೀ ಶಿವಸಿದ್ದ ಯೋಗಾಶ್ರಮ ಶಾಖಾ ಮುಕ್ತಿಮಠದ ತಪೋರತ್ನ ಶಿವಸಿದ್ದ ಸೋಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ನುಡಿದರು.

ತಾಲ್ಲೂಕಿನ ಚೀನಕೇರಾ ಗ್ರಾಮದಲ್ಲಿ ಸೋಮವಾರ ನಡೆದ ಶ್ರೀ ಮಹರ್ಷಿ ವಾಲ್ಮೀಕಿ ಮೂರ್ತಿ, ಪ್ರಾಣ ಪ್ರತಿಷ್ಠಾಪನ ಸಮಾರಂಭದಲ್ಲಿ ದಿವ್ಯಸಾನಿಧ್ಯವಹಿಸಿ ಅವರು ಮಾತನಾಡಿದರು.

ದಾನ, ಧರ್ಮದಲ್ಲಿ ನಡೆದರೆ ಭಗವಂತನ ಆಶೀರ್ವಾದ ದೊರಕುತ್ತದೆ. ಸಾದು ಸತ್ಪುರುಷರ ಸಂಘದಲ್ಲಿ ಜೀವನ ನಡೆಸಿದರೆ ಎಲ್ಲರು ಸಂಸ್ಕಾರವಂತರಾಗಿ ಬಾಳುತ್ತಾರೆ, ಧರ್ಮದ ದಾರಿಯಲ್ಲಿ ನಡೆದಾಗ ಮಾತ್ರ ಮಾನವನ ಜನ್ಮ ಸಾರ್ಥಕವಾಗುತ್ತದೆ ಎಂದರು.

ಹಿರೇಮುನವಳ್ಳಿ ಶಂಭುಲಿಂಗ ಶಿವಾಚಾರ್ಯ ಮಹಾಸ್ವಾಮಿ ಹಾಗೂ ಸೊಂತ ಮುಲ್ಲಾಮಾರಿ ಕ್ಷೇತ್ರದ ಅಭಿನವ ಬಾಲಯೋಗಿ ದತ್ತದಿಗಂಬರ ಶರಣ ಶಂಕರಲಿಂಗ ಮಹಾರಾಜರು ಸಾನಿಧ್ಯ ವಹಿಸಿ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು ಪರಮ ಪವಿತ್ರವಾದ ಮಹಾನ ಋಷಿ, ಸಮಾಜದ ಜನ ಅವರ ಸನ್ಮಾರ್ಗದಲ್ಲಿ ನಡೆಯಬೇಕು, ಸಮಾಜದಲ್ಲಿ ಮನಸ್ಸು ಕಟ್ಟುವ ಕೆಲಸವಾಗಬೇಕು, ಭೇದ, ಭಾವ ವಿಲ್ಲದೆ ಎಲ್ಲರು ಒಟ್ಟಾಗಿ ಧಾರ್ಮಿಕ ಕಾರ್ಯಕ್ರಮಗಳು ಮಾಡುವಂತಹ ಮನೋಭಾಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಗಂಗಾಮತ ಟೋಕ್ರಿ ಕೋಳಿ ಸಮಾಜ ಸಂಘದ ತಾಲ್ಲೂಕು ಅಧ್ಯಕ್ಷ ನಾಗಭೂಷಣ ಸಂಗಮ ಅವರು ಮಾತನಾಡಿ, ಶಾಸಕ ಡಾ.ಸಿದ್ದಲಿಂಗಪ್ಪಾ ಪಾಟೀಲ ಅವರು ಕೋಡುಗೆ ರೂಪದಲ್ಲಿ ಚೀನಕೇರಾ ಶ್ರೀ ಮಹರ್ಷಿ ವಾಲ್ಮೀಕಿ ಮೂರ್ತಿ ತರಲು ಆರ್ಥಿಕ ಸಹಾಯ, ಸಹಕಾರ ನೀಡಿದ್ದಾರೆ, ಶಾಸಕ ಸಿದ್ದು ಪಾಟೀಲ ಅವರು ಹಿಂದುಳಿದ ಜನರಿಗೆ ರಾಜಕೀಯ, ಸಾಮಾಜಿಕ ಆರ್ಥಿಕವಾಗಿ ಸಹಾಯ, ಸಹಕಾರ ನೀಡುವ ಮೂಲಕ ಸಮಾಜದ ಬಡ ಜನರಿಗೆ ಬಲ ತುಂಬುವಂತಹ ಮಹತ್ವದ ಕಾರ್ಯ ಮಾಡುತ್ತಿದ್ದಾರೆ, ಎಂದರು. ಸಮಾಜದ ಯುವಕರು, ಮಹರ್ಷಿ ವಾಲ್ಮೀಕಿ ಅವರ ಆದರ್ಶ ಸಿದ್ಧಾಂತವನ್ನು ಜೀವನದಲ್ಲಿ ಅಳವಡಿಸಿಕೊಂಡು ಉನ್ನತ ಶಿಕ್ಷಣ ಕಲಿತು ಮುಂದೆ ಬರಬೇಕೆಂದು ಕರೆ ನೀಡಿದರು.

ಹುಡಗಿ (ರಾಮನಗರದ) ರಾಜಶೇಖರ್ ಗುರುಜಿ, ಬಸವಕಲ್ಯಾಣ ರತ್ನಾಕರ ಶ್ರೀಗಳು ಸಾನಿಧ್ಯವಹಿಸಿದರು. ಯುವ ಉದ್ಯಮಿ, ಭಾರತೀಯ ಜನತಾ ಪಾರ್ಟಿ ಯುವ ನಾಯಕ ಸಂತೋಷ ಪಾಟೀಲ ಮಾತನಾಡಿದರು. ಗ್ರಾಮ ಪಂಚಾಯಿತಿ ಸದಸ್ಯ ವೇಂಕಟೇಶ ಜಮಾದಾರ್ ಅವರು ಸ್ವಾಗತಿಸಿ, ಪ್ರಾಸ್ತವಿಕ ಮಾತನಾಡಿದರು,

ಪ್ರಮುಖರಾದ ಶಿಕ್ಷಕ ನೀಲಕಂಠ ಇಸ್ಲಾಂಪುರೆ, ಅಮಿತ್ ಚಿಂಚೋಳಿಕರ್, ಸತೀಶ ನನ್ನೋರೆ, ಅರುಣಕುಮಾರ ಬಾವಗಿ, ಬಸವರಾಜ ಸೌಕಾರ, ನಾಗನಾಥ ಎಸ್, ಗ್ರಾಪಂ ಸದಸ್ಯ ಅಂಕುಶ ಜಮಾದರ್, ಭೀಮಶಾ ರಂಜೇರಿಕರ್, ಪ್ರಭು ಶೀರಸಿಕರ್, ಗೋರಕನಾಥ ಯಾದೋಲಿ, ಆನಂದ ರಂಜೇರಿಕರ್, ಶಿವು ಹುಲಸೂರೆ, ಮಲ್ಲಪ್ಪಾ ಜ್ಯಾಂತಿ, ಬಲಭೀಮ ಜಮಾದಾರ್, ಪ್ರಶಾಂತ ನನ್ನೂರೆ, ಇದ್ದರು.

## ಅರ್ಜಿ ಶೀಘ್ರ ವಿಲೆ: ಕಂದಾಯ ಇಲಾಖೆಯಿಂದ ಅಭಿನಂದನಾ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಅಟಲ್‌ಜೀ ಜನಸ್ನೇಹಿ ಕೇಂದ್ರ ಯೋಜನೆಯಡಿಯಲ್ಲಿ ರಾಜ್ಯದ ಸಾರ್ವಜನಿಕರಿಗೆ ವಿವಿಧ ಪ್ರಮಾಣ ಪತ್ರಗಳ ಸೇವೆಯನ್ನು ನೀಡಲು ರಾಯಚೂರು ಜಿಲ್ಲೆಯ ನಾಡಕಚೇರಿಗಳಲ್ಲಿ ಅಕ್ಟೋಬರ್ 2025ರ ಮಾಹೆಯಲ್ಲಿ ಸ್ವೀಕರಿಸಲಾಗಿರುವ 26,831 ಅರ್ಜಿಗಳನ್ನು ನಿಗದಿತ ಅವಧಿಗಿಂತ ಮೊದಲೇ ಶೇ.99.93ರಷ್ಟು ವಿಲೇವಾರಿ ಮಾಡಿ 6.4 ಸಿಗ್ಮಾ ಮೌಲ್ಯವನ್ನು ಪಡೆದಿರುತ್ತೀರಿ. 8.49 ವಿಲೇವಾರಿ ಸೂಚ್ಯಂಕದ ಪ್ರಕಾರ ತಮ್ಮ ಜಿಲ್ಲೆಯಲ್ಲಿ 9.49 ಪಟ್ಟು ನಿಗಧಿತ ಅವಧಿಗಿಂತ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಿ, ಅಕ್ಟೋಬರ್–2025ರ ಮಾಹೆಯಲ್ಲಿ ತಮ್ಮ ಜಿಲ್ಲೆಯು ರಾಜ್ಯಮಟ್ಟದಲ್ಲಿ ತೃತೀಯ ಸ್ಥಾನ ಪಡೆದಿರುವುದು ಶ್ಲಾಘನೀಯ ಎಂದು ಕಂದಾಯ ಇಲಾಖೆಯ ಆಯುಕ್ತರಾದ ಮುಲ್ಲೈ ಮುಹಿಲನ್ ಎಂ.ಪಿ.ಅವರು ರಾಯಚೂರಿನ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರಿಗೆ ಅಭಿನಂದನೆ ತಿಳಿಸಿದ್ದಾರೆ.

ನಿಮ್ಮ ಜಿಲ್ಲೆಯಲ್ಲಿನ ಈ ಕಾರ್ಯ ಸಾಧನೆಗೆ ನಿಮ್ಮ ಹಾಗೂ ನಿಮ್ಮ ನಾಡ ಕಚೇರಿ ಅಥವಾ ಅಟಲ್‌ಜೀ ಜನಸ್ನೇಹಿ ಕೇಂದ್ರದ ಸಿಬ್ಬಂದಿಗಳ ಸಹಕಾರ, ಕಾರ್ಯತತ್ಪರತೆ ಕಾರಣವಾಗಿರುತ್ತದೆ. ಅದ್ದರಿಂದ ಅಟಲ್‌ಜೀ ಜನಸ್ನೇಹಿ ನಿರ್ದೇಶನಾಲಯದ ಪರವಾಗಿ ನಿಮ್ಮ ತಂಡಕ್ಕೆ ನನ್ನ ಅಭಿನಂದನೆಯನ್ನು ವ್ಯಕ್ತಪಡಿಸಲು ಇಚ್ಛಿಸುತ್ತೇನೆ. ಇನ್ನು ಮುಂದಿನ ದಿನಗಳಲ್ಲಿಯೂ ಸಹ ನಿಮ್ಮಿಂದ ಇದೇ ರೀತಿಯ ಸಹಕಾರ ಹಾಗೂ ಕಾರ್ಯಕ್ಷಮತೆಯನ್ನು ನಿರೀಕ್ಷಿಸುತ್ತೇನೆ ಎಂದು ಕಂದಾಯ ಇಲಾಖೆಯ ಆಯುಕ್ತರು ಅಭಿನಂದನಾ ಪತ್ರದಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಎಸ್.ಎಸ್.ವಿದ್ಯಾಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಸಂಗಮೇಶ್ವರ ಪ್ರೌಢಶಾಲೆಯ ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ಕಾರ್ಯಕ್ರಮ ಮಂಗಳವಾರ ಹಮ್ಮಿಕೊಳ್ಳಲಾಯಿತು. ಸ್ಥಳೀಯ ರಿಲಾಯನ್ಸ್ ಕಾಲೇಜಿನ ಉಪನ್ಯಾಸಕರಾದ ತನ್ವೀರ ಅತ್ತಾರ ಇವರು ಗಣಿತ ವಿಷಯದ ಕುರಿತು ತಮ್ಮ ಉಪನ್ಯಾಸದ ಮೂಲಕ ಉಪಯುಕ್ತವಾದ

ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು. ಸತತ ನಾಲ್ಕು ಅವಧಿಯನ್ನು ತೆಗೆದುಕೊಂಡು ಅವರು ಈ ಉಪನ್ಯಾಸವನ್ನು ನೀಡಿದರು.

ಇದೇ ಸಂದರ್ಭದಲ್ಲಿ ಉಪನ್ಯಾಸಕ ತನ್ವೀರ್ ಅತ್ತಾರ ಇವರನ್ನು ಸಂಸ್ಥೆಯ ಪರವಾಗಿ ಪ್ರೌಢಶಾಲೆ ಸಿಬ್ಬಂದಿಗಳು ಸನ್ಮಾನಿಸಿ ಗೌರವಿಸಿದರು. ಕಾರ್ಯಕ್ರಮದಲ್ಲಿ

ಹತ್ತನೇ ತರಗತಿ ವರ್ಗ ಶಿಕ್ಷಕ ಎಸ್.ಸಿ.ಗುಡಗುಂಟಿ, ಹಿರಿಯ ಶಿಕ್ಷಕ ಬಿ.ಐ.ಹಿರೇಹೊಳಿ, ದೈಹಿಕ ಶಿಕ್ಷಕ ಎಂ.ಎಸ್.ರಾಯಗೊಂಡ, ದುಳಿಂಗ ಪೂಜಾರಿ, ಕೆ.ಎನ್. ನಾಲತವಾಡ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮಕ್ಕಳ ರಕ್ಷಣಾ ಕಾಯ್ದೆ ಸಮರ್ಪಕ ಅನುಷ್ಠಾನಗೊಳಿಸಿ ಶೇಖರಗೌಡ ರಾಮತ್ನಾಳ

ಮಲ್ಲಮ್ಮ ನುಡಿ ಬಾಗಲಕೋಟೆ:

ಜಿಲ್ಲೆಯ ಪ್ರತಿಯೊಂದು ಶಾಲೆಗಳಲ್ಲಿ ಮಕ್ಕಳ ರಕ್ಷಣಾ ಕಾಯ್ದೆ ಸಮರ್ಪಕ ಅನುಷ್ಠಾನಗೊಳಿಸುವಲ್ಲಿ ಅಧಿಕಾರಿಗಳಿಂದ ಹಿಡಿದು ತಳಹಂತದ ಸಿಬ್ಬಂದಿಯವರೆಗೆ ಕೆಲಸ ಮಾಡಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ರಾಮತ್ನಾಳ ಸೂಚಿಸಿದರು.

ವಿದ್ಯಾಗಿರಿಯ ಬಿ.ವಿ.ವಿ ಸಂಘದ ರೂಡ್‌ಸೆಟ್ ಸಂಸ್ಥೆಯಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಹಾಗೂ ಇವರುಗಳ ಸಂಯುಕ್ತಾಶ್ರಯದಲ್ಲಿ ಮಕ್ಕಳ ರಕ್ಷಣೆ ಕುರಿತು ಮಕ್ಕಳ ಪಾಲನಾ

ಸಂಸ್ಥೆಗಳ ಸಿಬ್ಬಂದಿಗಳಿಗೆ ಹಮ್ಮಿಕೊಂಡ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಕ್ಕಳ ಪಾಲನಾ ಸಂಸ್ಥೆಯ ಸಿಬ್ಬಂದಿಗಳು ಸರ್ಕಾರ ನೀಡಿದ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ಕಡ್ಡಾಯವಾಗಿ ನಿರ್ವಹಿಸಬೇಕು ಎಂದರು.

ಜಿಲ್ಲೆಯಲ್ಲಿ ಬಾಲ್ಯವಿವಾಹ ಪ್ರಕರಣಗಳು ಹೆಚ್ಚಾಗಿ ಕಂಡು ಬರುತ್ತಿವೆ. ತಳಹಂತದ ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ



ಅಧಿಕಾರಿಗಳು, ಗ್ರಾಮ ಮಟ್ಟದ ಎಲ್ಲಾ ಅಧಿಕಾರಿಗಳು ಬಾಲ್ಯವಿವಾಹ ನಿಷೇಧನ ಅಧಿಕಾರಿಗಳಾಗಿರುತ್ತಾರೆ. ಅಲ್ಲದೇ ನಿಶ್ಚಿತಾರ್ಥ ಮಾಡಿದರೂ ಸಹ ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧವಾಗಿರುತ್ತದೆ. ಸರ್ಕಾರಿ, ಅರೆ ಸರ್ಕಾರಿ ಆಸ್ಪತ್ರೆಯಲ್ಲಿ ಪರೀಕ್ಷೆಗೆ ಬಂದ ಸಮಯದಲ್ಲಿ ಮಗು ವಯಸ್ಸು ಕಡಿಮೆ ಇರುವುದು ಕಂಡು ಬಂದರೆ ಮಕ್ಕಳ ಸಹಾಯವಾಣಿ-1098ಗೆ ಕರೆ ಮಾಡಬೇಕು. ಬ್ಯೂಟಿಶಿಯನ್ ತರಬೇತಿದಾರರಿಗೆ ಮೇಕಪ್ ಮಾಡುವ ಸಮಯದಲ್ಲಿ ಮಕ್ಕಳ ವಯಸ್ಸು 18 ವರ್ಷದೊಳಗಿನ ಮಕ್ಕಳು ಕಂಡು ಬಂದಲ್ಲಿ ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡುವ ಕಾರ್ಯವಾಗಬೇಕು ಎಂದು ಅವರು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದಂತಹ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಹನಮಂತಗೌಡ ಪಾಟೀಲ ಮಾತನಾಡಿ, ಪ್ರಮುಖವಾಗಿ ಪೋಕ್ಸೋ ಕಾಯ್ದೆ-2012, ಸೇಫ್ ಟಚ್ ಮತ್ತು ಅನ್‌ಸೇಫ್ ಟಚ್ ಕುರಿತು ಅರಿವು ನೀಡಬೇಕು. ಜಿಲ್ಲೆಯ ಎಲ್ಲಾ ಬಸ್ ನಿಲ್ದಾಣಗಳಲ್ಲಿ ಮಕ್ಕಳ ಸಹಾಯವಾಣಿ-1098 ಗೋಡೆ ಬರಹವನ್ನು ಕಡ್ಡಾಯವಾಗಿ ಬರೆಯಿಸಲು ತಿಳಿಸಿದರು.

ಇನ್ನೋರ್ವ ಮುಖ್ಯ ಅತಿಥಿಗಳಾಗಿ ಆಗಮಿಸಿದಂತಹ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಡಾ.ವೀಣಾ.ಎಂ ಮಾತನಾಡಿ, ಮಕ್ಕಳ ಸಹಾಯವಾಣಿ, ಮಕ್ಕಳ ರಕ್ಷಣಾ ಕಾಯ್ದೆಗಳ ಕುರಿತು ಧ್ವನಿವರ್ಧಕಗಳ ಮೂಲಕ ಅರಿವು ಮೂಡಿಸಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಮಂಜುನಾಥ ಪರಸನ್ನವರ ಮಾತನಾಡಿ, ಪ್ರತಿ ಶಾಲೆಗಳಲ್ಲಿ ಮಕ್ಕಳ ರಕ್ಷಣಾ

ನೀತಿ ಅನುಷ್ಠಾನ, ಸಲಹಾ ಪೆಟ್ಟಿಗೆಗಳನ್ನು ಅಳವಡಿಸಲು ಮತ್ತು ಮಹಿಳಾ ಮತ್ತು ಮಕ್ಕಳ ಗ್ರಾಮ ಸಭೆ ಕುರಿತು ಚರ್ಚಿಸಿ, ಮಕ್ಕಳ ರಕ್ಷಣಾ ಕಾಯ್ದೆಗಳ ಕುರಿತು ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಅತಿಥಿ ಉಪನ್ಯಾಸಕರಾದ ತೇಜಸ್ವಿನಿ ಹಿರೇಮಠ, ಪೋಕ್ಸೋ ಕಾಯ್ದೆ-2012 ಹಾಗೂ ಮಕ್ಕಳ ಹಕ್ಕುಗಳು ಕುರಿತು ಹಾಗೂ ಗುಲಾಬ ನದಾಫ ಅವರು ಬಾಲನ್ಯಾಯ ಕಾಯ್ದೆ-2015 ಹಾಗೂ ಮಕ್ಕಳ ರಕ್ಷಣೆಯಲ್ಲಿ ಸಿಬ್ಬಂದಿಗಳ ಪಾತ್ರ ಹಾಗೂ ಮಕ್ಕಳ ಪುನರ್ವಸತಿ ಕುರಿತು ಅತಿಥಿ ಉಪನ್ಯಾಸ ನೀಡಿದರು.

ಸಭೆಯಲ್ಲಿ ಸಾಂಸ್ಥಿಕ ರಕ್ಷಣಾಧಿಕಾರಿ ಸಂತೋಷ ಹುರಕನ್ನವರ, ಬಿ.ವಿ.ವಿ ಸಂಘದ ರೂಡ್‌ಸೆಟ್ ಸಂಸ್ಥೆ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಅಂಗಡಿ ಸೇರಿದಂತೆ ಇನ್ನಿತರರು ಉತಸ್ಥಿತರಿದ್ದರು.

### ಅಂತರ್ ಕಾಲೇಜು ಮಹಿಳಾ ವಾಲಿಬಾಲ್ ಪಂದ್ಯಾವಳಿ

## ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಚಾಂಪಿಯನ್



ಮಲ್ಲಮ್ಮ ನುಡಿ ಬಾಗಲಕೋಟೆ:

ವಿದ್ಯಾರ್ಥಿಗಳು ಕ್ರೀಡಾ ಕ್ಷೇತ್ರದಲ್ಲಿ ಸತತ ಪರಿಶ್ರಮ ಮತ್ತು ಉತ್ತಮ ತರಬೇತಿ ಪಡೆಯುವದರಿಂದ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಹೇಳಿದರು.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕ್ರೀಡಾ ವಿಭಾಗದಲ್ಲಿ ಇತ್ತೀಚಿಗೆ ಇಲಕಲ್ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಬಾಗಲಕೋಟೆ ವಿವಿ ಅಂತರ ಕಾಲೇಜು ಮಹಿಳಾ ವಾಲಿಬಾಲ್ ಪಂದ್ಯಾವಳಿ ಹಾಗೂ ವಿಶ್ವವಿದ್ಯಾಲಯ ತಂಡದ ಆಯ್ಕೆಯಲ್ಲಿ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಮಹಿಳಾ ವಾಲಿಬಾಲ್ ತಂಡ ಚಾಂಪಿಯನ್ ಪಡೆದ ಅಂಗವಾಗಿ ವಾಲಿಬಾಲ್ ಕ್ರೀಡಾ ತಂಡದ ಮಹಿಳಾ ಕ್ರೀಡಾಪಟುಗಳಿಗೆ ಅಭಿನಂದನೆ ಸಲ್ಲಿಸಿ ಮಾತನಾಡಿದರು. ನಮ್ಮ ಕಾಲೇಜಿನ ನಾಲ್ಕು ಜನ ಮಹಿಳಾ ವಿದ್ಯಾರ್ಥಿನಿಯರು ಜಮಖಂಡಿಯ ಬಾಗಲಕೋಟೆ ವಿಶ್ವವಿದ್ಯಾಲಯದ 2025-26 ಸಾಲಿನ ವಾಲಿಬಾಲ್ ಕ್ರೀಡಾ ವಿಭಾಗದಲ್ಲಿ ಬ್ಲ್ಯೂ ಆಗಿ ಆಯ್ಕೆಯಾಗಿರುವುದು ಎಲ್ಲರಿಗೂ ಸಂತಸ ತಂದಿದೆ ಎಂದರು. ಕ್ರೀಡಾ ವಿಭಾಗದ ನಿರ್ದೇಶಕ ನೀಲಪ್ಪ ಕುರಿ ಅವರು ಮಾತನಾಡಿ, ಪದವಿ ಹಂತದಲ್ಲಿ ಕಲಿಯುವ ವಿದ್ಯಾರ್ಥಿಗಳು ತಮ್ಮ ಕ್ರೀಡಾ ಕ್ಷೇತ್ರದಲ್ಲಿ ಸ್ವ ಆಸಕ್ತಿಯನ್ನು ಬೆಳೆಸಿಕೊಂಡರೆ ಸಮಾಜದಲ್ಲಿ ಸಾಧಕರಾಗಲು ಸಾಧ್ಯವಿದೆ ಎಂಬುದಕ್ಕೆ ನಮ್ಮ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕ್ರೀಡಾಪಟುಗಳು ಸಾಕ್ಷಿಯಾಗಿದ್ದಾರೆ ಎಂದರು. ಕಾಲೇಜಿನ ಗಾಯತ್ರಿ ಲಮಾಣಿ, ರೇಣುಕಾ ಮಡಿವಾಳರ, ಅರ್ಪಿತಾ ಪೂಜಾರ, ತಸ್ಲಿಮ್ ನಿಂಬ್ಯಾಳ, ರೇಣುಕಾ ಚಿಮ್ಮಲಗಿ, ಬೋರಮ್ಮ ದಡ್ಡಿ, ಶಶಿಕಲಾ ಗಂಗೂರ, ಕಾವೇರಿ ಚಿಕ್ಕಮಠ, ನಿಶಾ ಚವಾಣ, ಲಕ್ಷ್ಮೀ ಯರಗಟ್ಟಿ ಈ ವಿದ್ಯಾರ್ಥಿನಿಯರ ಮಹಿಳಾ ತಂಡವು ಬಾಗಲಕೋಟೆ ವಿಶ್ವವಿದ್ಯಾಲಯದ ವಾಲಿಬಾಲ್ ಚಾಂಪಿಯನ್ ಪಡೆದು-ಕೊಂಡಿದ್ದಾರೆ. ಕಾಲೇಜಿನ ವಿದ್ಯಾರ್ಥಿನಿಯರಾದ ರೇಣುಕಾ ಮಡಿವಾಳರ, ಗಾಯತ್ರಿ ಲಮಾಣಿ, ಅರ್ಪಿತಾ ಪೂಜಾರ, ಕಾವೇರಿ ಚಿಕ್ಕಮಠ ವಿಶ್ವವಿದ್ಯಾಲಯ ಬ್ಲ್ಯೂ ಆಗಿ ಆಯ್ಕೆಯಾಗಿದ್ದಾರೆ.

## ಬೀದಿ ನಾಯಿ ದತ್ತು ಪ್ರಕ್ರಿಯೆ

ಮಲ್ಲಮ್ಮ ನುಡಿ ಬಾಗಲಕೋಟೆ:

ಬಾಗಲಕೋಟ ನಗರದಲ್ಲಿ ನಾಯಿಗಳ ಹಾವಳಿಗಳು ಬಹಳ ಆಗಿದ್ದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಹಿನ್ನಲೆಯಲ್ಲಿ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ನಗರಸಭೆ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೇಲ್ವೆ ನಿಲ್ದಾಣಗಳ ಆವರಣದಲ್ಲಿ ಬೀದಿ ನಾಯಿಗಳನ್ನು ಆಶ್ರಯ ತಾಣಗಳಿಗೆ ಸ್ಥಳಾಂತರಿಸಲು ಕ್ರಮಕೈಕೊಳ್ಳಲಾಗುತ್ತಿದ್ದು, ಇಚ್ಚಿಸುವ ಸಾರ್ವಜನಿಕರು, ಎನ್‌ಜಿಓಗಳು ಹಾಗೂ ಶ್ವಾನಪ್ರಿಯರು ದತ್ತು ಪಡೆಯಲು ಇಚ್ಚಿಸಿದ್ದಲ್ಲಿ ಬಾಗಲಕೋಟ ನಗರಸಭೆ ಕಾರ್ಯಲಯಕ್ಕೆ ಸಂಪರ್ಕಿಸುವಂತೆ ಪೌರಾಯುಕ್ತ ವಾಸಣ್ಣ ಆರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಂಗಾಪುರಂ ಏಳು ದಿನಗಳ ಕಾಲ ಶೂಟಿಂಗ್



ಬಳ್ಳಾರಿ: 'ಶ್ರೀನಿವಾಸಮಂಗಾಪುರಂ' ಚಿತ್ರದ ಶೂಟಿಂಗ್ ಜೋರಾಗಿ ಮುಂದುವರಿಕೆ ತೆಲುಗು ಸಿನಿಮಾರಂಗದ ಖ್ಯಾತ ನಟ ಮೋಹನ್ ಬಾಬು ಅಭಿನಯಿಸಿರುವ 'ಶ್ರೀನಿವಾಸಮಂಗಾಪುರಂ' ಚಿತ್ರದ ಶೂಟಿಂಗ್ ಕಳೆದ ಮೂರು ದಿನಗಳಿಂದ ಬಳ್ಳಾರಿಯ ವಿವಿಧ ಪ್ರದೇಶಗಳಲ್ಲಿ ಸಾಗುತ್ತಿದೆ. ಇನ್ನೂ ಏಳು ದಿನಗಳ ಕಾಲ ಶೂಟಿಂಗ್ ನಡೆಯಲಿದೆ ಎಂದು ಮೂವಿ ತಂಡ ತಿಳಿಸಿದೆ. ಈ ಚಿತ್ರದಲ್ಲಿ ಹೀರೋ ಆಗಿ ಸೂಪರ್‌ಸ್ಟಾರ್ ಮಹೇಶ್ ಬಾಬು ಅವರ ಸಹೋದರ ಮಗ ಜೈ ಕೃಷ್ಣ ನಟಿಸುತ್ತಿದ್ದು, ಚಿತ್ರವನ್ನೂ ವೈಜಯಂತಿ ಮೂವೀಸ್ ಹಾಗೂ ಚಂದಮಾಮ ಕತಲು ಬ್ಯಾನರ್ ಅಡಿಯಲ್ಲಿ ನಿರ್ಮಿಸಲಾಗುತ್ತಿದೆ. ಇಂದು ಜಿಲ್ಲಾ ಆಸ್ಪತ್ರೆಗೆ ಆವರಣದಲ್ಲಿ ಶೂಟಿಂಗ್ ಆರಂಭವಾಗಿದ್ದು, ಖ್ಯಾತ ನಟ ಮೋಹನ್ ಬಾಬುವನ್ನು ನೋಡಲು ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದರು.

ಬಳ್ಳಾರಿಯ ಜನರಲ್ಲಿ ಸಿನಿಮಾ ಸೂಟಿಂಗ್ ಬಗ್ಗೆ ಉತ್ಸಾಹ ಉಂಟಾಗಿದೆ.

## ಲೋಕಾಯುಕ್ತ ಎಸ್‌ಪಿಯಿಂದ ಗುತ್ತಿಗೆದಾರ, ಅಧಿಕಾರಿಗಳ ರಕ್ಷಣೆ

**ಬೀಳಗಿ ಪವರ್ ಸ್ಟೇಷನ್ ಕಳಪೆ ಕಾಮಗಾರಿ ಮುತ್ತಿನಮಠ ಆರೋಪ**



ಮಲ್ಲಮ್ಮ ನುಡಿ ಬಾಗಲಕೋಟೆ:

ಜಿಲ್ಲೆಯ ಬೀಳಗಿ ಬಳಿ ನಿರ್ಮಾಣ ಮಾಡಲಾಗಿರುವ 220 ಕೆವಿ ಪವರ್ ಸ್ಟೇಷನ್ ಕಾಮಗಾರಿ ಕಳಪೆಯಾಗಿದ್ದು, ಭಾರೀ ಭ್ರಷ್ಟಚಾರ ನಡೆದಿರುವ ಬಗ್ಗೆ ಕೆಪಿಟಿಸಿಎಲ್ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ದೂರು ಸಲ್ಲಿಸಿದ್ದರೂ ಲೋಕಾಯುಕ್ತ ಪೋಲಿಸರು ಈತನಕ ಯಾವುದೇ ಕ್ರಮಕ್ಕೆ ಮುಂದಾಗಿಲ್ಲ. ಜೊತೆಗೆ ಲೋಕಾಯುಕ್ತ ಎಸ್‌ಪಿ ಅವರನ್ನು ಬಚಾವ್ ಮಾಡುವ ಕೆಲಸದಲ್ಲಿ ತೊಡಗಿದ್ದಾರೆ ಎಂದು ದೂರುದಾರ ಅಶೋಕ ಮುತ್ತಿನಮಠ ಆರೋಪಿಸಿದರು.

ನವನಗರದ ಪತ್ರಿಕಾಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೀಳಗಿ ಬಳಿಯ 124 ಕೋಟಿ ರೂ.ಗಳ ಪವರ್ ಸ್ಟೇಷನ್ ನಿರ್ಮಾಣ ಕಾಮಗಾರಿ ಕಳಪೆ ಮಟ್ಟದ್ದಾಗಿದೆ. ಸ್ಟೇಷನ್ ಸ್ಥಳವೇ ಅವೈಜ್ಞಾನಿಕವಾಗಿದ್ದು, ಆಲಮಟ್ಟಿ ಜಲಾಶಯದ 519 ಮೀಟರ್ ವ್ಯಾಪ್ತಿಗೆ ಒಳಪಡುತ್ತಿದ್ದು, ಜಲಾಶಯ 524 ಮೀಟರ್ ಎತ್ತರಗೊಂಡರೆ ಅದು ಸಂಪೂರ್ಣ ಮುಳುಗಡೆಯಾಗುತ್ತದೆ ಎಂಬುದು ತಿಳಿದಿದ್ದರೂ ಸ್ಟೇಷನ್ ನಿರ್ಮಾಣ ಮಾಡಲಾಗಿದೆ ಎಂದರು.

ಕಳಪೆ ಕಾಮಗಾರಿ, ನಡೆದಿರುವ ಭ್ರಷ್ಟಾಚಾರ ಹಾಗೂ ಕಾನೂನು ಬದ್ಧ ರಾಜಧನ ಕಡಿತಗೊಳಿಸದೇ ಸರ್ಕಾರಕ್ಕೆ ಆಗಿರುವ ನಷ್ಟದ ಸಂಪೂರ್ಣ ಮಾಹಿತಿಯ ಜೊತೆ ಸಂಬಂಧಿತ ಇಲಾಖೆಯ 8 ಜನ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ತಾವು ಕಳೆದ ಎಪ್ರೀಲ್ 23 ಕ್ಕೆ ದೂರು ನೀಡಿದ್ದರೂ ಲೋಕಾಯುಕ್ತ ಪೋಲಿಸರು ಇದುವರೆಗೆ ಯಾವುದೇ ತನಿಖೆಯನ್ನು ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದ ಮುತ್ತಿನಮಠ, ಈ ಕುರಿತು ರಾಜ್ಯ ಲೋಕಾಯುಕ್ತರಿಗೆ ಮನವಿ ಮಾಡಿದ್ದರೂ ಸಹ ಯಾವುದೇ ಪ್ರಯೋಜನವಾಗಿಲ್ಲ ಎಂದು ದೂರಿದರು.

ಪವರ್ ಸ್ಟೇಷನ್ ಕಳಪೆ ಕಾಮಗಾರಿ ಹಾಗೂ ಇದರಲ್ಲಿ ನಡೆದಿರುವ ಭ್ರಷ್ಟಾಚಾರದ ಕುರಿತು ತಾವು ನೀಡಿರುವ ದೂರಿನಂತೆ ವಿಚಾರಣೆ ಮತ್ತು ತನಿಖೆ ಕೈಗೊಳ್ಳುವ ನಿಟ್ಟಿನಲ್ಲಿ ಮೊದಲು ಲೋಕಾಯುಕ್ತ ಎಸ್‌ಪಿ ಅವರನ್ನು ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿದ ದೂರುದಾರ ಅಶೋಕ ಮುತ್ತಿನಮಠ, ಲೋಕಾಯುಕ್ತ ಸಂಸ್ಥೆಯ ಬಗ್ಗೆ ಜನರಲ್ಲಿ ಅಪನಂಬಿಕೆ ಉಂಟಾಗದಿರಲು ಈ ಕೂಡಲೇ ಎಸ್‌ಪಿ ಮಲ್ಲೇಶ ಅವರನ್ನು ತೆಗೆದು ಹಾಕಬೇಕು. ಒಂದು ವಾರದೊಳಗೆ ಅವರ ಬದಲಾವಣೆ ಆಗದಿದ್ದಲ್ಲಿ ಜಿಲ್ಲಾ ಲೋಕಾಯುಕ್ತ ಎಸ್‌ಪಿ ಕಚೇರಿ ಮುಂದೆ ಧರಣಿ ನಡೆಸುವುದಾಗಿ ತಿಳಿಸಿದರು.

## ಸ್ಟ್ರಾಬೇರಿ ಬೆಳೆಯ ಕ್ಷೇತ್ರೋತ್ಸವ ಕಾರ್ಯಕ್ರಮ

ಬೀದರ: ಬೀದರನ ತೋಟಗಾರಿಕಾ ಮಹಾವಿದ್ಯಾಲಯದ ವಿಜ್ಞಾನಿಗಳಿಂದ ಸ್ಟ್ರಾಬೇರಿ ಬೆಳೆಯ ಬಗ್ಗೆ ತಾಂತ್ರಿಕ ಮಾಹಿತಿಯನ್ನು ಪಡೆದು ಯಶಸ್ವಿಯಾಗಿ ಬೆಳೆದು, ಹೆಚ್ಚಿನ ಆದಾಯವನ್ನು ಪಡೆದು ಇತರೇ ರೈತರಿಗೆ ವೈಜನಾಥ ನಿಡೋದ ಅವರು ಮಾದರಿಯಾಗಿದ್ದಾರೆಂದು ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ.ಎಸ್.ವಿ.ಪಾಟೀಲ್ ಹೇಳಿದರು. ಅವರು ಮಂಗಳವಾರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟನ ಅಡಿಯಲ್ಲಿ ಬರುವ ತೋಟಗಾರಿಕೆ ಮಹಾವಿದ್ಯಾಲಯ ಬೀದರ ವತಿಯಿಂದ ವೈಜನಾಥ ನಿಡೋದರವರ ಸ್ಟ್ರಾಬೇರಿ ಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ಸ್ಟ್ರಾಬೇರಿ ಬೆಳೆಯ ಕ್ಷೇತ್ರೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ರೈತರು ಸಮಗ್ರ ಕೃಷಿ ಮಾಡುವುದರ ಮೂಲಕ ಹಾಗೂ ಹೊಸ ಬೆಳೆಗಳನ್ನು ಕ್ಷೇತ್ರಕ್ಕೆ ಹೊಸದಾಗಿ ಪರಿಚಯಿಸುವ ಮುಖಾಂತರ ಹೆಚ್ಚಿನ ಲಾಭ ಪಡೆಯಬೇಕು. ಸ್ಟ್ರಾಬೇರಿ ಶೀತವಲಯದ ಬೆಳೆಯಾಗಿದ್ದು, ಹೆಚ್ಚು ಎತ್ತರದ ಪ್ರದೇಶ ಕಡಿಮೆ ತಾಪಮಾನ ಇರುವ ಕಡೆ ಸಮೃದ್ಧವಾಗಿ ಬೆಳೆಯುತ್ತದೆಂದರು. ತೋಟಗಾರಿಕಾ ಮಹಾವಿದ್ಯಾಲಯದ ಹಣ್ಣು ವಿಜ್ಞಾನ ವಿಜ್ಞಾನಿಯಾದ ಡಾ. ಶ್ರೀನಿವಾಸ ಎನ್., ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಸ್ಟ್ರಾಬೇರಿ ಜೋಡಿ ಸಾಲು ಪದ್ಧತಿಯಲ್ಲಿ ಏರು ಮಡಿಯಲ್ಲಿ ಸಮಗ್ರ ಪೋಷಕಾಂಶಗಳ ನಿರ್ವಹಣೆಯ ಜೊತೆಗೆ ನಿಯಮಿತವಾಗಿ ನೀರು ಕೊಡುವುದರ ಮುಖಾಂತರ ಪೋಷಕಾಂಶಗಳಾದ ಪೋಟ್ಯಾಷಿಯಂ, ಕ್ಯಾಲ್ಸಿಯಂಗಳನ್ನು ಸಮಯೋಚಿತವಾಗಿ ಬಳಸಿ ಹೆಚ್ಚಿನ ಆದಾಯವನ್ನು ಪಡೆಯಬಹುದು. ಒಂದು ಸಸಿ ಸುಮಾರು 700-800 ಗ್ರಾಂ. ಹಣ್ಣುಗಳನ್ನು ಕೊಡುತ್ತದೆ. ಪ್ರತಿ ಏಕರೆಗೆ 8-10 ಟನ್ ಇಳುವರಿ ಪಡೆಯಬಹುದೆಂದು ರೈತರಿಗೆ ತಿಳಿ ಹೇಳಿದರು.

ತೋಟಗಾರಿಕಾ ಮಹಾವಿದ್ಯಾಲಯದ ವಿಜ್ಞಾನಿಗಳಾದ ಹಾಗೂ ಸಂಪನ್ಮೂಲ ವ್ಯಕ್ತಿಗಳಾದ ಡಾ. ರಾಜಕಮಾರ ಎಮ್. ಮತ್ತು ಡಾ.ಅಬ್ದುಲ್ ಕರಿಂಎಮ್. ಸ್ಟ್ರಾಬೇರಿ ಬೆಳೆಗೆ ಬರುವ ಕೀಟ ಮತ್ತು ರೋಗಗಳ ನಿರ್ವಹಣೆ ಕುರಿತು ಸಮಗ್ರ ಮಾಹಿತಿ ನೀಡಿದರು.

## ಉತ್ತರ ಕರ್ನಾಟಕಕ್ಕೆ ಅನ್ಯಾಯ: ಕಿತ್ತೂರಿಂದ ಸುವರ್ಣಸೌಧವರೆಗೆ ಪಾದಯಾತ್ರೆ



ಮಲ್ಲಮ್ಮ ನುಡಿ ಬಾಗಲಕೋಟೆ:

ಉತ್ತರ ಕರ್ನಾಟಕಕ್ಕೆ ಆಗುತ್ತಿರುವ ಅನ್ಯಾಯವನ್ನು ಸರ್ಕಾರದ ಗಮನಕ್ಕೆ ತರುವ ನಿಟ್ಟಿನಲ್ಲಿ ಡಿ.15 ರಂದು ಬೆಳಗಾವಿ ಜಿಲ್ಲೆಯ ಕಿತ್ತೂರಿನಿಂದ ಬೆಳಗಾವಿಯ ಸುವರ್ಣಸೌಧಕ್ಕೆ ಪಾದಯಾತ್ರೆ ಕೈಗೊಳ್ಳಲಾಗುತ್ತಿದೆ ಎಂದು ಕಿತ್ತೂರ ಕಲ್ಯಾಣ ಕರ್ನಾಟಕ ಸೇನಾ ಪಕ್ಷ ಹಾಗೂ ಉತ್ತರ ಕರ್ನಾಟಕ ಸೇನೆಯ ಪ್ರಮುಖರು ತಿಳಿಸಿದರು.

ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕಿತ್ತೂರ ಕಲ್ಯಾಣ ಕರ್ನಾಟಕ ಸೇನಾ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಸಿದ್ಧನಗೌಡ ಪಾಟೀಲ, ಮಹತ್ತರ ಹಕ್ಕೊತ್ತಾಯಗಳನ್ನು ಸರ್ಕಾರಕ್ಕೆ ತಿಳಿಸಿ ಉತ್ತರ ಕರ್ನಾಟಕಕ್ಕೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಡಿ.8 ರಿಂದ ಬಾಗಲಕೋಟೆ ಜಿಲ್ಲೆಯ ಕೂಡಲಸಂಗಮದಿಂದ ಬೆಳಗಾವಿಗೆ ಪಾದಯಾತ್ರೆ ನಡೆಸಲು ಉದ್ದೇಶಿಸಲಾಗಿತ್ತು. ಆದರೆ ಪಾದಯಾತ್ರೆಗೆ ಈತನಕ ಅನುಮತಿ ದೊರೆಯದ ಹಿನ್ನೆಲೆಯಲ್ಲಿ ಪಾದಯಾತ್ರೆಯನ್ನು ಬೆಳಗಾವಿ ಜಿಲ್ಲೆಯ ಕಿತ್ತೂರಿನಿಂದ ಡಿ.15 ರಂದು ಆರಂಭಿಸಿ 16 ರಂದು ಸುವರ್ಣಸೌಧಕ್ಕೆ ತಲುಪಿ ಹೋರಾಟ ನಡೆಸಲಾಗುವುದು ಎಂದರು. ವಿಜಯಪುರ, ಬಾಗಲಕೋಟೆ, ಬೆಳಗಾವಿ, ಕಾರವಾರ, ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಿಗೆ 371(ಜೆ) ಕಲಂ ಅನ್ವಯಿಸಬೇಕು, ಉತ್ತರ ಕರ್ನಾಟಕದ 14 ಜಿಲ್ಲೆಗಳಿಗಾಗಿ ಪ್ರತ್ಯೇಕ ಬಜೆಟ್ ಮಂಡನೆ ಮಾಡಬೇಕು, ಮಹಾದಾಯಿ ಹೋರಾಟಕ್ಕೆ ನ್ಯಾಯ ಒದಗಿಸಬೇಕು, ಕೃಷ್ಣಾ ಮೇಲ್ದಂಡೆ ಯೋಜನೆ ಕಾಮಗಾರಿಗೆ ಪೂರ್ಣಪ್ರಮಾಣದ ಅನುದಾನ ಬಿಡುಗಡೆ ಮಾಡಬೇಕು ಎಂಬುದು ಸೇರಿ ಹಲವಾರು ಬೇಡಿಕೆಗಳುಳ್ಳ ಮನವಿ ಪತ್ರವನ್ನು ಡಿ.16 ರಂದು ಸುವರ್ಣಸೌಧದಲ್ಲಿ ಮುಖ್ಯಮಂತ್ರಿಗಳಿಗೆ ನೀಡಲಾಗುವುದು ಎಂದು ತಿಳಿಸಿದರು. ಉತ್ತರ ಕರ್ನಾಟಕ ಸೇನೆಯ ರಾಜ್ಯ ಸಂಚಾಲಕ ಬಸವರಾಜ ಶೆಟ್ಟಿ, ಸಹ ಸಂಚಾಲಕ ರಾಜುಗೌಡ ಪಾಟೀಲ, ಮುತ್ತು ಮಹಿಷವಾಡಗಿ ಪತ್ರಿಕಾಗೋಷ್ಠಿಯಲ್ಲಿದ್ದರು.

## ಸಂಭ್ರಮದ ಮುಚಖಂಡಿ ವೀರಭದ್ರೇಶ್ವರ ಜಾತ್ರೆ



ಮಲ್ಲಮ್ಮ ನುಡಿ ಬಾಗಲಕೋಟೆ:

ಸಮೀಪದ ಮುಚಖಂಡಿ ಗ್ರಾಮದ ಐತಿಹಾಸಿಕ ವೀರಭದ್ರೇಶ್ವರ ಜಾತ್ರೆ ಮಂಗಳವಾರ ಶೃದ್ಧಾಭಕ್ತಿಯಿಂದ ಅದ್ದೂರಿಯಾಗಿ ಜರುಗಿತು.

ಕಾರ್ತಿಕೋತ್ಸವದ ಹಿನ್ನೆಲೆಯಲ್ಲಿ ಬೆಳಿಗ್ಗೆಯಿಂದ ವೀರಭದ್ರೇಶ್ವರನಿಗೆ ಪಂಚಾಮೃತ ಅಭಿಷೇಕ, ಮಹಾರುದ್ರಾಭಿಷೇಕ, ರುದ್ರಪಠಣ, ಮಹಾಮೃತ್ಯುಂಜಯ ಮಂತ್ರ ಪಠಣದೊಂದಿಗೆ ಪುಷ್ಪಾಂಲಕಾರ, ಮಹಾಮಂಗಳಾರುತಿ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳು ನಡೆದವು.

ಬೆಣ್ಣೂರಿನಿಂದ ಕಳಸ, ವೀರಾಪುರದಿಂದ ಹಗ್ಗ, ಸಿಮಿಕೇರಿ, ಯಂಡಿಗೇರಿ ಹಾಗೂ ಮುಚಖಂಡಿಯಿಂದ ನಂದಿಕೋಲು ಆಗಮಿಸಿದವು. ನಂತರ ರಥವನ್ನು ತಳಿರು ತೋರಣ ಪುಷ್ಪಗಳಿಂದ ಶೃಂಗರಿಸಲಾಯಿತು. ಸಂಜೆ 4 ಗಂಟೆಗೆ ಸಣ್ಣರಥೋತ್ಸವ (ಉತ್ಸವ) ನಡೆಯಿತು. 5 ಗಂಟೆಗೆ ಮಹಾರಥೋತ್ಸವ ವಿಜೃಂಭಣೆಯಿಂದ ನೆರವೇರಿತು.

ಸೇರಿದ್ದ ಸಾವಿರಾರು ಜನ ಭಕ್ತರು ಹಣ್ಣು, ಹೂವು, ಉತ್ತತ್ತಿ ರಥಕ್ಕೆ ಎಸೆದು ಹರಕೆ ತೀರಿಸಿದರು. ಮಹಾರಥೋತ್ಸವದ ನಂತರ ದೇವಸ್ಥಾನದ ಆವರಣದಲ್ಲಿ ಭಕ್ತಾದಿಗಳು

ದೀಪಗಳನ್ನು ಬೆಳಗುವ ಮೂಲಕ ಕಾರ್ತಿಕ ದೀಪೋತ್ಸವ ಪಾಲ್ಗೊಂಡು ಸಂಭ್ರಮಿಸಿದರು.

ಜಾತ್ರಾ ಮಹೋತ್ಸವದಲ್ಲಿ ಶ್ರೀವೀರಭದ್ರೇಶ್ವರ ಜೀರ್ಣೋದ್ಧಾರ ಕಮೀಟಿ, ವೀರಭದ್ರೇಶ್ವರ ಕಾರ್ತಿಕೋತ್ಸವ

ಹಾಗೂ ರಥೋತ್ಸವ ಸಮೀತಿ ಪದಾಧಿಕಾರಿಗಳು, ಸದಸ್ಯರು, ಮುಚಖಂಡಿ ಗ್ರಾಮದ ಹಿರಿಯರು, ಯುವಕರು ಹಾಗೂ ಸುತ್ತಮುತ್ತಲಿನ ಗ್ರಾಮದ ಭಕ್ತಾಧಿಗಳು ಪಾಲ್ಗೊಂಡಿದ್ದರು.

## ಡಿ.12 ಅಯ್ಯಪ್ಪಸ್ವಾಮಿ ದೇವಸ್ಥಾನ ಲೋಕಾರ್ಪಣೆ



ಮಲ್ಲಮ್ಮ ನುಡಿ ಬಾಗಲಕೋಟೆ:

ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದ ಹೊರವಯದ ಲಾಯದಗುಂದಿ ಲೇಔಟನಲ್ಲಿ ನೂತನವಾಗಿ ನಿರ್ಮಾಣಗೊಂಡ ಅಯ್ಯಪ್ಪಸ್ವಾಮಿ ದೇವಸ್ಥಾನ ಹಾಗೂ ಅಯ್ಯಪ್ಪಸ್ವಾಮಿ ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮ ಡಿ.11 ಹಾಗೂ 12ರಂದು ನಡೆಯಲಿದೆ ಎಂದು ಅಯ್ಯಪ್ಪಸ್ವಾಮಿ ಸೇವಾ ಸಮಿತಿ ಅಧ್ಯಕ್ಷ ಹಾಗೂ ಜ್ಯೋತಿಷಿ ಡಾ.ಗಣೇಶ ಚಿತ್ರಗಾರ ಹೇಳಿದರು.

ಅಯ್ಯಪ್ಪಸ್ವಾಮಿ ದೇವಸ್ಥಾನದ ಆವರಣದಲ್ಲಿ

ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.11ರಂದು ಬೆಳಿಗ್ಗೆ 10ಗಂಟೆಗೆ ಹೊಳೆ ಹುಚ್ಚೇಶ್ವರಮಠದಿಂದ ನೂತನ ಅಯ್ಯಪ್ಪಸ್ವಾಮಿ ಮೂರ್ತಿಯ ಮೆರವಣಿಗೆಯು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಕುಂಭ, ಕಳಶಾರತಿಯೊಂದಿಗೆ ಹಾಗೂ ಸಕಲ ವಾದ್ಯ ಮೇಳಗಳೊಂದಿಗೆ ಸಂಚರಿಸಿ, ಮರಳಿ ಅಯ್ಯಪ್ಪಸ್ವಾಮಿ ದೇವಸ್ಥಾನಕ್ಕೆ ಮುಕ್ತಾಯಗೊಳ್ಳಲಿದೆ ಎಂದರು.

ಡಿ.12ರಂದು ಬೆಳಿಗ್ಗೆ 6ಗಂಟೆಗೆ ಅಯ್ಯಪ್ಪಸ್ವಾಮಿಯ ಮೂರ್ತಿಗೆ ಲಕ್ಷ ಬಿಲ್ವಾರ್ಚಣೆ ಹಾಗೂ ರುದ್ರಾಭಿಷೇಕ ನಡೆಯಲಿದ್ದು, ನಂತರ ನೂತನ ಅಯಪ್ಪಸ್ವಾಮಿಯ ದೇವಸ್ಥಾನ ಲೋಕಾರ್ಪಣೆ

ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಉದ್ಘಾಟನಾ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಕಮತಗಿ ಹೊಳೆ ಹುಚ್ಚೇಶ್ವರ ಮಹಾಸ್ವಾಮೀಜಿ, ಪಾವನ ಸಾನಿಧ್ಯವನ್ನು ಗುಳೇದಗುಡ್ಡ ಕಾಶಿನಾಥ ಮಹಾಸ್ವಾಮಿಜಿ, ಕಮತಗಿ ಹಿರೇಮಠದ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮೀಜಿ, ಗುಳೇದಗುಡ್ಡ ಅಭಿನವ ಕಾಡಸಿದ್ದೇಶ್ವರ

ಶಿವಾಚಾರ್ಯ ಮಹಾಸ್ವಾಮೀಜಿ, ಡಾ.ನೀಲಕಂಠ ಶಿವಾಚಾರ್ಯ ಸ್ವಾಮೀಜಿ, ಮಾತೋಶ್ರೀ ಬಸವಣ್ಣೆಮ್ಮತಾಯಿ ಬಸರಕೋಡ ವಹಿಸುವರು.

ಅಧ್ಯಕ್ಷತೆಯನ್ನು ಅಯ್ಯಪ್ಪಸ್ವಾಮಿ ಸೇವಾ ಸಮಿತಿ ಅಧ್ಯಕ್ಷ ಹಾಗೂ ಖ್ಯಾತ ಜ್ಯೋತಿಷಿ ಡಾ.ಗಣೇಶ ಚಿತ್ರಗಾರ ವಹಿಸುವರು. ಮುಖ್ಯ ಅತಿಥಿಗಳಾಗಿ ನಿವೃತ್ತ ಪ್ರಾಧ್ಯಾಪಕ ಡಾ ವಿಶ್ವನಾಥ ವಂಶಾಕೃತಮಠ ಭಾಗವಹಿಸುವರು. ಆದ್ದರಿಂದ ಕಮತಗಿ ಹಾಗೂ ಸುತ್ತಮುತ್ತಲಿನ ಸದಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಅಯ್ಯಪ್ಪಸ್ವಾಮಿ ಸೇವಾ ಸಮಿತಿಯ ಪದಾಧಿಕಾರಿಗಳಾದ ಅನಿಲ ಹುಚ್ಚೇಶ್ವರಮಠ, ಕಲ್ಲಯ್ಯ ಧಾರವಾಡ, ಬಸವರಾಜ ಡೋಣುರ, ಸಂತೋಷ ಜಾಲಿಹಾಳ, ತಿಮ್ಮಣ್ಣ ಹಗೇದಾಳ, ಗಣೇಶ ಮಾಡಬಾಳ, ಹನಮಂತ ವಡ್ಡರ ಇದ್ದರು.

## ಜಾಗತಿಕ ಆರ್ಯವೈಶ್ಯ ಸಮಿತಿ



**ಬೆಂಗಳೂರು:** ಕರ್ನಾಟಕ ಆರ್ಯ ವೈಶ್ಯ ಮಹಾಸಭಾ (ರಿ) ಕರ್ಟೈನ್ ರೈಸರ್ ಸಮಾರಂಭ ಹಾಗೂ ಲೋಗೋ ಬಿಡುಗಡೆ ಕಾರ್ಯಕ್ರಮವು ಬೆಂಗಳೂರಿನಲ್ಲಿ ನಡೆದಿದ್ದು, ಕಾರ್ಯಕ್ರಮದ ಹುಣಸೂರು ತಾಲೂಕಿನ ಮಾಜಿ ಶಾಸಕ ಹಾಗೂ ಸ್ನೇಹಜೀವಿ ಮುಖ್ಯ ಅತಿಥಿಗಳಾಗಿ ಸ್ ಎಚ್ ಪಿ ಮಂಜುನಾಥ್ ರವರು ಭಾಗವಹಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು. ಆರ್ಯ ವೈಶ್ಯ ಮಹಾಸಭಾ ಸಮಿತಿ ವತಿಯಿಂದ ಸ್ನೇಹಜೀವಿ ಎಚ್ ಪಿ ಮಂಜುನಾಥ್ ರವರನ್ನು ಸನ್ಮಾನಿಸಿ ಗೌರವಿಸಿದರು.

## ಉಚಿತ ಆರೋಗ್ಯ ತಪಾಸಣೆ ಶಿಬಿರ



**ಹುಣಸೂರು:** ತಾಲೂಕಿನ ಯುತ್ ಕಾಂಗ್ರೆಸ್ ಗ್ರಾಮಾಂತರ ಬ್ಲಾಕ್ ಅಧ್ಯಕ್ಷರಾದ ಫೈಸಲ್ ರವರ 32ನೆಯ ಹುಟ್ಟು ಹಬ್ಬದ ಅಂಗವಾಗಿ ಆರೋಗ್ಯ ಶಿಬಿರ ಉಚಿತ ತಪಾಸಣೆಯನ್ನು ನಗರದ ಮುಸ್ಲಿಂ ಬ್ಲಾಕ್ 14ನೇ ವಾರ್ಡಿನ ರಾಯಲ್ ಸ್ಕೂಲ್ ಹಮ್ಮಿಕೊಂಡಿದ್ದ ಶಿಬಿರದಲ್ಲಿ ನಾರಾಯಣ ಆಸ್ಪತ್ರೆಯ ವೈದ್ಯರು ಹಾಗ ಫಾರೂಕ್ ಆಸ್ಪತ್ರೆಯ ವೈದ್ಯರು ದೇಹ ಕಣ್ಣು ದಂತ ತಪಾಸಣೆ ಕೂಡ ನಡೆಯಿತು ಉಚಿತ ಕನ್ನಡಕ ವಿತರಿಸಲಾಯಿತು. ಈ ಸಂದರ್ಭದಲ್ಲಿ ಮಾಜಿ ಶಾಸಕ ಎಚ್ ಪಿ ಮಂಜುನಾಥ್ ನಗರ ಯೋಜನ ಪ್ರಾಧಿಕಾರದ ಅಧ್ಯಕ್ಷರಾದ ಎಚ್ ಪಿ ಅಮರನಾಥ್ ಕಾಸಿಗ ಶಾಲೆಯ ತಾಲೂಕಿನ ಕಾರ್ಯದರ್ಶಿಯಾದ ಎಚ್ ಅಮರ್ ನಾಥ್ ಜಾಮಿಯಾ ಮಸೀದಿಯ ಸದಸ್ಯರಾದ ಬಶೀರ್ ಅಹ್ಮದ್ ಅಲ್ತಾಫ್ ಅಹ್ಮದ್ ಮಾಜಿನಗರ ಸಭೆ ಸದಸ್ಯರಾದ ಕೃಷ್ಣರಾಜಗುಪ್ತ ಹಾಗೂ ತಾಲೂಕಿನ ವಿವಿಧ ಪಕ್ಷಗಳ ಚುನಾಯಿತ ಪ್ರತಿನಿಧಿಗಳು ಸಂಘ ಸಂಸ್ಥೆಗಳ ಮುಖ್ಯಸ್ಥರು. ಹಾಗೂ ಕಾಂಗ್ರೆಸ್ ಪಕ್ಷದ ಯುವ ಕಾರ್ಯಕರ್ತರು ಮುಖಂಡರು ಹಾಜರಿದ್ದರು.

## ವಿದ್ಯುತ್ ವ್ಯತ್ಯಯ ಇಂದು

**ತಾಳಿಕೋಟಿ:** ಕಾರ್ಯ ಮತ್ತು ಪಾಲನೆ ಉಪವಿಭಾಗ ವ್ಯಾಪ್ತಿಯಲ್ಲಿನ "110/11ಕೆ.ವಿ. ತಾಳಿಕೋಟಿ ವಿದ್ಯುತ್ ಉಪ ಕೇಂದ್ರದಲ್ಲಿ ಟರ್ಮಿನಲ್ ಬೇ" ನಿರ್ಮಿಸುವ ಕಾಮಗಾರಿ ಮಾಡಬೇಕಾಗಿರುವುದರಿಂದ ಇಂದು(10.12.2025) ರ ಸಮಯ ಬೆಳಿಗ್ಗೆ 10:00 ಘಂಟೆಯಿಂದ ಸಂಜೆ 4:00 ಘಂಟೆಯವರೆಗೆ ತಾಳಿಕೋಟಿ ಪಟ್ಟಣ, ಮಿಣಜಗಿ, ಶಿವಪೂರ, ನಾಗೂರ, ಮೂಕಿಹಾಳ ಕುಡಿಯುವ ನೀರಿನ ಘಟಕ, ಬಳಗಾನೂರ, ತುಂಬಿಗಿ, ತಮದಡ್ಡಿ, ಭಂಟನೂರ, ಬಿಳೆಭಾವಿ, ಬಿ.ಸಾಲವಾಡಗಿ, ಮಟಕ ದೇವನಹಳ್ಳಿ, ಕಾರಗನೂರ ಬೇಲೂರ, ಶಳ್ಳಗಿ,ನಾವದಗಿ, ಲಕ್ಕುಂಡಿ ಗ್ರಾಮ ಮತ್ತು ಮಾಳೂರು ಕುಡಿಯುವ ನೀರಿನ ಘಟಕಕ್ಕೆ ವಿದ್ಯುತ್ ಅಡಚಣೆ ಯಾಗಲಿದೆ. ಕಾರಣ ತಾಳಿಕೋಟಿ ಪಟ್ಟಣ ಹಾಗೂ ತಾಲೂಕಿನ ಸುತ್ತಮುತ್ತಲಿನ ಗ್ರಾಮಗಳ ಎಲ್ಲಾ ಗ್ರಾಹಕರು ಸಹಕರಿಸಬೇಕೆಂದು ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ವಿಜಯಕುಮಾರ ಹೆಚ್.ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಕಾರ್ಯಕ್ರಮ



**ಸಿಂಧನೂರು:** ಯಾವುದೇ ಮೂಢನಂಬಿಕೆ ಬಿಡಬೇಕು ರಕ್ತ ಹೀನತೆ ಹೋಗಲಾಡಿಸಲು ಐರನ್ ಫಾಲಿಕ್ ಅಸ್ಯೆಡ್ ಕ್ಯಾಲ್ಸಿಯಂ ಮಾತ್ರೆ ತೆಗೆದುಕೊಂಡು ಸರಿಯಾಗಿ ಆಹಾರ ಪದ್ಧತಿ ಅನಿಸಿರಬೇಕು ಎಂದು ಆಯುಷ್ ವೈದ್ಯಾಧಿಕಾರಿ ಡಾ. ಶ್ವೇತಾಂಬಿರಿ ಹೇಳಿದರು

ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ರಾಗಲಪರ್ವಿ ಇವರ ಸಂಯುಕ್ತ ಆಶ್ರಯದಲ್ಲಿ ಇಂದು ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಸದರಿ ಕಾರ್ಯಕ್ರಮವನ್ನು ಮಾನ್ಯ ಆಯುಷ್ ವೈದ್ಯಾಧಿಕಾರಿಗಳು ಡಾ.ಶ್ವೇತಾಂಬರಿ ಇವರು ಗರ್ಭಿಣಿ ತಾಯಂದಿರನ್ನು ಹಾಗೂ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದರು.

ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಗಂಡಾಂತರ ಗರ್ಭಿಣಿಯರ ಆರೋಗ್ಯ ತಪಾಷಣೆ ಮಾಡಲಾಯಿತು, ಜೊತೆಗೆ 12 ವಾರದ ಒಳಗೆ ನೋಂದಣಿ ಮಾಡಿಸಬೇಕು ಯಾವುದೇ ಮೂಢನಂಬಿಕೆ ಬಿಡಬೇಕು,ರಕ್ತ ಹೀನತೆ ಹೋಗಲಾಡಿಸಲು ಐರನ್ ಫಾಲಿಕ್ ಅಸ್ಯೆಡ್ ಕಾಲ್ಸಿಯಂ ಮಾತ್ರೆ ತೆಗೆದುಕೊಂಡು, ಸರಿಯಾಗಿ ಆಹಾರದ ಪದ್ಧತಿ ಇರಬೇಕು ಪೌಷ್ಟಿಕ ಆಹಾರ ಪದ್ಧತಿ ಬಗ್ಗೆ ವೈಯಕ್ತಿಕ ಸ್ವಚ್ಛತೆಯ ಕುರಿತು ಚಳಿಗಾಲದಲ್ಲಿ ತಾಯಿ ಮಗುವಿನ ರಕ್ಷಣೆಯ ಕುರಿತು ಮಾಹಿತಿ ನೀಡಲಾಯಿತು.

ಸಾಂಕ್ರಾಮಿಕ ರೋಗಗಳ ಕುರಿತು ಮುಂಜಾಗ್ರತೆಯನ್ನು ವಹಿಸಬೇಕು ಎಂದು ಆರೋಗ್ಯ ಶಿಕ್ಷಣ ನೀಡಲಾಯಿತು ಮುಂಬರುವ ಡಿಸೆಂಬರ್ 21ರಿಂದ 24ರವರೆಗೆ ನಡೆಯುವ ಪಲ್ಸ್ ಪೋಲಿಯೊ ಕಾರ್ಯಕ್ರಮ ದಲ್ಲಿ ಯಾವುದೇ 5 ವರ್ಷದ ಒಳಗಿನ ಮಕ್ಕಳು ಲಸಿಕೆಯಿಂದ ವಂಚಿತರಗದಂತೆ ಎಲ್ಲಾ ಮಕ್ಕಳಿಗೂ ಲಸಿಕೆಯ ಎರಡು ಹನಿ ಹಾಕಿಸಿಕೊಳ್ಳುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ಡಾ.ಗೀತಾ ಹಿರೇಮಠ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು, ಪಕೀರಚಂದ್ HIO, ಗೀತಾ ನರ್ಸಿಂಗ್ ಆಫೀಸರ್, ಶಂಬು LTO, ರಾಜಕುಮಾರ CHO, ಜಯದುರ್ಗ, CHO. ಗಂಗಮ್ಮPHCO,ಅಂಬಮ್ಮ PHCO, ನಳಿನಿ. PHCO. ಶರಣಮ್ಮ HIO, ಹಾಗೂ ಡಿ ದರ್ಜೆ ನೌಕರರು,ಆಶಾ ಕಾರ್ಯಕರ್ತೆಯರು,ಗರ್ಭಿಣಿಯರು ಸಾರ್ವಜನಿಕರು ಉಪಸ್ಥಿತರಿದ್ದರು.

# ವಾಲಿಬಾಲ್: ಮಹಿಳಾ ತಂಡ ಚಾಂಪಿಯನ್

### ಬಾಗಲಕೋಟೆ ವಿವಿ ಅಂತರ್ ಕಾಲೇಜು ಮಹಿಳಾ ವಾಲಿಬಾಲ್ ಪಂದ್ಯ, ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಚಾಂಪಿಯನ್

• ಮಲ್ಲಮ್ಮ ನುಡಿ ಬಾಗಲಕೋಟೆ

ವಿದ್ಯಾರ್ಥಿಗಳು ಕ್ರೀಡಾ ಕ್ಷೇತ್ರದಲ್ಲಿ ಸತತ ಪರಿಶ್ರಮ ಮತ್ತು ಉತ್ತಮ ತರಬೇತಿ ಪಡೆಯುವದರಿಂದ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂಬುದಕ್ಕೆ ನಮ್ಮ ಕಾಲೇಜಿನ ಮಹಿಳಾ ವಿದ್ಯಾರ್ಥಿಗಳು ಸಾಕ್ಷಿಯಾಗಿದ್ದಾರೆ ಎಂದು ಪ್ರಾಚಾರ್ಯರಾದ ಡಾ.ಅರುಣಕುಮಾರ ಗಾಳಿ ಅವರು ಹೇಳಿದರು.

ಅವರು ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕ್ರೀಡಾ ವಿಭಾಗದಲ್ಲಿ ಇತ್ತೀಚಿಗೆ ಇಲಕಲ್ ಸ.ಪ್ರ.ದ ಕಾಲೇಜಿನಲ್ಲಿ ನಡೆದ ಬಾಗಲಕೋಟೆ ವಿವಿ ಅಂತರ ಕಾಲೇಜು ಮಹಿಳಾ ವಾಲಿಬಾಲ್ ಪಂದ್ಯಾವಳಿಯ ಸ್ಪರ್ಧೆ ಹಾಗೂ ವಿಶ್ವವಿದ್ಯಾಲಯ ತಂಡದ ಆಯ್ಕೆಯಲ್ಲಿ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಮಹಿಳಾ ವಾಲಿಬಾಲ್ ತಂಡ ಚಾಂಪಿಯನ್ ಆದ ಅಂಗವಾಗಿ ವಾಲಿಬಾಲ್ ಕ್ರೀಡಾ ತಂಡದ ಮಹಿಳಾ ಕ್ರೀಡಾಪಟುಗಳಿಗೆ ಅಭಿನಂದನೆ ಸಲ್ಲಿಸಿ ಮಾತನಾಡಿದರು. ನಮ್ಮ ಕಾಲೇಜಿನ ನಾಲ್ಕು ಜನ ಮಹಿಳಾ ವಿದ್ಯಾರ್ಥಿನಿಯರು ಜಮಖಂಡಿಯ ಬಾಗಲಕೋಟೆ ವಿಶ್ವವಿದ್ಯಾಲಯದ 2025-26 ಸಾಲಿನ ವಾಲಿಬಾಲ್ ಕ್ರೀಡಾ ವಿಭಾಗದಲ್ಲಿ ಬ್ಲ್ಯೂ ಆಗಿ ಆಯ್ಕೆಯಾಗಿರುವುದು ಎಲ್ಲರಿಗೂ ಸಂತಸ ತಂದಿದೆ ಎಂದರು.



ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಅರುಣಕುಮಾರ ಗಾಳಿ, ಕ್ರೀಡಾ ನಿರ್ದೇಶಕರಾದ ನೀಲಪ್ಪ ಕುರಿ ಅವರೊಂದಿಗೆ ಮಹಿಳಾ ವಾಲಿಬಾಲ್ ಚಾಂಪಿಯನ್ ತಂಡದವರು.

ಕ್ರೀಡಾ ವಿಭಾಗದ ನಿರ್ದೇಶಕರಾದ ನೀಲಪ್ಪ ಕುರಿ ಅವರು ಮಾತನಾಡಿ, ಪದವಿ ಹಂತದಲ್ಲಿ ಕಲಿಯುವ ವಿದ್ಯಾರ್ಥಿಗಳು ತಮ್ಮ ಕ್ರೀಡಾ ಕ್ಷೇತ್ರದಲ್ಲಿ ಸ್ವ ಆಸಕ್ತಿಯನ್ನು ಬೆಳೆಸಿಕೊಂಡರೆ ಸಮಾಜದಲ್ಲಿ ಸಾಧಕರಾಗಲು ಸಾಧ್ಯವಿದೆ ಎಂಬುದಕ್ಕೆ ನಮ್ಮ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕ್ರೀಡಾಪಟುಗಳು ಸಾಕ್ಷಿಯಾಗಿದ್ದಾರೆ ಎಂದರು. ನವನಗರ ಸ.ಪ್ರ.ದ.ಕಾಲೇಜಿನ ಗಾಯತ್ರಿ ಲಮಾಣಿ, ರೇಣುಕಾ ಮಡಿವಾಳರ, ಅರ್ಪಿತಾ ಪೂಜಾರ, ತಸ್ಲಿಮ್ ನಿಂಬ್ಯಾಳ, ರೇಣುಕಾ ಚಿಮ್ಮಲಗಿ, ಬೋರಮ್ಮ ದಡ್ಡಿ, ಶಶಿಕಲಾ ಗಂಗೂರ, ಕಾವೇರಿ ಚಿಕ್ಕಮಠ, ನಿಶಾ ಚವಾಣ, ಲಕ್ಷ್ಮೀ ಯರಗಟ್ಟಿ ಈ ವಿದ್ಯಾರ್ಥಿನಿಯರ ಮಹಿಳಾ ತಂಡವು ಬಾಗಲಕೋಟೆ ವಿಶ್ವವಿದ್ಯಾಲಯದ ವಾಲಿಬಾಲ್ ಚಾಂಪಿಯನ್ ಸ್ಥಾನವನ್ನು ಪಡೆದುಕೊಂಡಿದ್ದಾರೆ.

ಬಾಗಲಕೋಟೆ ವಿಶ್ವದ್ಯಾಲಯದ ಮಹಿಳಾ ವಾಲಿಬಾಲ್ ಕ್ರೀಡಾ ಕ್ಷೇತ್ರದಲ್ಲಿ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿಯರಾದ ರೇಣುಕಾ ಮಡಿವಾಳರ, ಗಾಯತ್ರಿ ಲಮಾಣಿ, ಅರ್ಪಿತಾ ಪೂಜಾರ, ಕಾವೇರಿ ಚಿಕ್ಕಮಠ ಈ ನಾಲ್ಕು ವಿದ್ಯಾರ್ಥಿನಿಯರು ಬ್ಲ್ಯೂ ಆಗಿ ಆಯ್ಕೆಯಾಗಿದ್ದಾರೆ.

ವಾಲಿಬಾಲ್ ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಎಲ್ಲಾ ಕ್ರೀಡಾಪಟುಗಳಿಗೆ ಪ್ರಾಂಶುಪಾಲರು, ಬೋಧಕರು, ಬೋದಕೇತರ ಸಿಬ್ಬಂದಿ ವರ್ಗದವರು ಕಾಲೇಜಿನ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

## 31ನೇ ಬಾರಿ ರಕ್ತದಾನ: ಮಾನವೀಯ ಸೇವೆ



• ಮಲ್ಲಮ್ಮ ನುಡಿ ರಾಯಚೂರು

ಮಡ್ಡಿಪೇಟೆನಿವಾಸಿ,ಲಿಂಗಸಗೂರು ತಾಲ್ಲೂಕಿನ ಪಿಕಳಿಹಾಳ ಗ್ರಾಮದ ಗಂಗಾಧರ ಸ್ವಾಮಿ ಗಣಾಚಾರಿಯವರು ಕಳೆದ ವರ್ಷಗಳಿಂದ ನಿರಂತರವಾಗಿ ರಕ್ತದಾನ ಮಾಡುವ ಮೂಲಕ ಸಮಾಜ ಸೇವೆಯಲ್ಲಿ ಎಚ್ಚರಿಕೆಯ ಪಾತ್ರ ವಹಿಸುತ್ತಿದ್ದಾರೆ. ಅವರು ಯಾವಾಗಲೂ ತುರ್ತು ಪರಿಸ್ಥಿತಿಯಲ್ಲಿ ಯಾರಾದರೂ ಜೀವಕ್ಕೆ ಅಪಾಯದ ಸಂದರ್ಭದಲ್ಲಿ ನೆರವಾಗುತ್ತಾರೆ.

ಗಂಗಾಧರ ಸ್ವಾಮಿಯವರು ತಮ್ಮ ನೆಮ್ಮದಿಯ ವಿಚಾರವಾಗಿ ಹೇಳಿದ್ದು, "ಮತ್ತೊಬ್ಬರಿಗೆ ರಕ್ತದಾನ ಮಾಡಿದರೆ ಮೂರು ಜೀವಗಳನ್ನು ಉಳಿಸಿದ ಸಂತೃಪ್ತಿ ನಮಗೆ ದೊರೆಯುತ್ತದೆ" ಎಂದು ತಿಳಿಸಿದ್ದಾರೆ.

ಇಂದು ರಿಮ್ಸ್ ಆಸ್ಪತ್ರೆಗೆ ತಲುಪಿದ ಸಂದರ್ಭದಲ್ಲಿ, ಗರ್ಭಿಣಿ ಮಹಿಳೆ ತೀವ್ರ ರಕ್ತಾಭಾವಕ್ಕೆ ಒಳಗಾಗಿದ್ದ ಕಾರಣ ವೈದ್ಯರು ತಕ್ಷಣ ರಕ್ತದ ವ್ಯವಸ್ಥೆ ಮಾಡಬೇಕೆಂದು ಸೂಚಿಸಿದರು. ಈ ತುರ್ತು ಸಂದರ್ಭದಲ್ಲಿ ಗಂಗಾಧರ ಸ್ವಾಮಿಯವರು ತಕ್ಷಣವೇ ರಕ್ತದಾನ ಮಾಡಿದರು. ಈ ಯುವಕನು ಇತ್ತೀಚಿನವರೆಗೆ 31 ಬಾರಿ ರಕ್ತದಾನ ಮಾಡಿ, ಸಮಾಜಕ್ಕೆ ಜೀವನದ ಹಾನಿಗಿಂತ ಹೆಚ್ಚು ಮೌಲ್ಯ ನೀಡಿರುವುದು ಎಲ್ಲರಿಗೂ ಮಾದರಿಯಾಗಿದೆ.ಸಾಮಾಜಿಕ ಸೇವೆಯಲ್ಲಿ ಪರಾಕಾಷ್ಠೆ ತಲುಪಿದ ಯುವಕರಿಗೆ ಹೊಸದಾಗಿ ಸ್ಫೂರ್ತಿ ನೀಡುವ ಉದಾಹರಣೆ ಪಿಕಳಿಹಾಳದ ಗಂಗಾಧರ ಸ್ವಾಮಿ.

## ಪರೀಕ್ಷೆ ಎದುರಿಸಲು ಮಾನಸಿಕವಾಗಿ ಸದೃಢರಾಗಿ

• ಮಲ್ಲಮ್ಮ ನುಡಿ ಬಳ್ಳಾರಿ

ಪರೀಕ್ಷೆ ಎದುರಿಸಲು ಭಯಭೀತರಾಗಬಾರದು. ವಿದ್ಯಾರ್ಥಿಗಳು ಮಾನಸಿಕವಾಗಿ ಸದೃಢರಾಗಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ನಗರದ ಸಂತ ಜೋಸೆಫ್ ಬಾಲಕಿಯರ ಪ್ರೌಢಶಾಲೆಗೆ ಸೋಮವಾರ ಭೇಟಿ ನೀಡಿ ಕಲಿಕೆಯಲ್ಲಿನ ಸಮಸ್ಯೆ ಮತ್ತು ಪರೀಕ್ಷೆ ಸುಲಭವಾಗಿ ಎದುರಿಸುವ ಕುರಿತು ಸೂಕ್ತ ಮಾರ್ಗದರ್ಶನದೊಂದಿಗೆ ಮಕ್ಕಳಿಗೆ ಪ್ರೇರಣೆದಾಯಕ ಮಾತುಗಳನ್ನಾಡಿದರು.

ಪರೀಕ್ಷೆಗಳು ನಿಮ್ಮ ಸಾಮರ್ಥ್ಯ ಪರೀಕ್ಷಿಸುವುದಿಲ್ಲ; ಬದಲಾಗಿ ನಿಮ್ಮ ಸಂಕಲ್ಪ ಮತ್ತು ಶಿಸ್ತನ್ನು ಪರೀಕ್ಷಿಸುತ್ತವೆ. ಹಾಗಾಗಿ ಆತ್ಮವಿಶ್ವಾಸ ಮತ್ತು ಸಮನ್ವಿತ ಪರಿಶ್ರಮ ಅಗತ್ಯವಾಗಿದೆ ಎಂದು ತಿಳಿಸಿದರು.

ಒತ್ತಡ ಸಾಮಾನ್ಯ. ಆತಂಕಕ್ಕೆ ಮನಸ್ಸನ್ನು ಕೊಡಬಾರದು. ಕಠಿಣವಾಗಿ ಪರಿಶ್ರಮಿಸಿದರೆ ಫಲಗಳು ನಿಮಗೆ ಖಂಡಿತ ಸಿಗುತ್ತವೆ. ಇದು ನಿಮ್ಮ ಜೀವನದ ಕೊನೆಯ ಪರೀಕ್ಷೆಯಲ್ಲ. ಎದರಬಾರದು, ಜಾಗ್ರತಿಯಿಂದ ಓದಿ, ನಿಮ್ಮ ಸಾಮರ್ಥ್ಯ ನಂಬಬೇಕು ಎಂದರು.

ಪ್ರತಿದಿನ ವಿಷಯಗಳ ಪುನರಾವರ್ತನೆ ಮಾಡಿ, ಹಿಂದಿನ ಪ್ರಶ್ನೆಪತ್ರಿಕೆಗಳನ್ನು ನೋಡಿ, ಮುಖ್ಯ ವಿಷಯಗಳನ್ನು ಗುರುತಿಸುವ ಮೂಲಕ ಪ್ರಗತಿ ಹೊಂದಬೇಕು. ಇದು ಯಶಸ್ಸಿನ ಸೂತ್ರ ಎಂದು



ತಿಳಿಸಿದರು. ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ವಿ.ಇಂದ್ರಾಣಿ ಅವರು ಮಾತನಾಡಿ, ಪರಿಶ್ರಮದಿಂದ ಅಭ್ಯಸಿಸಿದರೆ ಯಶಸ್ಸು ನಿಮ್ಮದು. ಪರೀಕ್ಷೆಗಳು ಕೇವಲ ಒಂದು ಹಂತ ಆದರೆ ನೀವು ಕಟ್ಟುತ್ತಿರುವ ಭವಿಷ್ಯ ಅದಕ್ಕಿಂತ ಬಹಳ ದೊಡ್ಡದು ಎಂದು ಕಿವಿಮಾತು ಹೇಳಿದರು.

ಪರೀಕ್ಷೆಗೆ ಸಿದ್ದತೆ ಮಾಡಿಕೊಳ್ಳುವ, ಪ್ರಶ್ನೆಗಳಿಗೆ ಸುಲಲಿತವಾಗಿ ಉತ್ತರಿಸಿ ಹೆಚ್ಚಿನ ಅಂಕಗಳನ್ನು ಯಾವ ರೀತಿ ಪಡೆಯಬೇಕು ಎನ್ನುವ ಕುರಿತು ಸಂಪೂರ್ಣ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ದೇವದಾನಮ್ಮ, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್, ಜಿಲ್ಲಾ ಏಡ್ಸ್ ಮೇಲ್ವಿಚಾರಕ ಗಿರೀಶ್, ಐಸಿಟಿಸಿ ಆಪ್ತಸಮಾಲೋಚಕ ಜಗದೀಶ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

## ಕ್ರೀಡೆಯಿಂದ ದೈಹಿಕ, ಮಾನಸಿಕ ಸಾಮರ್ಥ್ಯ ಹೆಚ್ಚಳ: ಅಶೋಕ ಮೂಲಗೆ

• ಮಲ್ಲಮ್ಮ ನುಡಿ ಕಲಬುರಗಿ

ಗ್ರಾಮೀಣ ಕ್ರೀಡಾ ವಸತಿ ಶಾಲೆ ಶರಣಸಿರಸಗಿ ವತಿಯಿಂದ, ಪೂಜ್ಯ ಶ್ರೀ ಡಾ. ಡಿ ವಿರೇಂದ್ರ ಹೆಗಡೆ ಧರ್ಮಸ್ಥಳ ಅವರ ಜನ್ಮದಿನದ ಅಂಗವಾಗಿ ಕಲಬುರಗಿ ತಾಲೂಕ ಮಟ್ಟದ ಅಥ್ಲೆಟಿಕ್ ಕ್ರೀಡಾ ಕೂಟ-2025 ಜರುಗಿತು.

ಕ್ರೀಡಾಕೂಟವನ್ನು ಹೈಕೋರ್ಟ ನ್ಯಾಯವಾದಿಗಳಾದ ಅಶೋಕ ಮೂಲಗೆ ಉದ್ಘಾಟಿಸಿ ಮಾನನಾಡಿ ಇಂದಿನ ಕಾಲದಲ್ಲಿ ಮಕ್ಕಳು ಮೊಬೈಲ ಮತ್ತು ಟಿವಿ ನೋಡಿ ದೈಹಿಕ ಸಾಮರ್ಥ್ಯ ಕಳೆದುಕೊಳ್ಳುತ್ತಿದ್ದಾರೆ. ಅದನ್ನು ಬಿಟ್ಟು ಕ್ರೀಡೆಯತ್ತ ಗಮನ ಹರಿಸಬೇಕು. ಇದರಿಂದ ದೈಹಿಕ ಮತ್ತು ಮಾನಸಿಕ ಸಾಮರ್ಥ್ಯ ಹೆಚ್ಚುತ್ತದೆ ಎಂದು ಹೇಳಿದರು.

ಅಧ್ಯಕ್ಷತೆಯನ್ನು ವಹಿಸಿದ ಗ್ರಾಮೀಣ ಕ್ರೀಡಾ ವಸತಿ ಶಾಲೆಯ ಅಧ್ಯಕ್ಷರಾದ ಸಿ.ಎನ್.ಬಾಬಳಗಾಂವರವರು



ಮಾತನಾಡಿ ಇಂತಹ ಕ್ರೀಡೆಯನ್ನು ಆಯೋಜಿನೆ ಮಾಡುವುದೇ ಮಕ್ಕಳ ಸಾಮರ್ಥ್ಯ ಹೆಚ್ಚಿಸಲು ಸಾದ್ಯವಾಗುತ್ತದೆ. ಇದು ಸಂತೋಷದ ವಿಷಯ ಎಂದು ಹೇಳಿದರು. ಶಾಲಾ ಸುಧಾರಣ ಸಮಿತಿ ಗೌರವ ಅಧ್ಯಕ್ಷ ವಿಠ್ಠಲ ಬಿರಾದಾರ ಅವರು ಕ್ರೀಡಾಜ್ಯೋತಿ ಸ್ವೀಕರಿಸಿ ಮಕ್ಕಳಿಗೆ ಶುಭಹಾರೈಸಿದರು.

ಮುಖ್ಯ ಅಥಿತಿಗಳಾಗಿ ಆಗಮಿಸಿದಂತ ಶ್ರೀ ಧರ್ಮಸ್ಥಳ ಗ್ರಾ. ಅ. ಯೋ ಕಲಬುರಗಿ ನಿರ್ದೇಶಕ ಗಣಪತಿ ಮಾಳಾಜಿ ಇವರು ಮಾತನಾಡುತ್ತಾ ಮಕ್ಕಳು ಮೊದಲು ಸ್ಪರ್ದೆಯಲ್ಲಿ ಭಾಗವಹಿಸಿವುದೆ ಮೊದಲ ಗೆಲವು. ಸೋಲು ಗೆಲುವಿಗಿಂತ ಭಾಗವಹಿಸಿ ಅನುಭವ ಪಡೆಯುವದೇ ದೊಡ್ಡದು ಎಂದು ಹೇಳಿದರು. ಬಹುಮಾನವನ್ನು ವಿತರಿಸಿಸಂತಹ ಶಿವಾಂದ ಪದ್ಮಾ ಯವರು ಉನ್ನತ ಶಿಕ್ಷಣ ಪಡೆಯಲು ಕ್ರೀಡೆಗಳು ಕ್ರೀಡೆಗಳಂತಹ ಸಹಕಾರಿಯಾಗುತ್ತವೆ ಎಂದು ಹೇಳಿದರು. ಈ ಕ್ರೀಡಾಕೂಟದಲ್ಲಿ ಒಟ್ಟು 13 ಶಾಲೆಯ ಮಕ್ಕಳು ಭಾಗವಹಿಸಿದರು. ಹುಸೇನ ಪಬ್ಲಿಕ ಶಾಲೆಯ ಮಕ್ಕಳು ಅಧಿಕ ಬಹುಮಾನಗಳನ್ನು ಪಡೆದರು.

ಈ ಕ್ರೀಡಾಕೂಟದಲ್ಲಿ ಬಿ.ಎಸ್ ಪಾಟೀಲ, ಎಸ್. ಎಸ್. ಪಾಟೀಲ, ಉಮಾರಾವ ಮಾನಕರ, ಸಿ. ಎ ಪಾಟೀಲ, ಧನರಾಜ ಭಾಸಗಿ ನಾಗಣ ಪಾಟೀಲ ವೇದಿಕೆಯಲ್ಲಿ ಉಪಸ್ತಿತರಿದ್ದರು. ಶಾಲೆಯ ಮುಖ್ಯಗುರುಗಳು ಎಲ್ಲರನ್ನು ಸ್ವಾಗತಿಸಿದರು. ಶ್ರೀಮತಿ ವೈಷ್ಣವಿ ಶಿಕ್ಷಕಿ ವಂದಿಸಿದರು.

## ಸಹ ವಿದ್ಯಾರ್ಥಿಗಳನ್ನು ಕುಟುಂಬದ ಸದಸ್ಯರಂತೆ ಕಾಣಿ





• ಮಲ್ಲಮ್ಮ ನುಡಿ ಬೀದರ

ರ್‍ಯಾಗಿಂಗ್ ಒಂದು ಪಿಡುಗಾಗಿದ್ದು ಉನ್ನತ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಂದಲೆ ಹೆಚ್ಚು ನಡೆಯುವ ಅಪವಾದಗಳಿವೆ, ರ್‍ಯಾಗಿಂಗ್‌ಗೆ ಕಿರಿಯ ವಿದ್ಯಾರ್ಥಿಗಳು ಬಲಿಯಾಗುತ್ತಿರುವುದು ಬೇಸರದ ಸಂಗತಿ ಎಂದು ನ್ಯಾಯವಾದಿ ಗುರುನಾಥ ರಾಜಗೀರಾ ಹೇಳಿದರು.

ನಗರದ ನೌಬಾದನ ಎಸ್.ಬಿ ಪಾಟೀಲ ದಂತವೈದ್ಯಕೀಯ ಮಹಾವಿದ್ಯಾಲಯದ ಅನುಭವ ಮಂಟಪದ ಸಭಾಂಗಣದಲ್ಲಿ ರ್‍ಯಾಗಿಂಗ್ ಕುರಿತು ಜಾಗೃತಿ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮದಲ್ಲಿ ಮುಖ್ಯವಕ್ತಾರರಾಗಿ ಅವರು ಮಾತನಾಡಿದರು. ಹಿರಿಯ ವಿದ್ಯಾರ್ಥಿಗಳು ತಮ್ಮ ಸಹಪಾಠಿಗಳು ಕಾಲೇಜಿಗೆ ಅಥವಾ ಹಾಸ್ಟೆಲ್‌ಗೆ ಹೊಸದಾಗಿ ಸೇರ್ಪಡೆಯಾದಾಗ ತಮ್ಮ ಕುಟುಂಬದ ಸದಸ್ಯರಂತೆ ಕಾಣಬೇಕು ಎಂದು ಕೀವಿಮಾತು ಹೇಳಿದರು. ವಿದ್ಯಾಭ್ಯಾಸದ ಜೊತೆಗೆನೆ ವಿದ್ಯಾರ್ಥಿಗಳು ದೇಶ, ಸಂಸ್ಕೃತಿ ಹಾಗೂ ತಮ್ಮ ವೃತ್ತಿ ಬಗ್ಗೆ ಗೌರವ ಪ್ರೀತಿ ಬೆಳೆಸಿಕೊಂಡಾಗ ರ್‍ಯಾಗಿಂಗ್‌ನಂತಹ ಕ್ರೌರ್ಯವನ್ನು ತಡೆಗಟ್ಟಬಹುದು ರ್‍ಯಾಗಿಂಗ್ ತಡೆಯುವಲ್ಲಿ ಶಿಕ್ಷಣ ಸಂಸ್ಥೆಗಳ ಜವಾಬ್ದಾರಿಯೂ ಮಹತ್ವದ್ದಾಗಿದೆ ರ್‍ಯಾಗಿಂಗ್ ಮಾಡಿದರೆ ಕಾನೂನು ಕ್ರಮ ಕೈಗೊಳ್ಳಲು ಅವಕಾಶವಿದೆ ಎಂದರು.

ಡೆಂಟಲ್ ಕೌನ್ಸಿಲ್ ಆಫ್ ಇಂಡಿಯಾ ಸದಸ್ಯರಾದ ಡಾ.ಶಿವಶರಣ್ ಶೆಟ್ಟಿ ಮಾತನಾಡಿ ವಿದ್ಯಾರ್ಥಿಗಳು ಜೀವನದಲ್ಲಿ ಗುರಿ ಇಟ್ಟುಕೊಂಡು ಅದನ್ನು ತಲುಪಲು ಶ್ರಮಿಸಬೇಕು, ಉತ್ತಮ ಪ್ರಜೆಗಳಾಗಿ ಸರ್ಕಾರದ ಉನ್ನತ ಹುದ್ದೆಗಳನ್ನು ಅಲಂಕರಿಸಿ ಮತ್ತು ಸಮಾಜದಲ್ಲಿ ಶ್ರೇಷ್ಠ ವ್ಯಕ್ತಿತ್ವದೊಂದಿಗೆ ಬಾಳಿ ಬದುಕಬೇಕು, ಕಾಲೇಜಿನಲ್ಲಿ ಅಥವಾ ವಿದ್ಯಾರ್ಥಿನಿಲಯದಲ್ಲಿ ಎಲ್ಲ ರೀತಿಯವರೂ ಇರುತ್ತಾರೆ ಆದರೆ ತಪ್ಪನ್ನು ತಿದ್ದುವ ಒಳ್ಳೆಯ ಸ್ನೇಹಿತರನ್ನು ಆಯ್ಕೆ ಮಾಡಿಕೊಂಡು ಉತ್ತಮ ದಾರಿಯಲ್ಲಿ ಸಾಗಬೇಕು ಗುರಿ ತಲುಪಲು ಎದುರಾಗುವ ಸಮಸ್ಯೆಗಳನ್ನು ಸಮರ್ಥವಾಗಿ ಎದುರಿಸಬೇಕು ಎಂದು ಹೇಳಿದರು.

ನೂತನ ಠಾಣೆಯ ಇನ್ಸಪೆಕ್ಟರ್ ವಿಜಯಕುಮಾರ ಬಾವಗಿ ಮಾತನಾಡಿ ದೇಶದಲ್ಲಿ ಯುವಸಮೂಹ ವ್ಯಾಪಕವಾಗಿ ರ್‍ಯಾಗಿಂಗ್ ಸಮಸ್ಯೆ ಎದುರಿಸುತ್ತಿತ್ತು ರ್‍ಯಾಗಿಂಗ್ ಕುರಿತು ಕಠಿಣ ಕಾನೂನುಗಳಿರುವುದರಿಂದ ಮತ್ತು ಎಲ್ಲರಲ್ಲಿ ಜಾಗೃತಿ ಮೂಡಿರುವುದರಿಂದ ರ್‍ಯಾಗಿಂಗ್ ಪ್ರಕರಣಗಳು ಹೆಚ್ಚು ಕಾಣಿಸುತಿಲ್ಲ ಆದರು ಈ ತರಹದ ಜಾಗೃತಿ ಕಾರ್ಯಕ್ರಮ ಹಮ್ಮಕೊಂಡಿರುವುದು ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಕಾಲೇಜಿನ ಅಧ್ಯಕ್ಷರಾದ ಸೂರ್ಯಕಾಂತ್ ಪಾಟೀಲ್, ಪ್ರಾಂಶುಪಾಲರಾದ ಡಾ.ಚಂದ್ರಶೇಖರ ಗೌಡ ಪಾಟೀಲ್, ಪ್ರಮುಖರಾದ ಡಾ. ಶರತ್ಚಂದ್ರ ಪಾಟೀಲ್, ಡಾ. ಸಿದ್ದಣ್ಣ ಗೌಡ, ಡಾ.ಸುನಂದಾ, ಡಾ. ಸಿದ್ದಾರ್ಥ, ಡಾ. ಅಮರನಾಥ್ ಪಾಶಾಪುರೆ, ಡಾ. ಪೂಜಾ ಮಡಕಿ, ಡಾ. ಪ್ರಸನ್ನ ಕುಮಾರಿ, ಡಾ. ಡಾ. ಷಣ್ಮುಖ್ ಜಮ್ಮೆಟ್ಟಿ, ಸುರೇಶ್ ಶಿಗ್ಲಿ, ಸೇರಿದಂತೆ ಇತರರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)